ಸಂಪುಟ: ೦೭/ ಸಂಚಿಕೆ: ೨೧೭/ ರವಿವಾರ ದಿನಾಂಕ : ೧೯-೧೦-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 217/SUNDAY Date : 19-10-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00



## ರಾಜ್ಯದಲ್ಲಿ ಹತ್ತು ದಿನಗಳ ಕಾಲ ಮಳೆ ಸಾಧ್ಯತೆ

**ಬೆಂಗಳೂರು:** ಅರಬ್ಬಿ ಸಮುದ್ರದಲ್ಲಿ ವಾಯುಭಾರ ಕುಸಿತವಾಗಿ ಮಾರ್ಪಾಡಾಗುವ ಲಕ್ಷಣಗಳಿದ್ದು, ಮುಂದಿನ ಹತ್ತು ದಿನಗಳ ಕಾಲ ರಾಜ್ಯದಲ್ಲಿ ಮಳೆಯಾಗುವ ಸಾಧ್ಯತೆ ಇದೆ. ಅ.24ರಿಂದ ದಕ್ಷಿಣ ಒಳನಾಡು, ಮಲೆನಾಡು ಹಾಗೂ ಕರಾವಳಿ ಜಿಲ್ಲೆಗಳಲ್ಲಿ ಉತ್ತಮ ಮಳೆಯ ಸೂಚನೆಗಳಿವೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳ ಅಲ್ಲಲ್ಲಿ ಮಧ್ಯಾಹ್ನ ನಂತರ, ಸಂಜೆ, ರಾತ್ರಿ ಗುಡುಗು ಸಹಿತ ಉತ್ತಮ ಮಳೆಯ ಮುನ್ಸೂಚನೆ ಇದೆ. ಉತ್ತರ ಕನ್ನಡ, ಕೊಡಗು, ಹಾಸನ, ಚಿಕ್ಕಮಗಳೂರು ಹಾಗೂ ಶಿವಮೊಗ್ಗ ಜಿಲ್ಲೆಗಳ ಅಲ್ಲಲ್ಲಿ ಮಧ್ಯಾಹ್ನ ನಂತರ, ಸಂಜೆ, ರಾತ್ರಿ ಗುಡುಗು ಸಹಿತ ಉತ್ತಮ ಮಳೆಯ ಮುನ್ಸೂಚನೆ ಇದೆ ಎಂದು ಹೇಳಿದೆ. ಉತ್ತರ ಒಳನಾಡಿನ ಬಹುತೇಕ ಭಾಗಗಳಲ್ಲಿ ಬಿಸಿಲು ಹಾಗೂ ಅಲ್ಲಲ್ಲಿ ಸಣ್ಣ ಪ್ರಮಾಣದ ಮೋಡದ ವಾತಾವರಣದ ಮುನ್ಸೂಚನೆ ಇದೆ. ಹಾವೇರಿ ಹಾಗೂ ಧಾರವಾಡ ಜಿಲ್ಲೆಗಳ ಒಂದೆರಡು ಭಾಗಗಳಲ್ಲಿ ಸಾಮಾನ್ಯ ಮಳೆಯ ಸಾಧ್ಯತೆ ಇದೆ. ದಕ್ಷಿಣ ಒಳನಾಡಿನ ಮೈಸೂರು, ಚಾಮರಾಜನಗರ, ಮಂಡ್ಯ, ರಾಮನಗರ, ಬೆಂಗಳೂರು ಗ್ರಾಮಾಂತರ ಹಾಗೂ ನಗರ, ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು ಜಿಲ್ಲೆಗಳಲ್ಲಿ ಅಲ್ಲಲ್ಲಿ ರಾತ್ರಿ ಗುಡುಗು ಗುಡುಗು ಸಹಿತ ಉತ್ತಮ ಮಳೆಯ ಮುನ್ಸೂಚನೆ ಇದೆ ಎಂದು ತಿಳಿಸಿದೆ.

## ಎಲ್ಲರಿಗೂ ಶಿಕ್ಷಣ ದೊರೆತರೆ ಸಮ ಸಮಾಜ ನಿರ್ಮಾಣ

**ಮೈಸೂರು:** ವಿದ್ಯೆ ಯಾರೊಬ್ಬರ ಸ್ವತ್ತಲ್ಲ. ಎಲ್ಲರಿಗೂ ಸಮಾನ ಅವಕಾಶಗಳು ದೊರೆತಾಗ ಮಾತ್ರ ಸಮ ಸಮಾಜದ ನಿರ್ಮಾಣ ಮಾಡಲು ಸಾಧ್ಯ. ಎಲ್ಲರೂ ಶಿಕ್ಷಣ ಪಡೆಯಬೇಕು. ಸಮಾನ ಅವಕಾಶಗಳನ್ನು ನೀಡಿ ಎಲ್ಲರಿಗೂ ಶಕ್ತಿ ನೀಡಲು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.

ಶನಿವಾರ ಮಾನಸ ಗಂಗೋತ್ರಿಯ ಡಾ. ಬಿ. ಆರ್. ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರದ ವಿಶ್ವ ಜ್ಞಾನಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ರಜತ ಮಹೋತ್ಸವ ಹಾಗೂ ನೂತನ ಜ್ಞಾನ ದರ್ಶನ ಕಟ್ಟಡದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು. ಅಂಬೇಡ್ಕರ್ ಅವರು ವಿಶ್ವ ಜ್ಞಾನಿಗಳಾಗಿದ್ದರು. ಆದ್ದರಿಂದ, ವಿಶ್ವಜ್ಞಾನಿ ಅಂಬೇಡ್ಕರ್ ಸಭಾಂಗಣ ಎಂದು ನಿರ್ದಿಷ್ಟವಾಗಿ ಬರೆಯಲು ಸಲಹೆ ನೀಡಿದ್ದೇನೆ. ಸಮಾಜದಲ್ಲಿ ಎಲ್ಲರಿಗೂ ಸಮಾನ ಅವಕಾಶಗಳು ಇರಲಿಲ್ಲ. ಆದ್ದರಿಂದ ಸಮಾಜದಲ್ಲಿ ಅಸಮಾನತೆ ನಿರ್ಮಾಣ ಆಯಿತು. ಅಂಬೇಡ್ಕರ್ ಅವರು ತಾವು ಕಲಿತ ವಿದ್ಯೆಯನ್ನು ಸಮಾಜದ ಒಳಿತಿಗಾಗಿ ಬಳಕೆ ಮಾಡಿದ್ದಾರೆ ಎಂದರು.

ಬಾಬಾ ಸಾಹೇಬ್ ಸ್ಕೂಲ್ ಆಫ್ ಎಕನಾಮಿಕ್ಸ್ ಅನ್ನು ಸ್ಥಾಪನೆ ಮಾಡಿದ್ದೇನೆ. ಎಲ್ಲಿಯವರೆಗೆ ಜಾತಿ ವ್ಯವಸ್ಥೆ ಇರುತ್ತದೆಯೋ ಅಲ್ಲಿಯವರೆಗೆ ಮೀಸಲಾತಿ ಇರಬೇಕು. ಜಾತಿ ವ್ಯವಸ್ಥೆ ಇರುವವರೆಗೆ ಸಮಾನತೆ ಬರಲು ಸಾಧ್ಯವಿಲ್ಲ. ಆದ್ದರಿಂದ ಜಾತಿ ವ್ಯವಸ್ಥೆಯನ್ನು ತೊಡೆದು ಹಾಕಬೇಕು. ಜಾತಿ ವ್ಯವಸ್ಥೆ ಜಡತ್ವದಿಂದ ಕೂಡಿದೆ. ಅದಕ್ಕೆ ಚಲನೆ ಇಲ್ಲ. ಇದು ಆಳವಾಗಿ ಬೇರು ಬಿಟ್ಟಿದೆ. ಬಸವಣ್ಣ ಅವರು ಜಾತಿ ವ್ಯವಸ್ಥೆ ತೊಡೆದು ಹಾಕುವಂತೆ 850 ವರ್ಷಗಳ ಹಿಂದೆಯೇ ಹೇಳಿದ್ದರು. ಆದರೂ ಅದು ಇನ್ನೂ ಸಾಧ್ಯವಾಗಿಲ್ಲ. ಮೇಲು ಕೀಳು, ಬಡವ ಬಲ್ಲಿದ ಎಂಬ ಅಸಮಾನತೆ ಇನ್ನೂ ಹಾಗೆಯೇ ಇದೆ. ಮುಖ್ಯ ನ್ಯಾಯಮೂರ್ತಿಗಳ ಮೇಲೆ ಶೂ ಎಸೆಯುವ ಜಾತಿ ವ್ಯವಸ್ಥೆ ಇನ್ನೂ ಇದೆ, ಇದು ತಲೆ ತಗ್ಗಿಸುವಂತಹ ಸಂಗತಿ. ನಾನು ಅಂಬೇಡ್ಕರ್ ವಾದದಲ್ಲಿ, ಬಸವಣ್ಣನವರ ತತ್ವದಲ್ಲಿ, ಗೌತಮ ಬುದ್ಧ ಅವರ ವಿಚಾರಗಳಲ್ಲಿ ನಂಬಿಕೆ ಇಟ್ಟುಕೊಂಡಿದ್ದೇನೆ. ನಾವು ಸ್ವಾಭಿಮಾನಿಗಳು ಆಗಬೇಕು.




ಗುಲಾಮಗಿರಿಯನ್ನು ತೊಡೆದು ಹಾಕಬೇಕು ಎಂದರು.

ಮೈಸೂರು ವಿವಿ ವಿಶ್ವದ ಶ್ರೇಷ್ಠ ವಿಶ್ವ ವಿದ್ಯಾಲಯಗಳಲ್ಲಿ ಒಂದು: ಕರ್ನಾಟಕದಲ್ಲಿ ಅಂಬೇಡ್ಕರ್ ಹೆಜ್ಜೆ ಗುರುತುಗಳು ಸಾಕ್ಷ್ಯ ಚಿತ್ರವನ್ನು ಸಮಾಜ ಕಲ್ಯಾಣ ಇಲಾಖೆಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಹೆಚ್. ಸಿ. ಮಹದೇವಪ್ಪ ಅವರು ಬಿಡುಗಡೆ ಮಾಡಿದರು. ನಂತರ ಮಾತನಾಡಿದ ಅವರು, ಮೈಸೂರು ವಿಶ್ವವಿದ್ಯಾಲಯ ವಿಶ್ವದ ಶ್ರೇಷ್ಠ ವಿಶ್ವ ವಿದ್ಯಾಲಯಗಳಲ್ಲಿ ಒಂದಾಗಿದೆ. ಇದರಲ್ಲಿ ದೇಶದ ಮೊದಲ ರಾಷ್ಟ್ರಪತಿ ಸರ್ವಪಲ್ಲಿ ರಾಧಾಕೃಷ್ಣನ್, ರಾಷ್ಟ್ರಕವಿ ಕುವೆಂಪು ಅವರು ಸಹ ಅಧ್ಯಯನ ಮಾಡಿದ್ದಾರೆ ಎಂದು ತಿಳಿಸಿದರು.

ವಿಶ್ವವಿದ್ಯಾನಿಲಯ ಚಿಂತನೆಗಳ ಚಿಲುಮೆ. ಕುವೆಂಪು ಅವರು ಮೈಸೂರು ವಿಶ್ವ ವಿದ್ಯಾಲಯದ ಕುಲಪತಿಗಳಾಗಿದ್ದ ಸಂದರ್ಭದಲ್ಲಿ ವಿಶ್ವ ವಿದ್ಯಾಲಯಕ್ಕೆ ಅನೇಕ ಅಭಿವೃದ್ಧಿ ಕೇಂದ್ರಗಳನ್ನು ಸ್ಥಾಪನೆ ಮಾಡಿ, ಜ್ಞಾನಾರ್ಜನೆಗೆ ಹೆಚ್ಚಿನ ಒತ್ತು ನೀಡಿದರು. ವಿಶ್ವ ವಿದ್ಯಾನಿಲಯಗಳು ಸಮ ಸಮಾಜದ ನಿರ್ಮಾಣ ಮಾಡುವ ಜ್ಞಾನ ಕಣಜಗಳಾಗಿ ಬೆಳೆಯಬೇಕು. ಲಾರ್ಡ್ ಮೌಂಟ್ ಬ್ಯಾಟನ್ ಅವರು ಗಾಂಧೀಜಿಯವರನ್ನು ಕುರಿತು ನಾನು ಭಾರತದಲ್ಲಿ ಒಬ್ಬ ದೇವರನ್ನು ನೋಡಿದ್ದೇನೆ ಎಂದು ಹೇಳಿದ್ದಾರೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ ಹರೀಶ್ ಗೌಡ, ವಿಧಾನ ಪರಿಷತ್ ಸದಸ್ಯರಾದ ತಿಮ್ಮಯ್ಯ, ಕೆ. ಶಿವಕುಮಾರ್, ಜಿಲ್ಲಾಧಿಕಾರಿಗಳಾದ ಜಿ ಲಕ್ಷ್ಮೀಕಾಂತ ರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಾದ ಎಸ್. ಯುಕೇಶ್ ಕುಮಾರ್, ಮೈಸೂರು ವಿಶ್ವ ವಿದ್ಯಾನಿಲಯದ ಕುಲ ಸಚಿವರಾದ ಎಂ. ಕೆ. ಸವಿತಾ ಅವರು ಸೇರಿದಂತೆ ಸಿಂಡಿಕೇಟ್ ಸದಸ್ಯರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ನಮ್ಮದು ಶ್ರೇಷ್ಠ ಸಂವಿಧಾನ

ಜನವರಿ 26, 1950 ರಂದು ಸಂವಿಧಾನ ಜಾರಿಗೆ ಬಂತು. ಅಂದು ನಾವು ವೈರುಧ್ಯತೆ ಇರುವ ಸಮಾಜಕ್ಕೆ ಕಾಲು ಇಡುತ್ತೇವೆ ಎಂದು ಸಂವಿಧಾನ ಅಂಗೀಕಾರ ಸಭೆಯಲ್ಲಿ ತಿಳಿಸಿದ್ದರು. ಇಂದು ಸಹ ಸಮಾಜದಲ್ಲಿ ವೈರುಧ್ಯತೆ ಇದೆ. ಆದರೆ ಇಂದು ಸ್ವಲ್ಪ ಕಡಿಮೆ ಆಗಿದೆ. 10 ಸಂಪುಟಗಳಲ್ಲಿ ಇರುವ ಭಾರತ ಸಂವಿಧಾನವನ್ನು ಕನ್ನಡಕ್ಕೆ ತರ್ಜುಮೆ ಮಾಡಿಸಿದ್ದೇನೆ. ಎಲ್ಲರೂ ಅದನ್ನು ಓದಬೇಕು. ಅಂಬೇಡ್ಕರ್ ಅವರು ಪ್ರಪಂಚದ ಎಲ್ಲಾ ದೇಶಗಳ ಸಂವಿಧಾನವನ್ನು ಓದಿ ನಮ್ಮ ದೇಶಕ್ಕೆ ಅಗತ್ಯವಾದ ಸಂವಿಧಾನವನ್ನು ರಚನೆ ಮಾಡಿ ನೀಡಿದ್ದಾರೆ. ನಮ್ಮದು ಶ್ರೇಷ್ಠ ಸಂವಿಧಾನ. ಇದನ್ನು ಉಳಿಸಿ ಬೆಳೆಸುವುದು ನಮ್ಮೆಲ್ಲರ ಜವಾಬ್ದಾರಿ ಎಂದು ತಿಳಿಸಿದರು.

## ಜಿಎಸ್‌ಟಿ ಪರಿಷ್ಕರಣೆ ಜನರಿಗೆ ಸಿಕ್ಕಿದ್ದೇನು?

**ನವದೆಹಲಿ:** ಕೇಂದ್ರ ಸಚಿವರಾದ ನಿರ್ಮಲಾ ಸೀತಾರಾಮನ್, ಪಿಯೂಷ್ ಗೋಯಲ್ ಮತ್ತು ಅಶ್ವಿನಿ ವೈಷ್ಣವ್ ಅವರು ಇಂದು ಜಂಟಿ ಪತ್ರಿಕಾಗೋಷ್ಠಿ ನಡೆಸಿ, ಜಿಎಸ್‌ಟಿ ಉಳಿಕೆ ಉತ್ಸವದ ಅಡಿಯಲ್ಲಿ ಪ್ರಮುಖ ಬೆಳವಣಿಗೆಗಳನ್ನು ಬಹಿರಂಗಪಡಿಸಿದರು. ಜಿಎಸ್‌ಟಿ ದರ ಕಡಿತಗಳು ಗ್ರಾಹಕರಿಗೆ ನೇರವಾಗಿ ಪ್ರಯೋಜನವನ್ನು ನೀಡುತ್ತಿವೆ. ತೆರಿಗೆ ಸುಧಾರಣೆಗಳಿಂದ ಅಗತ್ಯ ಸರಕುಗಳು ಮತ್ತು ಸೇವೆಗಳ ಮೇಲಿನ ವೆಚ್ಚ ಹೇಗೆ ಕಡಿಮೆಯಾಗಿದೆ. ದೇಶೀಯ ಉತ್ಪಾದನೆಯ ವೇಗ, ಉದ್ಯೋಗ ಸೃಷ್ಟಿಗೆ ಹೇಗೆ ಉತ್ತೇಜನ ನೀಡುತ್ತಿದೆ ಎಂಬ ಬಗ್ಗೆ ಮಾಹಿತಿ ನೀಡಿದರು.

ಈ ಕ್ರಮವು ದೇಶದ ಸುಧಾರಣೆ, ಆರ್ಥಿಕ ಆವೇಗಕ್ಕೆ ಬಲವಾದ ವಿಶ್ವಾಸ ತುಂಬಿದೆ. ಈ ಸುಧಾರಣೆಗಳು 20 ಲಕ್ಷ ಕೋಟಿ ರೂಪಾಯಿ ಹೆಚ್ಚುವರಿ ಬಳಕೆಯನ್ನು ಹೆಚ್ಚಿಸುವ ಸಾಧ್ಯತೆಯಿದೆ ಎಂದು ಸರ್ಕಾರ ಅಂದಾಜಿಸಿದೆ.

ಜಿಎಸ್‌ಟಿ ದರ ಪರಿಷ್ಕರಣೆಯ ಬಗ್ಗೆ ವಿರೋಧ ಪಕ್ಷಗಳ ಟೀಕೆಗೆ ಪ್ರತಿಕ್ರಿಯಿಸಿದ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು, ಜಿಎಸ್‌ಟಿ ರೂಪಿಸಿದ್ದು, ಅದನ್ನು ಯಶಸ್ವಿಯಾಗಿ ಜಾರಿಗೆ ತಂದವರು ನಾವೇ. ವಿರೋಧ ಪಕ್ಷಗಳು ಜಿಎಸ್‌ಟಿಯನ್ನು ಪರಿಚಯಿಸಲಿಲ್ಲ. ಅದನ್ನು ಪ್ರಯತ್ನಿಸುವ ಧೈರ್ಯವನ್ನೂ ಹೊಂದಿರಲಿಲ್ಲ. ನಾವು ಇಂದು ಮಾಡಿದ್ದು ಬರಿ ಪರಿಷ್ಕರಣೆಯಲ್ಲ. ಯೋಜಿತ ನಿರ್ಧಾರ. ಜನರಿಗೆ ಹೆಚ್ಚಿನ ಪ್ರಯೋಜನಗಳನ್ನು ರವಾನಿಸುವ ಗುರಿಯೊಂದಿಗೆ ಕೇಂದ್ರ ಸರ್ಕಾರ ಮತ್ತು ಜಿಎಸ್‌ಟಿ ಕೌನ್ಸಿಲ್ ನಡುವಿನ ಸಹಕಾರದ ಮನೋಭಾವವನ್ನು ಇದು ಪ್ರತಿಬಿಂಬಿಸುತ್ತದೆ ಎಂದರು.

**ಮುಂದಿನ ಪೀಳಿಗೆಗೆ ಜಿಎಸ್‌ಟಿ ಪರಿಷ್ಕರಣೆ ಒಳಿತು:** ಗ್ರಾಹಕರಿಗೆ ಅನುಕೂಲವಾಗುವಂತೆ ತೆರಿಗೆ ದರಗಳನ್ನು ಕಡಿಮೆ ಮಾಡಲಾಗಿದೆ. ಸೆಪ್ಟೆಂಬರ್ 22 ರಿಂದ, ನಾವು ಎಲ್ಲಾ ವಸ್ತುಗಳ ಮೇಲೆ ವಲಯ ಮಟ್ಟಗಳಿಂದ ಮಾಹಿತಿಯನ್ನು ಪಡೆಯುತ್ತಿದ್ದೇವೆ. ಆದಾಗ್ಯೂ, ಪರಿಷ್ಕೃತ ತೆರಿಗೆ ರಚನೆಯ ಪ್ರಯೋಜನಗಳು ಅಂತಿಮ ಗ್ರಾಹಕರಿಗೆ ತಲುಪುತ್ತಿವೆ ಎಂದು ಖಚಿತಪಡಿಸಿಕೊಳ್ಳಲು ನಾವು 54 ಉತ್ಪನ್ನಗಳ ಬೆಲೆಗಳನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದೇವೆ. ಮುಂದಿನ ಪೀಳಿಗೆಯ ಜಿಎಸ್‌ಟಿ ಪ್ರಯೋಜನಗಳನ್ನು ಎಲ್ಲಾ 54 ವಸ್ತುಗಳಲ್ಲಿ ಸಂಪೂರ್ಣವಾಗಿ ರವಾನಿಸಲಾಗಿದೆ. ಹಣಕಾಸು ಸಚಿವಾಲಯದ ಕಂದಾಯ ಇಲಾಖೆಯು ಮುಂದಿನ ಪೀಳಿಗೆಯ ಜಿಎಸ್‌ಟಿ ಪರಿವರ್ತನೆಯ ಅವಧಿಯಲ್ಲಿ ಆಯ್ದ 54 ಉತ್ಪನ್ನಗಳನ್ನು ಸಕ್ರಿಯವಾಗಿ ಮೇಲ್ವಿಚಾರಣೆ ಮಾಡುತ್ತಿದೆ ಎಂದು ತಿಳಿಸಿದರು.



**95,75,935 ಆಸ್ತಿಗಳಿಗೆ ಆಸ್ತಿ ಪ್ರಮಾಣ ಪತ್ರ: ಸಚಿವ ಪ್ರಿಯಾಂಕ್ ಖರ್ಗೆ**

## ಗ್ರಾ.ಪಂ ವ್ಯಾಪ್ತಿಯಲ್ಲಿ ಇ-ಸ್ವತ್ತು ಸೌಲಭ್ಯ

**ಬೆಂಗಳೂರು:** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ಕ್ಕೆ ತಿದ್ದುಪಡಿ ತರುವ ಮೂಲಕ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿತರಿಸಲಾಗುವ ನಿರಾಕ್ಷೇಪಣಾ (ಓಔಅ) ಪರವಾನಗಿ, ತೆರಿಗೆಗಳು, ಶುಲ್ಕ ಹಾಗೂ ದರಗಳನ್ನು ವೈಜ್ಞಾನಿಕವಾಗಿ ನಿಗದಿಮಾಡಿದ್ದು, ಆಸ್ತಿಗಳಿಗೆ ಇ-ಸ್ವತ್ತು ವಿತರಿಸಲಾಗುವುದು" ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ಕ್ಕೆ ತಿದ್ದುಪಡಿ ಸಂಬಂಧ ಕರಡು ಅಧಿಸೂಚನೆ ಹೊರಡಿಸಲಾಗಿದ್ದು, ಈ ಬಗ್ಗೆ ಮಾಹಿತಿ ಹಂಚಿಕೊಂಡಿರುವ ಸಚಿವ ಪ್ರಿಯಾಂಕ ಖರ್ಗೆ, "ಈ ನಿಯಮಗಳ ಜಾರಿಯಿಂದ 95,75,935 ಆಸ್ತಿಗಳಿಗೆ ಆಸ್ತಿ ಪ್ರಮಾಣ ಪತ್ರ ನೀಡಲು ಅವಕಾಶ ಕಲ್ಪಿಸಲಾಗುತ್ತಿದೆ. ನಿಯಮಗಳಂತೆ ಹದಿನೈದು ದಿನಗಳೊಳಗಾಗಿ ತಂತ್ರಾಂಶದಲ್ಲಿ ತಾಂತ್ರಿಕ ಬದಲಾವಣೆಗಳನ್ನು ತಂದು ಗ್ರಾಮೀಣ ಜನರಿಗೆ ಸೌಲಭ್ಯವನ್ನು ಒದಗಿಸಲಾಗುವುದು" ಎಂದು ತಿಳಿಸಿದ್ದಾರೆ.

"ನೂತನ ನಿಯಮಗಳಲ್ಲಿ ತೆರಿಗೆ ಲೆಕ್ಕಚಾರ ಪ್ರಕ್ರಿಯೆಯನ್ನು ಸರಳೀಕರಣಗೊಳಿಸಿದ್ದು, ಇ – ಸ್ವತ್ತು ನಮೂನೆ ವಿತರಿಸಲು ನಿಗದಿತ ಕಾಲಾವಧಿಯನ್ನು 45 ದಿನಗಳಿಂದ 15 ದಿನಗಳಿಗೆ ಕಡಿತಗೊಳಿಸಲಾಗಿದೆ. ನಿಗದಿತ ಅವಧಿಯಲ್ಲಿ ಸಂಬಂಧಿಸಿದ ಅಧಿಕಾರಿಗಳು ಅನುಮೋದನೆ ನೀಡದಿದ್ದಲ್ಲಿ ಸ್ವಂಚಾಲಿತ ಅನುಮೋದನೆಗೆ ನಿಯಮಗಳಲ್ಲಿ ಅವಕಾಶ



ಕಲ್ಪಿಸಲಾಗಿದೆ" ಎಂದು ಸಚಿವರು ಹೇಳಿದ್ದಾರೆ.

"ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ ್ ಅಧಿನಿಯಮ 1993ರನ್ನು 7–04–2025 ರಂದು ಅಧಿಸೂಚಿಸಿ ಪ್ರಕರಣ 199 (ಬಿ) ಹಾಗೂ ಪ್ರಕರಣ 199(ಸಿ) ಅನ್ನು ಸೇರಿಸಲಾಗಿದೆ. ಪ್ರಕರಣ 199(ಬಿ) ಸ್ವತ್ತುಗಳಿಗೆ ಖಾತಾ ಅಥವಾ ಪಿಐಡಿ ನೀಡುವ ಕುರಿತಂತೆ ಹಾಗೂ ಪ್ರಕರಣ 199(ಸಿ) ಕಟ್ಟಡ ಮತ್ತು ಪರಿವರ್ತನೆಯಾಗದೇ ಇರುವ ಭೂಮಿ ಅಥವಾ ಪರಿವರ್ತನೆಯಾದ ಭೂಮಿ ಆದರೆ ಕಂದಾಯ ಭೂಮಿಯಲ್ಲಿನ ಅನುಮೋದಿತವಲ್ಲದ ಬಡಾವಣೆಯ ಮೇಲಿನ ತೆರಿಗೆಗಳ ಬಗ್ಗೆ ಉಲ್ಲೇಖಿಸಲಾಗಿದೆ.

"ಈ ತಿದ್ದುಪಡಿಯನ್ನು ಆಧರಿಸಿ ಅಸ್ತಿತ್ವದಲ್ಲಿದ್ದ ತೆರಿಗೆ ನಿಯಮಗಳು 2021ನ್ನು ನಿರಸನಗೊಳಿಸಿ ಹೊಸದಾಗಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025ನ್ನು ಅಧಿಸೂಚಿಸಲಾಗಿದೆ. ಈ ನಿಯಮಗಳ ಜಾರಿಯಿಂದ ರಾಜ್ಯಾದ್ಯಂತ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಇ – ಸ್ವತ್ತು ಅಭಿಯಾನವನ್ನು ಯಶಸ್ವಿಯಾಗಿ ಕೈಗೊಳ್ಳಲಾಗುವುದು" ಎಂದೂ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

**ಹಳೆಯ ಸೇನಾ ವಿಮಾನ ನಿಲ್ದಾಣಕ್ಕೆ ಬಾಂಗ್ಲಾ ಸೇನಾ ಮುಖ್ಯಸ್ಥ ಭೇಟಿ**

## ಢಾಕಾದಲ್ಲಿ ಭಾರತೀಯ ಸೇನಾ ಗುಪ್ತಚರ ಅಧಿಕಾರಿಗಳ ಸಭೆ

**ನವದೆಹಲಿ:** ಬಾಂಗ್ಲಾದೇಶಕ್ಕೆ ಭಾರತೀಯ ಸೇನಾ ಗುಪ್ತಚರ ಅಧಿಕಾರಿಗಳು ತೆರಳಿದ್ದು, ಸದ್ದಿಲ್ಲದೇ ಅಜೆಂಡಾ, ಸಭೆಗಳನ್ನು ಪೂರ್ಣಗೊಳಿಸಿ ಭಾರತಕ್ಕೆ ಮರಳಿದ್ದಾರೆ.

ಅತ್ತ ಭಾರತೀಯ ಸೇನಾ ಗುಪ್ತಚರ ಅಧಿಕಾರಿಗಳು ಬಾಂಗ್ಲಾದಿಂದ ವಾಪಸ್ಸಾಗಿದ್ದು ಬಾಂಗ್ಲಾದೇಶ ಸೇನಾ ಮುಖ್ಯಸ್ಥ ಜನರಲ್ ವಾಕರ್–ಉಜ್–ಜಮಾನ್ ಬಾಂಗ್ಲಾದೇಶ–ಭಾರತ ಗಡಿಗೆ ಹೊಂದಿಕೊಂಡಿರುವ ಎರಡು ಜಿಲ್ಲೆಗಳಲ್ಲಿರುವ ಎರಡು ಹಳೆಯ ವಾಯುನೆಲೆಗಳಿಗೆ ಅನಿರೀಕ್ಷಿತ ಭೇಟಿ ನೀಡಿದ್ದಾರೆ.

ಭಾರತದ ಮೂವರು ಸಂದರ್ಶಕರಿಗೆ ಭಾರತೀಯ ಹೈಕಮಿಷನರ್ ಪ್ರಣಯ್ ವರ್ಮಾ, ಉಪ ಹೈಕಮಿಷನರ್ ಪವನ್ ಕುಮಾರ್ ಬಾಧೆ ಮತ್ತು ಇತರ ಅಧಿಕಾರಿಗಳು ಮಿಷನ್‌ನ ಬರಿಧಾರಾ ಸಂಕೀರ್ಣದಲ್ಲಿ ಭೋಜನ ಕೂಟವನ್ನು ಆಯೋಜಿಸಿದ್ದರು. ಬಾಂಗ್ಲಾಗೆ ಭೇಟಿ ನೀಡಿದ್ದ ಸೇನಾ ಗುಪ್ತಚರ ಅಧಿಕಾರಿಗಳು ಅಚ್ಚರಿಯ ಬೆಳವಣಿಗೆಯೊಂದರಲ್ಲಿ ಬಾಂಗ್ಲಾದೇಶದಲ್ಲಿ ತಮ್ಮ ವಾಸ್ತವ್ಯವನ್ನು ಒಂದು ದಿನದವರೆಗೆ ವಿಸ್ತರಿಸಿದರು. ಅವರು ಅಕ್ಟೋಬರ್ 16 ರಂದು ನವದೆಹಲಿಗೆ ಹಿಂತಿರುಗಬೇಕಿತ್ತು.

ಜನರಲ್ ಜಮಾನ್ ಮತ್ತು ಬಾಂಗ್ಲಾದೇಶ ಸೇನೆಯ ಅಧೀನ ಸಹೋದ್ಯೋಗಿಗಳ ತಂಡ ಮೂರು ಹೆಲಿಕಾಪ್ಟರ್‌ಗಳಲ್ಲಿ ಹಾರಾಟ ನಡೆಸಿ, ಮೊದಲು




ಢಾಕಾದಿಂದ ಲಾಲ್ಮೋನಿರ್ಹತ್‌ಗೆ ಕರೆದೊಯ್ದರು. ನಂತರ ಠಾಕೂರ್ಗಾಂವ್‌ಗೆ ಪ್ರವಾಸ ಮಾಡಿದರು, ಅಲ್ಲಿ ಅವರು ಎರಡನೇ ಮಹಾಯುದ್ಧದ ಅವಧಿಯ ಎರಡು ವಾಯುನೆಲೆಗಳನ್ನು ಪರಿಶೀಲಿಸಿದರು. ಲಾಲ್ಮೋನಿರ್ಹತ್ ಮತ್ತು ಠಾಕೂರ್ಗಾಂವ್ ಭಾರತದ ಪಶ್ಚಿಮ ಬಂಗಾಳದ ಗಡಿಯಲ್ಲಿರುವ ಜಿಲ್ಲೆಗಳಾಗಿವೆ.

ಅಕ್ಟೋಬರ್ 14 ರಂದು ಭಾರತೀಯ ತಂಡದ ಆಗಮನದ ಬಗ್ಗೆ ಬಾಂಗ್ಲಾದೇಶದಿಂದ ಗೊಂದಲಮಯ ಪ್ರತಿಕ್ರಿಯೆ ಬಂದಿತ್ತಾದರೂ ನಂತರದಲ್ಲಿ ಭಾರತೀಯ ತಂಡ ಬಾಂಗ್ಲಾದೇಶ ಸೇನೆಯ ಹಲವಾರು ಘಟಕಗಳು, ಸಶಸ್ತ್ರ ಪಡೆಗಳ ವಿಭಾಗದ ಕಾರ್ಯಾಚರಣೆ ಮತ್ತು ಯೋಜನೆ ಮತ್ತು ಗುಪ್ತಚರ ನಿರ್ದೇಶನಾಲಯಗಳು, ಪಡೆಗಳ ಗುಪ್ತಚರ ನಿರ್ದೇಶನಾಲಯ, ಸೇನಾ ವಿಮಾನಯಾನ ಗುಂಪು, ಅಡ್ಜುಟಂಟ್ ಜನರಲ್ ಮತ್ತು ಕ್ವಾರ್ಟರ್ ಮಾಸ್ಟರ್ ಜನರಲ್ ಶಾಖೆಗಳು ಮತ್ತು ಸೇನಾ ಸರಬರಾಜು ಘಟಕದೊಂದಿಗೆ ಸರಣಿ ಸಭೆಗಳನ್ನು ನಡೆಸಿತು.

## ಯಾವುದೇ ಸಂಸ್ಥೆ, ಸಂಘಟನೆ ಬ್ಯಾನ್ ಪ್ರಸ್ತಾವನೆ ಸರ್ಕಾರದ ಮುಂದಿಲ್ಲ

**ಬೆಳಗಾವಿ:** ರಾಜ್ಯದಲ್ಲಿ ಸರ್ಕಾರಿ ಸ್ಥಳಗಳಲ್ಲಿ ಆರ್‌ಎಸ್‌ಎಸ್ ಚಟುವಟಿಕೆ ನಿಷೇಧಕ್ಕೆ ಆಗ್ರಹ ವಿಚಾರವಾಗಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್ ಪ್ರತಿಕ್ರಿಯಿಸಿದ್ದು, "ಯಾವುದೇ ಸಂಘ, ಸಂಸ್ಥೆ ಮತ್ತು ಸಂಘಟನೆಗಳನ್ನು ಬ್ಯಾನ್ ಮಾಡುವ ಪ್ರಸ್ತಾವನೆ ಮತ್ತು ಚಿಂತನೆ ನಮ್ಮ ಸರ್ಕಾರದ ಮುಂದಿಲ್ಲ" ಎಂದು ಸ್ಪಷ್ಟಪಡಿಸಿದರು.



ಆರ್‌ಎಸ್‌ಎಸ್ ಸಂಘಟನೆ ರಿಜಿಸ್ಟರ್ ಆಗಿಲ್ಲ. ಹಾಗಾಗಿ, ಅದನ್ನು ಬ್ಯಾನ್ ಮಾಡಬೇಕೆಂಬ ಬಿ.ಕೆ. ಹರಿಪ್ರಸಾದ್ ಹೇಳಿಕೆ ಕುರಿತು ಬೆಳಗಾವಿಯಲ್ಲಿ ಮಾಧ್ಯಮದವರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, "ಬಿ.ಕೆ.ಹರಿಪ್ರಸಾದ್ ಅವರ ಅಭಿಪ್ರಾಯದ ಬಗ್ಗೆ ಅವರನ್ನೇ ನೀವು ಕೇಳಬೇಕು. ನಮ್ಮ ಸರ್ಕಾರದ ಮುಂದೆ ಅಂತಹ ಯಾವುದೇ ಚಿಂತನೆ ಇಲ್ಲ" ಎಂದು ಪುನರುಚ್ಚರಿಸಿದರು.

"ಪ್ರತಿ ವರ್ಷ ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನ ನಡೆಸುವುದು ಪದ್ಧತಿಯಾಗಿದೆ. ಇನ್ನು ಕೆಲವೇ ದಿನಗಳಲ್ಲಿ ಸಿದ್ಧತೆ ಕೈಗೊಳ್ಳಲಾಗುವುದು. ಔಪಚಾರಿಕ ನಿರ್ಧಾರ ತೆಗೆದುಕೊಂಡಿಲ್ಲ. ಅಲ್ಲದೇ ಇನ್ನೂ ದಿನಾಂಕ ಕೂಡ ನಿಗದಿ ಆಗಿಲ್ಲ. ಆದರೆ, ಪದ್ಧತಿಯಂತೆ ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನ ಮಾಡುವುದು ಸರ್ಕಾರದ ಚಿಂತನೆ ಆಗಿದೆ" ಎಂದರು.

ನವೆಂಬರ್ 1ರಂದು ಭುವನೇಶ್ವರಿ ದೇವಿಯನ್ನು ಗೌರವಿಸುತ್ತಾ, ಕರ್ನಾಟಕ ಏಕೀಕರಣ ಆಗಿರುವುದನ್ನು ವೈಭವದಿಂದ ಆಚರಣೆ ಮಾಡುವುದು ಕರ್ನಾಟಕದಲ್ಲಿರುವ ಎಲ್ಲರ ಕರ್ತವ್ಯವಾಗಿದೆ. ಆ ಕೆಲಸವನ್ನು ದಯವಿಟ್ಟು ಎಲ್ಲರೂ ಮಾಡಬೇಕು. ಅವತ್ತು ಭುವನವೇಶ್ವರಿ ದೇವಿಯ ಮೆರವಣಿಗೆ, ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮಗಳಿಗೆ ಎಲ್ಲರೂ ಸಹಕರಿಸಬೇಕು" ಎಂದು ಬೇರೆ ಭಾಷಿಕರಿಗೆ ಹೆಚ್.ಕೆ.ಪಾಟೀಲ್ ಕಿವಿಮಾತು ಹೇಳಿದರು

**ಚನ್ನಮ್ಮನ ಕಿತ್ತೂರ ಉತ್ಸವ-2025: ಮಾಧ್ಯಮ ಸಮನ್ವಯ ಸಮಿತಿ ಸಭೆ**

## ಉತ್ಸವದ ಯಶಸ್ಸಿಗೆ ಮಾಧ್ಯಮ ಪ್ರತಿನಿಧಿಗಳ ಪಾತ್ರ ಮಹತ್ವದ್ದು

**ಬೆಳಗಾವಿ:** ಸ್ವಾತಂತ್ರ್ಯದ ಬೆಳ್ಳಿಚುಕ್ಕಿ ಕಿತ್ತೂರು ಚನ್ನಮ್ಮ ಬ್ರಿಟಿಷರ ವಿರುದ್ಧದ ಯುದ್ಧದಲ್ಲಿ ಜಯಗಳಿಸಿದ ಐತಿಹಾಸಿಕ ಮಹತ್ವ ಹೊಂದಿರುವ ಕಿತ್ತೂರು ಉತ್ಸವವನ್ನು ಅದ್ದೂರಿಯಾಗಿ ಆಚರಿಸಲಾಗುತ್ತಿದೆ. ಉತ್ಸವಕ್ಕೆ ಹೆಚ್ಚಿನ ಪ್ರಚಾರ ನೀಡುವುದರ ಮೂಲಕ ಉತ್ಸವವನ್ನು ಯಶಸ್ವಿಗೊಳಸುವಲ್ಲಿ ಮಾಧ್ಯಮ ಪ್ರತಿನಿಧಿಗಳ ಪಾತ್ರ ಮಹತ್ವದಾಗಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಉಪನಿರ್ದೇಶಕರಾದ ಗುರುನಾಥ ಕಡಬೂರ ಅವರು ತಿಳಿಸಿದರು.

ಚನ್ನಮ್ಮನ ಕಿತ್ತೂರು ತಾಲೂಕು ಪಂಚಾಯತ ಸಭಾಂಗಣದಲ್ಲಿ ಶನಿವಾರ ಜರುಗಿದ ಮಾಧ್ಯಮ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಇದೇ ಅಕ್ಟೋಬರ 23, 24 ಹಾಗೂ 25 ರಂದು ಮೂರು ದಿನಗಳ ಕಾಲ ಜರುಗುವ ಚನ್ನಮ್ಮನ ಕಿತ್ತೂರು ಉತ್ಸವದ ಪ್ರತಿ ಕಾರ್ಯಕ್ರಮದ ಹೆಚ್ಚಿನ ಪ್ರಚಾರ ಆಗಬೇಕು. ಕಾರ್ಯಕ್ರಮದ ವರದಿಗಾಗಿ ಆಗಮಿಸುವಂತಹ ಮಾಧ್ಯಮ ಪ್ರತಿನಿಧಿಗಳಿಗೆ ಅಚ್ಚುಕಟ್ಟಾದ ಮಾಧ್ಯಮ ಕೇಂದ್ರ ತೆರೆಯಲಾಗುವುದು ಎಂದರು.

ಕಾರ್ಯಕ್ರಮದ ಮುಖ್ಯ ವೇದಿಕೆ ಮುಂಭಾಗದಲ್ಲಿ ಮಾಧ್ಯಮ ಪ್ರತಿನಿಧಿಗಳಿಗಾಗಿ ಪ್ರತ್ಯೇಕ ಆಸನದ ವ್ಯವಸ್ಥೆ ಮಾಡಲಾಗುವುದು. ಉತ್ಸವದ ವರದಿಗಾಗಿ ಆಗಮಿಸುವ ಮಾಧ್ಯಮ ಪ್ರತಿನಿಧಿಗಳಿಗೆ ನಿಯಮಾನುಸಾರ ಪಾಸ್



ಗಳನ್ನು ವಿತರಿಸಲಾಗುವುದು.

ಪ್ರತಿ ವರ್ಷದಂತೆ ಈ ಬಾರಿಯೂ ಉತ್ಸವಕ್ಕೆ ವ್ಯಾಪಕ ಪ್ರಚಾರ ನೀಡುವುದರ ಮೂಲಕ ಕಿತ್ತೂರಿನ ಗತವೈಭವವನ್ನು ಪ್ರತಿಯೊಬ್ಬರಿಗೂ ತಲುಪಿಸುವ ಜವಾಬ್ದಾರಿ ಮಾಧ್ಯಮ ಪ್ರತಿನಿಧಿಗಳ ಮೇಲಿದ್ದು, ತಮ್ಮ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸುವುದರ ಮೂಲಕ ಚನ್ನಮ್ಮನ ಕಿತ್ತೂರು ಉತ್ಸವ–2025 ಯಶಸ್ವಿಗೊಳಿಸಲು ವಾರ್ತಾ ಇಲಾಖೆ ಉಪನಿರ್ದೇಶಕರಾದ ಗುರುನಾಥ ಕಡಬೂರ ಅವರು ತಿಳಿಸಿದರು.

ಚನ್ನಮ್ಮನ ಕಿತ್ತೂರು ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ನಿಂಗಪ್ಪ ಮಸಳಿ ಅವರು ಮಾತನಾಡಿ, ಮೂರು ದಿನಗಳ ಕಾಲ ಜರುಗುವ ಉತ್ಸವವನ್ನು ಅಚ್ಚುಕಟ್ಟಾಗಿ ಆಚರಿಸಲು ಎಲ್ಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ. ಮಾಧ್ಯಮ ಪ್ರತಿನಿಧಿಗಳಾಗಿ ಸ್ಥಾಪಿಸಲಾಗುವ ಮಾಧ್ಯಮ ಕೇಂದ್ರದ ನಿರ್ವಹಣೆಗಾಗಿ ತಾಲೂಕು ಪಂಚಾಯತ ವತಿಯಿಂದ ತಂಡವನ್ನು ನಿಯೋಜಿಸಲಾಗುವುದು. ಮಾಧ್ಯಮ ಕೇಂದ್ರದಲ್ಲಿ ಏನಾದರೂ ಸಮಸ್ಯೆಗಳಿದ್ದರೆ ತ್ವರಿತವಾಗಿ ಪರಿಹರಿಸಲು ಕ್ರಮ ಜರುಗಿಸಲಾಗುವುದು ಎಂದರು.

ಕಿತ್ತೂರು ಚನ್ನಮ್ಮನ ಯಶೋಗಾಥೆಯನ್ನು ರಾಜ್ಯಾದ್ಯಂತ ಪಸರಿಸಲು ಪ್ರತಿ ಜಿಲ್ಲೆಯಲ್ಲಿಯೂ ಪರಿಣಾಮಕಾರಿಯಾದಂತಹ ಕಾರ್ಯಕ್ರಮಗಳನ್ನು ಆಯೋಜಿಸಬೇಕು; ವರದಿಗಾಗಿ ಆಗಮಿಸುವಂತಹ ಪತ್ರಕರ್ತರಿಗೆ ಅನುಕೂಲವಾಗುವಂತಹ ಆಸನಗಳ ವ್ಯವಸ್ಥೆ ಅಚ್ಚುಕಟ್ಟಾದ ಮಾಧ್ಯಮ ಕೇಂದ್ರದ ಸ್ಥಾಪನೆ ಸೇರಿದಂತೆ ವಿವಿಧ ಸಲಹೆಗಳನ್ನು ಸಭೆಗೆ ಆಗಮಿಸಿದ ಮಾಧ್ಯಮ ಪ್ರತಿನಿಧಿಗಳು ನೀಡಿದರು. ಸಭೆಯಲ್ಲಿ ತಾಲೂಕು ಪಂಚಾಯತ ಸಹಾಯಕ ನಿರ್ದೇಶಕರಾದ ಮಹಮ್ಮದ್ ಗೌಸ್, ವಾರ್ತಾ ಇಲಾಖೆಯ ವಿಜಯಕುಮಾರ್ ಬೆಟಗೇರಿ ಸೇರಿದಂತೆ ಮಾಧ್ಯಮ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಸರಕಾರಿ ಜಾಗದಲ್ಲಿ ಖಾಸಗಿ ಸಂಘ-ಸಂಸ್ಥೆಗಳ ಕಾರ್ಯಕ್ರಮಗಳಿಗೆ ಅನುಮತಿ ಕಡ್ಡಾಯ

**ಬೆಂಗಳೂರು:** ರಾಜ್ಯ ವ್ಯಾಪಿ ಖಾಸಗಿ ಸಂಘ ಸಂಸ್ಥೆಗಳು, ಸಂಘಟನೆಗಳು ಸರಕಾರಿ ಜಾಗ, ಆವರಣಗಳ ಬಳಕೆ ಹಾಗೂ ಕಾರ್ಯಕ್ರಮಗಳನ್ನು ನಡೆಸಲು ಸಂಬಂಧಿಸಿದ ಇಲಾಖೆಗಳಿಂದ ಪೂರ್ವಾನು ಮತಿ ಅನುಮತಿ ಪಡೆಯುವುದನ್ನು ಕಡ್ಡಾಯಗೊಳಿಸಿ ರಾಜ್ಯ ಸರಕಾರ ಆದೇಶ ಹೊರಡಿಸಿದ್ದು, ಸೂಕ್ತ ಮಾರ್ಗಸೂಚಿಯನ್ನು ತ್ವರಿತವಾಗಿ ಹೊರಡಿಸುವಂತೆ ಆಯಾ ಇಲಾಖೆಗಳಿಗೆ ಸೂಚಿಸಿದೆ.

ಸರಕಾರದ, ಸರಕಾರಿ ಸಾಮ್ಯದ ನಿಗಮ, ಮಂಡಳಿಗಳು, ಶಾಲಾ–ಕಾಲೇಜುಗಳು, ಅನುದಾನಿತ ಶಿಕ್ಷಣ ಸಂಸ್ಥೆಗಳು, ಉದ್ಯಾನವನಗಳು, ಆಟದ ಮೈದಾನಗಳು, ಸಾರ್ವಜನಿಕ ರಸ್ತೆಗಳು, ತೆರೆದ ಸ್ಥಳಗಳು ಮತ್ತು ಇತರ ಆಸ್ತಿಗಳು ನಾಗರಿಕರ ಸದ್ಬಳಕೆಗೆ ನಿರ್ದಿಷ್ಟಪಡಿಸಲಾಗಿದೆ. ಇವುಗಳನ್ನು ಸಾರ್ವಜನಿಕರು ಬಳಸಲು ಯಾವುದೇ ಅಡಚಣೆಗಳು, ಬೆದರಿಕೆಗಳು ಉದ್ಭವಿಸದಂತೆ ಕ್ರಮವಹಿಸುವುದು ಅತ್ಯಗತ್ಯವಾಗಿದೆ.

ಹಾಗೆಯೇ ಕಾನೂನು ಮತ್ತು ಸುವ್ಯವಸ್ಥೆ ಸಮಸ್ಯೆಗಳು, ಸಾರ್ವಜನಿಕರ ಸಾರ್ವತ್ರಿಕ ಅಸಮಾಧಾನ ನಿವಾರಿಸುವುದು ಸಹ ಅವಶ್ಯಕ. ಆದರೆ, ಸಾರ್ವಜನಿಕ ಸ್ಥಳ, ಸರಕಾರದ ಆಸ್ತಿಗಳಲ್ಲಿ ಖಾಸಗಿ ಸಂಸ್ಥೆಗಳು, ಸಂಘಗಳು ತಮ್ಮ ಚಟುವಟಿಕೆಗಳು, ಪ್ರಚಾರ, ತರಬೇತಿ, ಉತ್ಸವಗಳು ಹಾಗೂ ಸದಸ್ಯರ, ಬೆಂಬಲಿಗರ



ಸಭೆಗಳನ್ನು ನಡೆಸಲು ಸಂಬಂಧಿತ ಇಲಾಖೆಗಳಲ್ಲಿ ಮುಂಚಿತವಾಗಿ ಅನುಮತಿ ಪಡೆಯದೆ, ಅನೇಕ ಸಂದರ್ಭಗಳಲ್ಲಿ ಮಾಹಿತಿ ನೀಡದೆ ಬಳಸಿಕೊಳ್ಳುತ್ತಿರುವುದು ಕಂಡುಬಂದಿದೆ.

ಇಂತಹ ಕ್ರಿಯೆಗಳು ಅಕ್ರಮ ಪ್ರವೇಶ ಎಂದು ಪರಿಗಣಿಸಲ್ಪಡುತ್ತವೆ. ಜತೆಗೆ, ಸಾರ್ವಜನಿಕ ಸುರಕ್ಷತೆಗೆ ಗಂಭೀರ ಬೆದರಿಕೆಯನ್ನು ಉಂಟು ಮಾಡುತ್ತವೆ. ಈ ಕಾರಣದಿಂದ ಸರಕಾರದ ಯಾವುದೇ ಆಸ್ತಿ, ಸ್ಥಳದ ಬಳಕೆಯನ್ನು ಸಾರ್ವಜನಿಕ ಹಿತದೃಷ್ಟಿಯಿಂದ ನಿಯಂತ್ರಿಸುವ ಸಲುವಾಗಿ ಯಾವುದೇ ಸಂಘಟನೆ, ಸಂಸ್ಥೆ, ಸಂಘವು ಆಯಾ ಸಾರ್ವಜನಿಕ ಆಸ್ತಿ, ಸ್ಥಳದ ಮಾಲಕತ್ವ ಹೊಂದಿದ ಸಕ್ಷಮ ಪ್ರಾಧಿಕಾರಗಳಿಂದ ಪೂರ್ವಾನುಮತಿ ಪಡೆದು ಬಳಸಿಕೊಳ್ಳಲು ಅನುಮತಿ ನೀಡುವುದು ಅಗತ್ಯವಾಗಿದೆ ಎಂದು ಸರಕಾರ ಆದೇಶದಲ್ಲಿ ತಿಳಿಸಿದೆ. ಯಾವುದೇ ಚಟುವಟಿಕೆಗಳು ಸಾರ್ವಜನಿಕರಿಗೆ ಅನಾನುಕೂಲ ಉಂಟು ಮಾಡಿದರೆ ಹಾಗೂ ಸಂಬಂಧಿಸಿದ ಸಂಸ್ಥೆಗಳ ಆವರಣ, ಜಾಗದಲ್ಲಿ ನಡೆಯುವ ಚಟುವಟಿಕೆಗಳಿಂದ ಆ ಸಂಸ್ಥೆಗಳ ಮೂಲ ಧ್ಯೇಯಕ್ಕೆ ಧಕ್ಕೆ ಉಂಟಾಗುವುದಾದಲ್ಲಿ ಅಂತಹ ಚಟುವಟಿಕೆಗಳ ಆಯೋಜನೆಗೆ ಅನುಮತಿ ನಿರಾಕರಿಸಲಿವೆ. ಈ ಸಂಬಂಧ ಸೂಕ್ತ ಮಾರ್ಗಸೂಚಿಯನ್ನು ಆಯಾ ಇಲಾಖೆ ಹೊರಡಿಸಲಿದೆ ಎಂದು ಸರಕಾರ ತಿಳಿಸಿದೆ.

### ಎಲ್ಲೆಲ್ಲಿ ಅನುಮತಿ?

* ಸರಕಾರಿ ಸಾಮ್ಯದ ಶಾಲಾ–ಕಾಲೇಜುಗಳು, ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಆವರಣ ಬಳಕೆ ಮಾಡಲು ಉನ್ನತ ಶಿಕ್ಷಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆಯಿಂದ ಅನುಮತಿ ಕಡ್ಡಾಯ
* ಉದ್ಯಾನವನಗಳು, ಆಟದ ಮೈದಾನಗಳು, ಇತರೆ ತೆರೆದ ಸ್ಥಳಗಳ ಬಳಕೆಗೆ ನಗರಾಭಿವೃದ್ಧಿ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅನುಮತಿ ಕಡ್ಡಾಯ
* ಸಾರ್ವಜನಿಕ ರಸ್ತೆಗಳು, ಸರಕಾರದ ಇತರೆ ಆಸ್ತಿ, ಸ್ಥಳಗಳನ್ನು ಬಳಕೆ ಮಾಡಲು ಸಂಬಂಧಿಸಿದ ಜಿಲ್ಲಾಧಿಕಾರಿಗಳು, ಪೊಲೀಸ್ ಆಯುಕ್ತರು, ಪೊಲೀಸ್ ಅಧೀಕ್ಷಕರಿಂದ ಅನುಮತಿ ಕಡ್ಡಾಯ

# ರಸ್ತೆ ಅಗಲೀಕರಣ: ಅನ್ಯಾಯವಾದವರಿಗೆ ನ್ಯಾಯ ಸಿಗುವಂತಾಗಲಿ

**ಬಸವನಬಾಗೇವಾಡಿ:** ಸರ್ಕಾರ ರಸ್ತೆ ಅಗಲೀಕರಣ ಮಾಡಲು ಕೆಲವು ನಿಯಮಾವಳಿಗಳನ್ನು ರೂಪಿಸಿದೆ. ತಾಲೂಕಿನ ಕುದರಿಸಾಲವಾಡಗಿ ಗ್ರಾಮದಲ್ಲಿನ ಜಿಲ್ಲಾ ಮುಖ್ಯ ರಸ್ತೆಯ ಅಗಲೀಕರಣ ಮಾಡುವ ಈ ನಿಯಮಾವಳಿಗಳನ್ನು ಗಾಳಿ ತೂರಿ ರಸ್ತೆ ಅಗಲೀಕರಣ ಮಾಡುವ ಮೂಲಕ 142 ಕುಟುಂಬಗಳು ನಿರಾಶ್ರಿತರಾಗುವಂತೆ ಮಾಡಲಾಗಿದೆ. ಈ ಘಟನೆಯಲ್ಲಿ ಅನ್ಯಾಯವಾದ ಜನರಿಗೆ ನ್ಯಾಯ ಸಿಗುವವರೆಗೂ ಈ ಹೋರಾಟಕ್ಕೆ ಸದಾ ನನ್ನ ಬೆಂಬಲವಿದೆ ಎಂದು ಮಾಜಿ ಶಾಸಕ ಶರಣಪ್ಪ ಸುಣಗಾರ ಹೇಳಿದರು.

ಪಟ್ಟಣದ ಮಿನಿವಿಧಾನಸೌಧದ ಆವರಣಗೋಡೆಗೆ ಹೊಂದಿಕೊಂಡಂತೆ ಹಾಕಲಾಗಿರುವ ಶಾಮಿಯಾನದಲ್ಲಿ ಕಳೆದ ಮೂರು ದಿನಗಳಿಂದ ತಾಲೂಕಿನ ಕುದರಿಸಾಲವಾಡಗಿ ಗ್ರಾಮದ ರಸ್ತೆ ಅಗಲೀಕರಣ ನೆಪದಲ್ಲಿ ಸ್ವಂತ ಮನೆಗಳನ್ನು ಧ್ವಂಸಮಾಡಿ 142 ಕುಟುಂಬಗಳನ್ನು ಬೀದಿಗೆ ತಳ್ಳಿದ ಕ್ರಮವನ್ನು ಖಂಡಿಸಿ ಹಾಗೂ ನಿರಾಶ್ರಿತರಿಗೆ ಸೂಕ್ತ ಪರಿಹಾರ ನೀಡುವದು, ತಪಿಸ್ಥತ ಅಧಿಕಾರಿಗಳ ಮೇಲೆ ಸೂಕ್ತ ಕ್ರಮ ತೆಗೆದುಕೊಳ್ಳಬೇಕೆಂದು ಆಗ್ರಹಿಸಿ ನಡೆಸುತ್ತಿರುವ ಅನಿರ್ದಿಷ್ಟ ಧರಣಿ ಸತ್ಯಾಗ್ರಹ ಸ್ಥಳಕ್ಕೆ ಶನಿವಾರ ಭೇಟಿ ನೀಡಿ ಧರಣಿಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ತಾಲೂಕಿನ ಕುದರಿಸಾಲವಾಡಗಿ ಗ್ರಾಮದಲ್ಲಿ ಯಾಳವಾರಕ್ಕೆ ಹೋಗುವ ರಸ್ತೆಯ ಅಗಲೀಕರಣ ನೆಪದಲ್ಲಿ ಸ್ವಂತ ಕಬ್ಜಾದಲ್ಲಿರುವ ನೂರಾರು ಮನೆಗಳನ್ನು ಕೆಡವಿ ಹಾಕುವ ಮೂಲಕ ಈ ಕುಟುಂಬ ಬಾಂಧವರನ್ನು ಬೀದಿ ಪಾಲಾಗುವಂತೆ ಮಾಡಲಾಗಿದೆ. ಇದು ನೋವಿನ ಸಂಗತಿ. ಈ ಭಾಗದ ದೇವರಹಿಪ್ಪರಗಿ ಶಾಸಕರು ಅನುಕಂಪದ ಆಧಾರದ ಮೇಲೆ ಆಯ್ಕೆಯಾಗಿರುವದನ್ನು ಮರೆತು ಮುಗ್ಧ ಜನರ ಮೇಲೆ ಈ ರೀತಿಯಲ್ಲಿ ಮಾಡುತ್ತಿರುವುದ ಸರಿಯಲ್ಲ. ಶಾಸಕರು ತುಘಲಕ್ ದರ್ಬಾರ ಮಾಡುತ್ತಿದ್ದಾರೆ. ಕ್ಷೇತ್ರದಲ್ಲಿ ಅಭಿವೃದ್ಧಿ ಮಾಡುತ್ತಿಲ್ಲ. ಈ ಮನೆಗಳನ್ನು ಕಳೆದ ಎರಡು ತಿಂಗಳ ಹಿಂದೆ ತೆರವುಗೊಳಿಸಲಾಗಿದೆ. ಈ ಕುರಿತು



ಜಿಲ್ಲಾಧಿಕಾರಿಗಳಿಗೆ, ಸಿಇಓ ಅವರಿಗೆ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಈ ಕುರಿತು ನಾನು ಜಿಲ್ಲೆಯ ಉಭಯ ಸಚಿವರಾದ ಎಂ.ಬಿ.ಪಾಟೀಲ, ಶಿವಾನಂದ ಪಾಟೀಲ ಅವರ ಗಮನಕ್ಕೆ ತಂದಿದ್ದೇನೆ. ಅಲ್ಲದೇ ಸಂಬಂಧಿಸಿದ ಮಂತ್ರಿ, ಸಿಎಂ ಅವರ ಗಮನಕ್ಕೆ ತಂದಿದ್ದು. ಅವರು ಇದರ ಕುರಿತು ತನಿಖೆ ಮಾಡುವಂತೆ ಸೂಚನೆ ನೀಡಿದ್ದಾರೆ. ಎರಡು-ಮೂರು ದಿನಗಳಲ್ಲಿ ಇದರ ಬಗ್ಗೆ ಕ್ರಮ ತೆಗೆದುಕೊಳ್ಳುವುದಾಗಿ ಹೇಳಿದ್ದಾರೆ.

ಧರಣಿ ಸತ್ಯಾಗ್ರಹದ ನೇತೃತ್ವ ವಹಿಸಿರುವ ಅಶೋಕಗೌಡ ಪಾಟೀಲ ಮಾತನಾಡಿ, ನಾವು ಕೈಗೊಂಡಿರುವ ಧರಣಿಯಲ್ಲಿ ಯಾವುದೇ ರಾಜಕೀಯ ಉದ್ದೇಶವಿಲ್ಲ. ಗ್ರಾಮದಲ್ಲಿ ರಸ್ತೆ ನಿರ್ಮಾಣ ಮಾಡಲು ನಮ್ಮ ತಕರಾರು ಸಹ ಇಲ್ಲ. ರಸ್ತೆ ಇಲ್ಲದ ಜಾಗೆಯಲ್ಲಿ ರಸ್ತೆ ಮಾಡಲು ಹೊರಟ ಪರಿಣಾಮ ಅನೇಕ ಕುಟುಂಬಗಳು ಬೀದಿಗೆ ಬೀಳುವಂತಾಗಿದೆ. ಅನೇಕ ಮನೆಗಳು, ಡಾ.ಅಂಬೇಡ್ಕರ ಭವನ, ಹೇಮರಡ್ಡಿ ಮಲ್ಲಮ್ಮ ವೃತ್ತ, ಕಾಲೇಸಾಬ ದರ್ಗಾ ಸೇರಿದಂತೆ ಅನೇಕ ಮರಗಳು ತೆರವುಗೊಂಡಿವೆ. ಕುದರಿಸಾಲವಾಡಗಿ ಗ್ರಾಮಕ್ಕೆ ಯಾರಾದರೂ ಬಂದು ನೋಡಿದರೆ ನಾವು ಮಾಡುತ್ತಿರುವ ಹೋರಾಟದ ಬಗ್ಗೆ ಗೊತ್ತಾಗುತ್ತದೆ. ನಿರಾಶ್ರಿತರಿಗೆ ಸೂಕ್ತ ನಿವೇಶನ ನೀಡಿ ಮನೆ ನಿರ್ಮಿಸಿಕೊಡಬೇಕು.ಅವರಿಗೆ ಸೂಕ್ತ ಪರಿಹಾರ ಕಲ್ಪಿಸಿಕೊಡಬೇಕು. ಈ ಘಟನೆಯಲ್ಲಿ ಸೂಕ್ತ ತನಿಖೆ ನಡೆಸಿ ಅಧಿಕಾರಿಗಳ ಮೇಲೆ ಕಾನೂನು ಕ್ರಮ ಜರುಗಿಸಬೇಕು ಸೇರಿದಂತೆ ನಾವು ಮುಂದಿಟ್ಟಿರುವ ನಮ್ಮ ಎಲ್ಲ ಬೇಡಿಕೆಗಳನ್ನು ಈಡೇರಿಸುವವರೆಗೂ ನಮ್ಮ ಹೋರಾಟ ನಿರಂತರವಾಗಿ ನಡೆಯಲಿದೆ. ಈಗ ಬೆಳಗ್ಗೆಯಿಂದ ಸಂಜೆಯವರೆಗೆ ಮಾತ್ರ ಧರಣಿ ನಡೆಸಲಾಗುತ್ತಿದೆ. ನಮ್ಮ ಸ್ಪಂದನೆ ಸಿಗದೇ ಹೋದರೆ ಮುಂಬರುವ ದಿನಗಳಲ್ಲಿ ಅಹೋ ರಾತ್ರಿ ಧರಣಿ, ಉಪವಾಸ ಸತ್ಯಾಗ್ರಹ ಕೈಗೊಳ್ಳಲಾಗುವದು ಎಂದು ಎಚ್ಚರಿಕೆ ನೀಡಿದರು.

ಧರಣಿ ಉದ್ದೇಶಿಸಿ ದೇವರಹಿಪ್ಪರಗಿ ಮಹಿಳಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷೆ ಸರಿತಾ ನಾಯಕ, ಮುಖಂಡರಾದ ಅಶೋಕ ಚಲವಾದಿ, ಪರಶುರಾಮ ದಿಂಡವಾರ, ಗುರುರಾಜ ಗುಡಿಮನಿ, ನಜೀರಅಹ್ಮದ ಬೀಳಗಿ, ಬಸವರಾಜ ಕಾಮನಕೇರಿ, ರಾಜು ಸಿಂಧಗೇರಿ, ಅರವಿಂದ ಸಜ್ಜನ, ಪ್ರಕಾಶ ಗುಡಿಮನಿ,ವಿದ್ಯಾ ಪಾಟೀಲ, ಶ್ರೀನಾಥ ಓಲೇಕಾರ, ಯಮನೂರಿ ಚಲವಾದಿ ಇತರರು ಮಾತನಾಡಿದರು.

ಇಂದಿನ ಧರಣಿಯಲ್ಲಿ ಬಸವರಾಜ ದೇಸಾಯಿ, ಶಾಂತಗೌಡ ಪಾಟೀಲ, ಅಶೋಕ ದೇಸಾಯಿ, ಡಾ.ಹಸನ ಢವಳಗಿ, ಕಾಮೇಶ ಭಜಂತ್ರಿ, ಮಲ್ಲನಗೌಡ ಪಾಟೀಲ, ಮಲ್ಲು ತಳವಾರ,ಅಣ್ಣುಗೌಡ ಪಾಟೀಲ, ಅದಾಮಸಾಬ ಢವಳಗಿ, ಕಲ್ಲಪ್ಪ ಮಟ್ಟಿ, ಚಂದ್ರಗೌಡ ಹುಣಶ್ಯಾಳ, ಶ್ರೀಕಾಂತ ಹಚಡದ, ಬಾಬು ಪಿಂಜಾರ, ನಜೀರಪಟೇಲ ಗುಡ್ನಾಳ, ದಾವಲಸಾಬ ಅತ್ತಾರ, ಯಾಕೂಬ ಎಲಿಗಾರ, ಶಿವಶಂಕರ ತಮದಡ್ಡಿ, ಅಲ್ತಾಪ ಅತ್ತಾರ, ಪ್ರಮೋದಗೌಡ ಹಚಡದ, ಶಿವರಾಜ ಹಚಡದ, ಪಾವಡೆಪ್ಪ ಇಂಗಳಗಿ, ಎನ್.ಆರ್. ಗುಂಡಳ್ಳಿ, ರೇವಣಸಿದ್ದ ಇಂಗಳಗಿ, ಶಕೀನಾ ಎಲಿಗಾರ, ಗಂಗವ್ವ ಇಂಗಳಗಿ, ಚಂದ್ರಕಲಾ ಇಂಗಳಗಿ ಸೇರಿದಂತೆ ಇತರರು ಭಾಗವಹಿಸಿದ್ದರು.

> ದೇವರಹಿಪ್ಪರಗಿ ಕ್ಷೇತ್ರದಲ್ಲಿ ಹಾಲಿ ಶಾಸಕರು ಅಭಿವೃದ್ಧಿ ಪರ ಕೆಲಸ ಮಾಡದೇ ದ್ವೇಷ ರಾಜಕಾರಣ ಮಾಡುತ್ತಿದ್ದಾರೆ. ದೇವರಹಿಪ್ಪರಗಿಯಲ್ಲಿ ಡಾ.ಅಂಬೇಡ್ಕರ ನಿರ್ಮಾಣಕ್ಕೆ ರೂ.2 ಕೋಟಿ ಸೇರಿದಂತೆ ವಿವಿಧ ಶಾಲಾ ಕೋಣೆಗಳ ದುರಸ್ತಿಗೆ, ಸಿಸಿ ರಸ್ತೆ ಸೇರಿದಂತೆ ವಿವಿಧ ಕಾಮಗಾರಿಗಳಿಗೆ ರೂ.70 ಕೋಟಿ ಅನುದಾನ ಬಿಡುಗಡೆಯಾಗಿದೆ. ಈ ಕಾಮಗಾರಿಯ ಅಡಿಗಲ್ಲಿಗೆ ಸಿಎಂ ಅವರನ್ನು ಆಹ್ವಾನಿಸಬೇಕೆಂಬ ನಮ್ಮ ವಿಚಾರಕ್ಕೆ ಶಾಸಕರು ಅವಕಾಶ ನೀಡಲಿಲ್ಲ. ಲೋಕೋಪಯೋಗಿ ಇಲಾಖೆಯಿಂದ ರೂ.5 ಕೋಟಿ ಅನುದಾನವನ್ನು ಕೇವಲ ಕಂಟಿ ತೆಗೆಸಲು ಬಳಕೆ ಮಾಡಲಾಗಿದೆ. ತಾಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿಯ 15 ನೇ ಹಣಕಾಸು ಅನುದಾನದಲ್ಲಿ ತಲಾ ರೂ.2 ಕೋಟಿ ಅನುದಾನ ಸೇರಿ ಒಟ್ಟು ರೂ.4 ಕೋಟಿ ಅನುದಾನದಿಂದ ಯಾವುದೇ ಕೆಲಸವಾಗಿಲ್ಲ.
>
> **ಶರಣಪ್ಪ ಸುಣಗಾರ**
> **ಮಾಜಿ ಶಾಸಕ**

# ಉತ್ತಮ ಚಿಕಿತ್ಸೆಯಲ್ಲಿ ರಾಜೀ ಇಲ್ಲ ಪ್ರಾದೇಶಿಕ ಆಯುಕ್ತೆ ಜಾನಕಿ ಎಚ್ಚರಿಕೆ



**ಬೆಳಗಾವಿ:** "ಸರ್ಕಾರಿ ಆಸ್ಪತ್ರೆಗೆ ಬರುವವರು ಬಡವರು ಮತ್ತು ಅಸಹಾಯಕರು. ಅವರಿಗೆ ಉತ್ತಮವಾದ ಚಿಕಿತ್ಸೆ ಜೊತೆಗೆ ಆರೈಕೆಯು ನಮ್ಮೆಲ್ಲರ ಮೊದಲ ಆದ್ಯತೆಯಾಗಿದ್ದು, ಅವರಿಗೆ ನೀಡುವ ಚಿಕಿತ್ಸೆಯಲ್ಲಿ ಯಾವುದೇ ರಾಜಿ ಮಾಡಿಕೊಳ್ಳಲು ಸಾಧ್ಯವಿಲ್ಲ. ಆದ್ದರಿಂದ ಬಿಮ್ಸ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಎಲ್ಲ ವಿಭಾಗದಲ್ಲಿಯೂ ಉತ್ತಮವಾದ ಚಿಕಿತ್ಸೆ ನೀಡುವುದರ ಜತೆಗೆ ರೋಗಿಗಳೊಂದಿಗೆ ಸಂಯಮದಿಂದ ವರ್ತಿಸಬೇಕು" ಎಂದು ಪ್ರಾದೇಶಿಕ ಆಯುಕ್ತರಾದ ಜಾನಕಿ ಕೆ.ಎಂ. ಸೂಚನೆ ನೀಡಿದರು.

ಬೆಳಗಾವಿಯ ಸೂಪರ್ ಸ್ಪೆಷಾಲಿಟಿ ಆಸ್ಪ ತ್ರೆಯಲ್ಲಿ ಶುಕ್ರವಾರ(ಅ.17) ಆಡಳಿತ ಮಂಡಳಿಯ ಪ್ರಗತಿ ಪರಿಶಿಲನಾ ಸಭೆಯಲ್ಲಿ ಅವರು ಮಾತನಾಡಿದರು. ಬಿಮ್ಸ್ ಜಿಲ್ಲಾ ಆಸ್ಪತ್ರೆಯೂ ಸಾರ್ವಜನಿಕರಿಗೆ ಸೇವೆಯನ್ನು ನೀಡುವುದರಲ್ಲಿ ಮುಂಚೂಣಿಯಲ್ಲಿದೆ. ಉತ್ತಮ ಚಿಕಿತ್ಸೆ ನೀಡುವುದರಲ್ಲಿ ಸರಕಾರಿ ಆಸ್ಪತ್ರೆಯು ಯಾವುದರಲ್ಲೂ ಕಡಿಮೆ ಇಲ್ಲ ಎಂಬುದನ್ನು ಸಾಬೀತು ಮಾಡಿರುವುದು ಹೆಮ್ಮೆಯ ವಿಷಯವಾಗಿದೆ. ಯಾವ ವಿಷಯದಲ್ಲಿಯೂ ರಾಜಿ ಮಾಡಿಕೊಳ್ಳದೆ ವೈದ್ಯರು ಹಾಗೂ ಆಡಳಿತ ಮಂಡಳಿಯೂ ರೋಗಿಗಳ ಸೇವೆಯನ್ನು ಮಾಡಬೇಕೆಂದು ತಿಳಿಸಿದರು.

ಬಿಮ್ಸ್ ಆಸ್ಪತ್ರೆಯ ಎಲ್ಲ ವಿಭಾಗದ ಕುಂದು ಕೊರತೆ ಮತ್ತು ಕಾರ್ಯವಿಧಾನ ಕುರಿತು ಕೂಲಕುಂಶವಾಗಿ ಪರಿಶಿಲನೆಯನ್ನು ನಡೆಸಿದ ಪ್ರಾದೇಶಿಕ ಆಯುಕ್ತರು, ವಿವಿಧ ವಿಭಾಗಗಳಿಗೂ ಭೇಟಿ ನೀಡಿ ಖುದ್ದಾಗಿ ಪರಿಶೀಲಿಸಿದರು. ಸಭೆಯಲ್ಲಿ ಬಿಮ್ಸ್ ನ ನಿರ್ದೇಶಕರಾದ ಡಾ. ಅಶೋಕ ಕುಮಾರ ಶೆಟ್ಟಿ, ಬಿಮ್ಸ್ ಮುಖ್ಯ ಆಡಳಿತಾಧಿಕಾರಿಗಳಾದ ಡಾ.ಸಿದ್ದು ಹುಲ್ಲೋಳಿ, ಪ್ರಭಾರ ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ. ಕೇಶವ ಹೆಚ್.ಬಿ. ಹಾಗೂ ಬಿಮ್ಸ್ ನ ಎಲ್ಲ ವಿಭಾಗದ ಮುಖ್ಯಸ್ಥರು ಹಾಜರಿದ್ದರು.

# ಸ್ವದೇಸಿ ವಸ್ತುಗಳ ಬಳಕೆಯಿಂದ ದೇಶದ ಅಭಿವೃದ್ಧಿ




**ಬೆಳಗಾವಿ:** ದೇಶದ ಅಭಿವೃದ್ಧಿಗೆ ಹಾಗೂ ಸ್ವಂತ ಬೆಳವಣಿಗೆಗೆ ನಮ್ಮ ದೇಶದಲ್ಲಿ ಉತ್ಪಾದನೆ ಆಗುವ ಎಲ್ಲಾ ಉತ್ಪನ್ನಗಳನ್ನು ನಾವು ಬಳಕೆ ಮಾಡಿ ಅವುಗಳ ವ್ಯಾಪಾರ ವಹಿವಾಟು ಮಾಡಿ ತಮ್ಮ ಬೆಳವಣಿಗೆಗೆ ಹಾಗೂ ದೇಶದ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಮಾಜಿ ಮುಖ್ಯ ಮಂತ್ರಿ ಹಾಗೂ ಬೆಳಗಾವಿ ಸಂಸದ ಜಗದೀಶ ಶೆಟ್ಟರ ಹೇಳಿದರು.

ಅವರು ಶುಕ್ರವಾರದಂದು ಆತ್ಮ ನಿರ್ಭರ ಭಾರತ ಸಂಕಲ್ಪ ಅಭಿಯಾನದ ಅಂಗವಾಗಿ

ಬೆಳಗಾವಿ ನಗರದ ಸರ್ಕಿಟ್ ಹೌಸ್ ದಲ್ಲಿ ನಡೆದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷರಾದ ಸುಭಾಷ ಪಾಟೀಲ ಮಾತನಾಡಿ ದೇಶಿಯ ವಸ್ತುಗಳ ಬಳಕೆ ನಾವು ರೂಡಿಸಿಕೊಳ್ಳಬೇಕು ಈ ಕಾರ್ಯದಿಂದ ದೇಶದ ಪ್ರಧಾನಿ ನರೇಂದ್ರ ಮೋಧೀಜಿ ಅವರ ಭವ್ಯ ಭಾರತದ ಕನಸು ನನಸು ಆಗುತ್ತದೆ ಎಂದರು. ಈ ಕಾರ್ಯಕ್ರಮದಲ್ಲಿ ಮಾಜಿ ಶಾಸಕರಾದ ಸಂಜಯ ಪಾಟೀಲ, ಬಿಜೆಪಿ ಮುಖಂಡರಾದ ಎಂ.ಬಿ.ಜಿರಲಿ,ಆತ್ಮ ನಿರ್ಭರ ಭಾರತ ಸಂಕಲ್ಪ ಅಭಿಯಾನದ ಜಿಲ್ಲಾ ಸಂಚಾಲಕರಾದ ಮಹೇಶ್ ಮೋಹಿತೆ,ಸಹ ಸಂಚಾಲಕರಾದ ವಿಜಯ ಗುಡದೇರಿ, ಯಲ್ಲೇಶ ಕೊಲಕಾರ, ರಾಜಶೇಖರ್ ಡೋಣಿ, ಮುರುಘೇಂದ್ರಗೌಡ ಪಾಟೀಲ,ಧನ್ಯಕುಮಾರ ಪಾಟೀಲ,ಸಚೀನ ಕಡಿ, ಸುಭಾಷ್ ಸಣ್ಣವೀರಪ್ಪನವರ, ಮನೋಜ್ ಪಾಟೀಲ ಹಾಗೂ ಪ್ರಮುಖರು ಉಪಸ್ಥಿತರಿದ್ದರು ಇದೇ ವೇಳೆ ಆತ್ಮ ನಿರ್ಭರ ಭಾರತ ಸಂಕಲ್ಪ ಅಭಿಯಾನದ ವಿಶೇಷ "ಟಿ ಶರ್ಟಗಳನ್ನು" ಗಣ್ಯರು ಬಿಡುಗಡೆ ಗೊಳಿಸಿದರು.

# ಅಧಿಕಾರಿ ಮೇಲೆ ಹಲ್ಲೆ: ಕ್ರಮಕ್ಕೆ ಮನವಿ

**ರಾಮದುರ್ಗ:** ಯರಗಟ್ಟಿಯ ಗ್ರಾಮ ಪಂಚಾಯಿತ ಅಭಿವೃದ್ಧಿ ಅಧಿಕಾರಿ ಮೇಲೆ ಹಲ್ಲೆ ಮಾಡಿದ ಆರೋಪಿಗಳನ್ನು ಬಂಧಿಸಿ ಕಠಿಣ ಕ್ರಮ ಕೈಗೊಳ್ಳುವಂತೆ ರಾಜ್ಯ ಸರಕಾರಿ ನೌಕರರ ಸಂಘದ ಸದಸ್ಯರು ತಹಸೀಲ್ದಾರ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಸರಕಾರಿ ನೌಕರರ ಮೇಲೆ ಹಲ್ಲೆ ಪ್ರಕರಣಗಳು ಹೆಚ್ಚುತ್ತಿದ್ದು, ಅಧಿಕಾರಿಗಳು ಆತ್ಮಸ್ಥೈರ್ಯ ಕಳೆದುಕೊಂಡು ಆತಂಕದಲ್ಲಿಯೇ ಕೆಲಸ ಮಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಅಧಿಕಾರಿಗಳಿಗೆ ಸೂಕ್ತ ರಕ್ಷಣೆ ನೀಡಬೇಕು ಅಲ್ಲದೆ ಹಲ್ಲೆ ಮಾಡಿರುವ ವ್ಯಕ್ತಿಗಳಿಗೆ ಕಠಿಣ ಶಿಕ್ಷೆ ವಿಧಿಸಬೇಕೆಂದು ಮನವಿ ಮೂಲಕ ಒತ್ತಾಯಿಸಿದರು.

ಸಂಘದ ತಾಲೂಕ ಅಧ್ಯಕ್ಷ ಐ.ವೈ ಪವಾಡಿಗೌಡರ, ಕಾರ್ಯದರ್ಶಿ ಎಂ.ಎಸ್ ಜಂಗವಾಡ, ಖಜಾಂಚಿ ಬಿ.ಬಿ ಹರನಟ್ಟಿ, ರಾಜ್ಯ ಪರಿಷತ್ ಸದಸ್ಯ ಮಂಜು. ಪರಪ್ಪನವರ, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ ಸೋಮರಡ್ಡಿ ಹೊಂಗಲ, ಮಾಲಾ ನೀಲರೆಡ್ಡಿ, ಕೆ.ಎಚ್ ಸ್ಯಾಡಲಗೇರಿ, ವಿಜಯಕುಮಾರ್ ಒನಕ್ಯಾಳ, ಜಗದೀಶ್ ದೇಸಾಯಿ, ರಾಜು ಬಸರಿಕಟ್ಟಿ, ವೀರಣ್ಣ ಗಣಾಚಾರಿ, ಎನ್.ಬಿ ಪಾಟೀಲ್, ಐ.ಪಿ ಮುಳ್ಳೂರ, ಸುಭಾಸ ಹುಣಸಿಕಟ್ಟಿ, ಗಂಗಮ್ಮ ಪಾಟೀಲ, ಎಸ್.ಎಂ.ವಾಲಿ ಎಸ್.ಎ ಕಾಂಬಳೆ, ನಿತೀಶ್ ಗಾಣಿಗೇರ್, ಉಮೇಶ್ ಗಡ್ಡಿ, ಹೇಮಾ ಪೂಜಾರಿ, ಭಾರತಿ ಬೀಡಕಿ, ಶ್ವೇತಾ ಗೌಳಿ ಮುಂತಾದವರು ಉಪಸ್ಥಿತರಿದ್ದರು.



# ಉಚಿತ ಕಾನೂನು ಸೇವೆಗಳ ಕ್ಲಿನಿಕ್ ಪ್ರಾರಂಭ

**ವಿಜಯಪುರ:** ವಿಜಯಪುರ ಜಿಲ್ಲೆಯ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರ ಕಚೇರಿಯಲ್ಲಿ ವೀರ ಪರಿವಾರ ಸಹಾಯತಾ ಯೋಜನೆ-2025ರ ಅಡಿಯಲ್ಲಿ ರಕ್ಷಣಾ ಸಿಬ್ಬಂದಿ, ಮಾಜಿ ಸೈನಿಕರು ಹಾಗೂ ಅವರ ಅವಲಂಬಿತರಿಗೆ ಕಾನೂನು ಸಲಹೆಗಳನ್ನು ನೀಡಲು ಉಚಿತ ಕಾನೂನು ಸೇವೆಗಳ ಕ್ಲಿನಿಕ್‌ನ್ನು ಪ್ರಾರಂಭಿಸಲಾಗಿದೆ.

ಪ್ರತಿ ಗುರುವಾರ ಬೆಳಿಗ್ಗೆ 11 ಗಂಟೆಯಿಂದ ಸಂಜೆ 5ಗಂಟೆಯವರೆಗೆ ವಕೀಲರಾದ ಜಾವೇದ್ ಎಸ್ ಗುಡಗಂಟಿ ಅವರು ಕಾನೂನು ಸೇವೆಗಳ ಕುರಿತು ಜಿಲ್ಲಾ ಸೈನಿಕ ಕಾರ್ಯಲಯದಲ್ಲಿ ಸಲಹೆ ನೀಡಲಿದ್ದು, ರಕ್ಷಣಾ ಸಿಬ್ಬಂದಿ, ಮಾಜಿ ಸೈನಿಕರು ಹಾಗೂ ಅವರ ಅವಲಂಬಿತರು ಇದರ ಸದುಪಯೋಗ ಪಡೆದುಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರ ಕಚೇರಿ ಅಥವಾ ದೂರವಾಣಿ ಸಂಖ್ಯೆ: 08352-250913 ಸಂಪರ್ಕಿಸಬಹುದಾಗಿದೆ ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯರಗಟ್ಟಿಯಲ್ಲಿ ಚೆನ್ನಮ್ಮ ವೀರಜ್ಯೋತಿಗೆ ಅದ್ದೂರಿ ಸ್ವಾಗತ

**ಯರಗಟ್ಟಿ:** ಪಟ್ಟಣದ ಸಂಗೊಳ್ಳಿ ರಾಯಣ್ಣ ಅದ್ದೂರಿಯಾಗಿ ಚೆನ್ನಮ್ಮನವರ ಜ್ಯೋತಿ ಸ್ವಾಗತಿಸಿದ ತಹಶೀಲ್ದಾರ ಎಂ. ವ್ಹಿ. ಗುಂಡಪ್ಪಗೋಳ ಪೂಜೆಯನ್ನು ಸಲ್ಲಿಸಿದರು.

ತಾಲೂಕಾ ಆಡಳಿತ ಹಾಗೂ ತಾಲೂಕ್ ಪಂಚಾಯತ್ ಶಿಕ್ಷಣ ಇಲಾಖೆ ವತಿಯಿಂದ ಅದ್ದೂರಿಯಾಗಿ ಭರಮಾಡಿಕೊಂಡು ಕಿತ್ತೂರು ರಾಣಿ ಚೆನ್ನಮ್ಮ ರಥದ ಪೂಜೆಯನ್ನು ಸಲ್ಲಿಸಿದರು ತಹಶೀಲ್ದಾರ ಎಂ. ವ್ಹಿ. ಗುಂಡಪ್ಪಗೋಳ ಅವರು ಮಾಧ್ಯಮದೊಂದಿಗೆ ಮಾತನಾಡಿದರು.

ಅಕ್ಟೋಬರ್ 23ನೇ ರಿಂದ 25ರವರೆಗೆ ನಡೆಯಲಿರುವ ಕಿತ್ತೂರು ಉತ್ಸವನ್ನು ಅದ್ದೂರಿ ಆಚರಿಸಲಾಗುವುದು ತಾವು ಎಲ್ಲರು ಭಾಗವಹಿಸಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪೂಜ್ಯ ಗಣಪತಿ ಮಹಾರಾಜರು, ಪ. ಪಂ. ಮುಖ್ಯಾಧಿಕಾರಿ ಮಹೇಶ ಭಜಂತ್ರಿ, ಸಿಪಿಐ ಆಯ್ ಎಂ. ಮಠಪತಿ, ಗ್ರಾಮ ಆಡಳಿತಾಧಿಕಾರಿ ಎಲ್. ಬಿ. ದಳವಾಯಿ, ಪ. ಪಂ. ಕಿರಿಯ ಆರೋಗ್ಯ ನಿರೀಕ್ಷ




ನಾಗರಾಜ ಚಡಪ್ಪನವರ, ಪ. ಪಂ. ತಾಂತ್ರಿಕ ಅಭಿಯಂತರ ವೆಂಕಟೇಶ ಕಾಮಣ್ಣವರ, ಎಪಿಎಂಸಿ ಅಧ್ಯಕ್ಷ ನೀಲಕಂಠ ಶೀದಬಸನ್ನವರ, ಕಸಾಪ ಅಧ್ಯಕ್ಷ ತಮ್ಮಣ್ಣಾ ಕಾಮಣ್ಣವರ, ಪ. ಪಂ. ಸದಸ್ಯರಾದ ನಿಖಿಲ ಪಾಟೀಲ, ಹನಮಂತ ಹಾರೂಗೊಪ್ಪ, ಸಲಿಂಬೇಗ ಜಮಾದಾರ, ಮಂಜುನಾಥ ತಡಸಲೂರ, ಶಿವಾನಂದ ಕರಿಗೋಣ್ಣವರ, ಬಾಸ್ಕರ ಹಿರೇಮೆತ್ರಿ, ಎಸ್. ಎಸ್. ಕುರುಬಗಟ್ಟಿಮಠ, ಸಿದ್ದ ಬಿರ್ಲಿ, ಬಸವರಾಜ ಸಣ್ಣಗೌಡರ, ಶಿಕ್ಷಕರಾದ ಎಂ. ಸಿ. ಹಡಪದ, ರಾಜೇಂದ್ರ ವಾಲಿ, ಶಿಕ್ಷಣ ಅಧಿಕಾರಿಗಳು, ಕನ್ನಡಪರ ಸಂಘಟನೆಗಳ ಸದಸ್ಯರು ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಾಲೇಜು ಅಭಿವೃದ್ಧಿಗಾಗಿ ಬದ್ಧ: ಶಾಸಕ ಸಿದ್ದು ಸವದಿ

**ರಬಕವಿ-ಬನಹಟ್ಟಿ:** ರಬಕವಿ ಬನಹಟ್ಟಿ ತಾಲ್ಲೂಕು ಪ್ರದೇಶದಲ್ಲಿ ಬರುವ ಕಾಲೇಜುಗಳ ಅಭಿವೃದ್ಧಿಗಾಗಿ ಬದ್ಧನಾಗಿರುವೆ. ಮುಂದಿನ ದಿನಗಳಲ್ಲಿ ಕಾಲೇಜು ಅಭಿವೃದ್ಧಿಗೆ ಇನ್ನಷ್ಟು ಮೂಲ ಸೌಕರ್ಯಗಳನ್ನು ಒದಗಿಸಲಾಗುವುದೆಂದು ಶಾಸಕ ಸಿದ್ದು ಸವದಿ ತಿಳಸಿದರು.

ಅವರು ಶನಿವಾರ ಇಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕ್ರೀಡಾ ಮತ್ತು ಸಾಂಸ್ಕೃತಿಕ ಚಟುವಟಿಕೆ ಮತ್ತು ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ವಿದ್ಯಾರ್ಥಿಗಳ ತಮ್ಮ ಜೀವನದಲ್ಲಿ ದೇಶಾಭಿಮಾನವನ್ನು ಬೆಳೆಸಿಕೊಳ್ಳಬೇಕು. ದೇಶ ಸೇವೆಗೆ ಮುಂದಾಗಬೇಕು. ಸರ್ಕಾರಿ ಶಾಲಾ ಕಾಲೇಜು ಎಂಬ ಕೀಳರಿಮೆ ವಿದ್ಯಾರ್ಥಿಗಳಲ್ಲಿ ಬೇಡ. ಸರ್ಕಾರಿ ಶಾಲಾ ಕಾಲೇಜುಗಳಲ್ಲಿಯೂ ಕೂಡಾ ಉತ್ತಮ ಶಿಕ್ಷಣ ದೊರೆಯುತ್ತಿದೆ ಎಂದು ಶಾಸಕ ಸಿದ್ದು ಸವದಿ ತಿಳಿಸಿದರು. ಜಮಖಂಡಿ ನಿವೃತ್ತ ಪ್ರಾಚಾರ್ಯ ಸಂಗಮೇಶ ಮಟೋಳ್ಳಿ ಮಾತನಾಡಿ, ವಿದ್ಯಾರ್ಥಿಗಳು ಪಠ್ಯದ ಜೊತೆಗೆ



ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಬೇಕು. ವಿದ್ಯಾರ್ಥಿಗಳಾಗಿದ್ದಾಲೇ ನಾಯಕತ್ವದ ಗುಣಗಳನ್ನು ಬೆಳೆಸಿಕೊಳ್ಳಬೇಕು ಎಂದರು.

ಪ್ರಾಚಾರ್ಯ ಶಿವು ಹಂದಿಗುಂದ ಅಧ್ಯಕ್ಷತೆಯ ನುಡಿಗಳನ್ನಾಡುತ್ತ, ಕಾಲೇಜು ಮತ್ತು ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗಾಗಿ ಶ್ರಮಿಸುವುದಾಗಿ ತಿಳಿಸಿದರು. ಸಾಂಸ್ಕೃತಿಕ ವಿಭಾಗದ ಸಂಯೋಜಕ ಅಶೋಕ ಕಾಳನ್ನವರ ಮಾತನಾಡಿದರು.

ಕಾರ್ಯಕ್ರಮದಲ್ಲಿ ಚೇತನ ಡಾಗಾ, ಮಹಾವೀರ ಖವಟಕೊಪ್ಪ, ಶಾನೂರಕುಮಾರ ಗಾಣಿಗೇರ, ಮಹಾದೇವ ಪೋತರಾಜ, ಮಹಾಂತೇಶ ರೆಡ್ಡಿರೆಟ್ಟಿ, ದೀಪಾ ಜಹಾಗೀರದಾರ, ಮೀನಾಕ್ಷಿ ಜಂಬಗಿ, ಮಂಜುಳಾ ಕೋಳಿ, ಓಂಕಾರ ಯರಗಟ್ಟಿಕರ್, ಸೃಷ್ಠಿ ಬಸಪ್ಪಗೋಳ, ಸ್ವಾತಿ ಮಡ್ಡಗೋಳ ವೈಷ್ಣವಿ ಸುಡಾಳ ಅನೇಕರಿದ್ದರು.

# ನಶಾ ಮುಕ್ತ ಭಾರತ ಅಭಿಯಾನ: ರಂಗೋಲಿ ಸ್ಪರ್ಧೆ




**ಹುಬ್ಬಳ್ಳಿ:** ತಾಲೂಕ ಪಂಚಾಯತಿ ಹುಬ್ಬಳ್ಳಿಯ ಸಾಮರ್ಥ್ಯಸೌಧನಲ್ಲಿ ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಧಾರವಾಡ, ವಿಕಲಚೇತನ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಧಾರವಾಡ, ತಾಲೂಕು ಪಂಚಾಯತ ಹುಬ್ಬಳ್ಳಿ ಹಾಗೂ ಮೈತ್ರಿ ಸಮಗ್ರ ವ್ಯಸನಮುಕ್ತ ಪುನರ ವಸತಿ ಕೇಂದ್ರ ಹುಬ್ಬಳ್ಳಿ ಇವುಗಳ ಸಂಯುಕ್ತಾಶ್ರಯದಲ್ಲಿ ನಶಾ ಮುಕ್ತ ಭಾರತ ಅಭಿಯಾನದ ಅಂಗವಾಗಿ ರಂಗೋಲಿ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಜಿಲ್ಲಾ ವಿಕಲಚೇತನರ ಕಲ್ಯಾಣ ಅಧಿಕಾರಿಗಳಾದ ಸವಿತಾ ಕಾಳೆ ಅವರು ಮಾತನಾಡಿ, ಭಾರತವು ಯುವ ಜನಾಂಗದಿಂದ ಕೂಡಿದ ಸದೃಢ ದೇಶ ಕಟ್ಟಲು ಯುವಕರ ಕೊಡುಗೆ ಅವಶ್ಯಕವಾಗಿರುತ್ತದೆ.ಆದರೆ ಯುವಕರು ಮಾದಕ ವಸ್ತುಗಳಿಗೆ ದಾಸರಾಗಿ ಹಲವಾರು ರೋಗಗಳಿಗೆ ತುತ್ತಾಗುತ್ತಿದ್ದಾರೆ. ಕಾರಣ ಇಂತಹ ವ್ಯಸನಗಳಿಂದ ದೂರವಾಗಿ ಆರೋಗ್ಯಕರಾಗಿ ಉತ್ತಮ ಜೀವನ ರೂಪಿಸಿಕೊಳ್ಳಲು ಮುಂದಾಗಬೇಕು ಎಂದು ಅವರು ಸ್ವಸಹಾಯ ಸಂಘದ ಪಶು ಸಕಿ ಅವಗೆ ತಿಳಿಸಿದರು.

ಎನ್ ಆರ್ ಎಲ್ ಎಮ್ ತಾಲೂಕಾ ಕಾರ್ಯಕ್ರಮ ವ್ಯವಸ್ಥಾಪಕರಾದ ಭರತೇಶಗೌಡ ಪಾಟೀಲ ಮಾತನಾಡಿ, ಯುವ ಪೀಳಿಗೆಯ ಮಾರಕ ದುಶ್ಚಟಗಳಿಗೆ ದಾಸರಾಗದೇ, ನಶಾ ವಸ್ತುಗಳಿಂದ ದೂರವಿದ್ದು, ಸದೃಢವಂತರಾಗಬೇಕೆಂದು ಅವರು ತಿಳಿಸಿದರು.

ಮೈತ್ರಿ ಸಂಸ್ಥೆಯ ಮಂಜುನಾಥ ಮುದಿಗೌಡ್ರ, ಶಿವಾನಂದ ಚೌಗಲೆ, ಕಲ್ಮೇಶ್ ಬೆಳೆಬಾಳ ಇವರು ಕೂಡ ನಶಾ ಮುಕ್ತರಾಗುವಂತೆ ಅರಿವು ಮೂಡಿಸಿದರು.

ಈ ಸಂದರ್ಭದಲ್ಲಿ ಎನ್ ಆರ್ ಎಲ್ ಎಮ್ ನಾಗಪ್ಪ ಹಂಚಿನಮನಿ ನಿರೂಪಿಸಿದರು. ಎಂ.ಆರ್. ಡಬ್ಲ್ಯೂ ಮಹಾಂತೇಶ ಕುರ್ತಕೋಟಿ ವಂದಿಸಿದರು. ವಿದ್ಯಾರ್ಥಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

# ರಸ್ತೆ ಸುಧಾರಣೆ ಕಾಮಗಾರಿಗೆ ಚಾಲನೆ

**ರಾಯಬಾಗ:** ಗ್ರಾಮೀಣ ಭಾಗದ ಎಲ್ಲ ಸಮುದಾಯದವರ ದೇವಸ್ಥಾನಗಳಿಗೆ ಸಮುದಾಯ ಭವನ ನಿರ್ಮಿಸಿ ಕೊಡಲಾಗುತ್ತಿದೆ ಎಂದು ಶಾಸಕ ಡಿ.ಎಮ್.ಐಹೊಳೆ ಹೇಳಿದರು.

ತಾಲೂಕಿನ ಮಾವಿನಹೊಂಡ ಗ್ರಾಮದ ಇಠ್ಠರಾಯ ದೇವಸ್ಥಾನ ಹತ್ತಿರ ಜಿ.ಪಂ. ಇಲಾಖೆಯಿಂದ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಮಂಜೂರಾದ 5 ಲಕ್ಷ ರೂ. ಅನುದಾನದಲ್ಲಿ ಸಮುದಾಯ ಭವನ ನಿರ್ಮಾಣ ಹಾಗೂ ರಾಯಬಾಗ-ಸ್ಟೇಷನ ರಸ್ತೆಯಿಂದ ಸದಾಶಿವ ಮೇತ್ರಿ ತೋಟದ ವರೆಗೆ ರಸ್ತೆ ಸುಧಾರಣೆ ಕಾಮಗಾರಿಗೆ ಶನಿವಾರ ಚಾಲನೆ ನೀಡಿ ಮಾತನಾಡಿದ ಅವರು, ತಾಲೂಕಿನ ಗ್ರಾಮೀಣ ಭಾಗದಲ್ಲಿ ತೋಟದ ರಸ್ತೆಗಳನ್ನು ಸುಧಾರಿಸುವುದರಿಂದ ಸಾರ್ವಜನಿಕರಿಗೆ ಅನುಕೂಲವಾಗುವುದು ಎಂದರು. ಜಿ.ಪಂ.ಎಇಇ ವಿ.ಆರ್. ಭಜಂತ್ರಿ, ಎಇ ಎಸ್.ಎಸ್.ಹೊಸಮನಿ, ಮುಖಂಡರಾದ ಸದಾಶಿವ ಘೋರ್ಪಡೆ, ಅಣ್ಣಾಸಾಹೇಬ ಖೆಮಲಾಪೂರೆ, ವಿ.ಎಸ್.ಪೂಜಾರಿ, ಮಹಾದೇವ ಲಕ್ಷ್ಮೇಶ್ವರ, ಸುರೇಶ ಚೌಗುಲಾ, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸದಾನಂದ ಹಳಿಂಗಳಿ ತಾಲೂಕ ಮಂಡಲ ಬಿಜೆಪಿ ಅಧ್ಯಕ್ಷರಾದ ಪೃಥ್ವಿರಾಜ ಜಾಧವ, ಸುರೇಶ ಮಾಳಿ, ಮಹೇಶ ಕುಲಗುಡೆ, ಅಶೋಕ ಮೇತ್ರಿ, ಉಮೇಶ ಮೇತ್ರಿ, ದತ್ತಾ ಜಾಧವ, ಮಹೇಶ ಕರಮಡಿ, ಜಿಯಾವುಲ್ಲ ಮುಲ್ಲಾ, ಕಲ್ಲಪ್ಪ ಕಗ್ಗೂಡೆ, ಯಂಕಪ್ಪ ಲಕ್ಷ್ಮೇಶ್ವರ, ಸಿದ್ದಪ್ಪ ಒಡೆಯರ, ಭಾಗಪ್ಪ ನಡಟ್ಟಿ, ಅಶೋಕ ಯಳ್ಳೂರ, ರಮೇಶ ಪಾಟೀಲ, ಮಲ್ಲಪ್ಪ ನಡಟ್ಟಿ, ಯಲ್ಲಪ್ಪ ಕುಲಗುಡೆ, ಮಲ್ಲಪ್ಪ ಕುಲಗುಡೆ ಸೇರಿ ಅನೇಕರು ಇದ್ದರು.



# ನೂತನ ಕೊಠಡಿಗಳಿಗೆ ನಿರ್ಮಾಣಕ್ಕೆ ಭೂಮಿಪೂಜೆ




**ಗದಗ :** ನಗರದ ಕಳಸಾಪೂರ ರಸ್ತೆಯಲ್ಲಿರುವ ರಾಕೇಶ ಸಿದ್ದರಾಮಯ್ಯ ಟ್ರಸ್ಟ್ ಅಡಿಯಲ್ಲಿ ನಿರ್ಮಾಣವಾಗುತ್ತಿರುವ ಕಾಲೇಜಿನ ನೂತನ ಕೊಠಡಿಗಳ ನಿರ್ಮಾಣ ಕಾಮಗಾರಿಗೆ ರೋಣ ಶಾಸಕ ಹಾಗೂ ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಎಸ್.ಪಾಟೀಲ ಅವರು ಭೂಮಿಪೂಜೆ ನೆವೇರಿಸಿದರು.

ಈ ಸಂದರ್ಭದಲ್ಲಿ ರಾಕೇಶ ಸಿದ್ದರಾಮಯ್ಯ ಟ್ರಸ್ಟ್ ಅಧ್ಯಕ್ಷ ರಾಮಕೃಷ್ಣ ರೊಳ್ಳಿ, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರ ಅಪ್ತಕಾರ್ಯದರ್ಶಿ ಅಶೋಕ ಮಿರ್ಜಿ, ವೈ.ಬಿ.ಬಾಣಾಪೂರ, ವಿ.ಆರ್. ಗುಡಿಸಾಗರ, ಬಾವಿಕಟ್ಟಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆಯ ನಿರ್ದೇಶಕಿ ದ್ರಾಕ್ಷಾಯಣಿ ಪಾಟೀಲ, ವೈ.ಬಿ.ಕತ್ತಿ. ಮಲ್ಲೂರ ಬಸವರಾಜ, ಮಹಾಂತೇಶ ಕೆ.ಬಸವರಾಜ ನವಲಗುಂದ, ಯೂಸೂಪ ಇಟಗಿ, ಕೆ.ಬಿ.ಕಂಬಳಿ, ಯಲ್ಲಪ್ಪ ಗುರಿಕಾರ, ಶಿವಣ್ಣ ಸಿಂಗಟಾಲಕೇರಿ, ಬಸಪ್ಪ ಹ್ಯಾಟಿ, ಬಸವರಾಜ ಲದ್ದಿ, ಪ್ರಾ. ರಮೇಶ ವಡವಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

## ಅ. 24 ರಂದು ಕರ್ನಾಟಕ ಏಕೀಕರಣ ವಿಶೇಷ ಉಪನ್ಯಾಸ ಕಾರ್ಯಕ್ರಮ

**ಧಾರವಾಡ:** ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ಆಶ್ರಯದಲ್ಲಿ ಕರ್ನಾಟಕ ಏಕೀಕರಣ–ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಅಕ್ಟೋಬರ್ 24, 2025 ರಂದು ಬೆಳಿಗ್ಗೆ 10 ಗಂಟೆಗೆ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗಿದೆ.

ಕರ್ನಾಟಕ ವಿದ್ಯಾವರ್ಧಕ ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ ಅವರು ಕಾರ್ಯಕ್ರಮ ಉದ್ಘಾಟಿಸುವರು. ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ (ರಿ) ಅಧ್ಯಕ್ಷ ರಂಜಾನ್ ದುರ್ಗಾ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ಶ್ರೀನಿವಾಸ ವಾಡಪ್ಪಿ ಅವರು ಕರ್ನಾಟಕ ಏಕೀಕರಣ ಚರಿತ್ರೆಯ ಕುರಿತು, ಕರ್ನಾಟಕ ಏಕೀಕರಣ ಚಳುವಳಿಯಲ್ಲಿ ಮಹಿಳೆಯರ ಪಾತ್ರದ ಕುರಿತು ಡಾ. ವೀಣಾ ಬಿರಾದಾರ ಅವರು ವಿಶೇಷ ಉಪನ್ಯಾಸ ನೀಡುವರು ಎಂದು ಟ್ರಸ್ಟ್ ಸದಸ್ಯ ಕಾರ್ಯದರ್ಶಿ ಕುಮಾರ ಬೆಕ್ಕೇರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ವಾಲ್ಮೀಕಿ ಜಯಂತಿಯಲ್ಲಿ ದಟ್ಟಿ ಕುಣಿತ

**ಗೋಕಾಕ:** ಇಲ್ಲಿಯ ಕನ್ನಡ ಜಾನಪದ ಸಂಸ್ಥೆಯ ಅಡಿಯಲ್ಲಿ ಹಡಗಿನಾಳ ಶ್ರೀ ಮುತ್ತೇಶ್ವರ ದಟ್ಟಿ ಕುಣಿತ ಮೇಳವು ಪ್ರದರ್ಶನ ನೀಡಿತು. ಈ ತಂಡಕ್ಕೆ ಅಧ್ಯಕ್ಷರಾದ ಡಾ ಉದ್ದಣ್ಣಾ ಗೌಡರ ವಕೀಲರು ನಿರ್ದೇಶನ ನೀಡಿ ಕಾರ್ಯಕ್ರಮ ಯಶಸ್ವಿಗೊಳಿಸಿದರು. ರಾಮಪ್ಪಾ ವಡೇರ ಹಾಗೂ ತಂಡದ ಸದಸ್ಯರು ಪ್ರದರ್ಶನ ನೀಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಸತೀಶ್ ಜಾರಕಿಹೊಳಿ, ಹಾಗೂ ಪ್ರಮುಖ ಸಚಿವರು, ಅಧಿಕಾರಿಗಳು ಉಪಸ್ಥಿತರಿದ್ದರು. ಬಸವೇಶ್ವರ ವೃತ್ತದಿಂದ ಮೆರವಣಿಗೆ ಪ್ರಾರಂಭವಾಗಿ ವಿಧಾನಸೌಧ ಪಶ್ಚಿಮ ಬಾಗದಿಂದ ಬ್ಯಾಂಕ್ವೆಟ್ ಹಾಲವರೆಗೆ ಜರುಗಿತು. ಮಹರ್ಷಿ ವಾಲ್ಮೀಕಿ ಅವರ ಭವ್ಯ ಮೂರ್ತಿಗೆ ಮುಖ್ಯ ಮಂತ್ರಿಗಳು, ಅಧಿಕಾರಿಗಳು ಪೂಜೆ ನೆರವೇರಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಸುಮಾರು 20 ಕಲಾ ತಂಡಗಳು ಮೆರವಣಿಗೆಯಲ್ಲಿ ಭಾಗವಹಿಸಿ ಪ್ರದರ್ಶನ ನೀಡಿದವು.

## ಆಯ್ಕೆ ಪಟ್ಟಿ ಪ್ರಕಟ: ಆಕ್ಷೇಪಣೆ ಸಲ್ಲಿಸಿ

**ಕಾರವಾರ:** ಉತ್ತರ ಕನ್ನಡ ಜಿಲ್ಲೆಯಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನ ಅಡಿಯಲ್ಲಿ ಸಂಚಾರಿ ಆರೋಗ್ಯ ಘಟಕಗಳಲ್ಲಿ ಖಾಲಿರುವ ಶುಶ್ರೂಷಾಧಿಕಾರಿಗಳ ಮತ್ತು ಪ್ರಯೋಗ ಶಾಲಾ ತಂತ್ರಜ್ಞರ ಹುದ್ದೆಗಳನ್ನು ಪಡೆಯಲು ತಾತ್ಕಾಲಿಕವಾಗಿ ಆಯ್ಕೆಯಾದ ಮತ್ತು ಕಾಯ್ದಿರಿಸಿದ ಪಟ್ಟಿಯನ್ನು ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳ, ಕಚೇರಿ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಕಾರವಾರದಲ್ಲಿ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ಈ ಕುರಿತು ಏನಾದರೂ ಆಕ್ಷೇಪಣೆಗಳಿದ್ದಲ್ಲಿ ಅ.29 ರ ವರೆಗೆ ಖುದ್ದಾಗಿ (ರಜಾ ದಿನಗಳನ್ನು ಹೊರತುಪಡಿಸಿ) ಕಚೇರಿ ಅವಧಿಯಲ್ಲಿ ಜಿಲ್ಲಾ ಆರ್.ಸಿ.ಹೆಚ್ ಅಧಿಖಾರಿಗಳ ಕಚೇರಿಯಲ್ಲಿ ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಅಧಿಕಾರಿ ತಿಳಿಸಿದ್ದಾರೆ.

### ಕೊಪ್ಪಳ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮದಲ್ಲಿ ಶಾಸಕ ಕೆ.ರಾಘವೇಂದ್ರ ಹಿಟ್ನಾಳ ಅಭಿಮತ

# ಯುವಜನೋತ್ಸವ ಪ್ರತಿಭೆ ಗುರುತಿಸಲು ಉತ್ತಮ ವೇದಿಕೆ

**ಕೊಪ್ಪಳ:** ನಮ್ಮ ರಾಜ್ಯ ಸರ್ಕಾರ ಯುವ ಸಬಲಿಕರಣಕ್ಕಾಗಿ ಯುವಜನೋತ್ಸವ ದಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ. ಯುವಜನರಲ್ಲಿರುವ ಜನಪದ ಕಲೆ, ಸಾಹಿತ್ಯ ಮತ್ತು ಕ್ರೀಡೆಯಂತಹ ಪ್ರತಿಭೆಗಳನ್ನು ಗುರುತಿಸಲು ಯುವಜನೋತ್ಸವ ಕಾರ್ಯಕ್ರಮವು ಒಂದು ಉತ್ತಮ ವೇದಿಕೆಯಾಗಿದೆ ಎಂದು ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ್ ಹೇಳಿದರು.

ಅವರು ಶುಕ್ರವಾರ ಕೊಪ್ಪಳ ನಗರದ ಸಾಹಿತ್ಯ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೊಪ್ಪಳ ಹಾಗೂ ರಾಜ್ಯ ಯುವ ಸಂಘಗಳ ಒಕ್ಕೂಟ (ರಿ), ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಕೊಪ್ಪಳ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದರು.

ಯುವಜನತೆಯಲ್ಲಿರುವ ಪ್ರತಿಭೆಯನ್ನು ಪ್ರದರ್ಶನ ಮಾಡಲು ಅವಕಾಶಗಳನ್ನು ಕಲ್ಪಿಸಿ, ಅವರಿಗೆ ರಾಜ್ಯ, ರಾಷ್ಟ್ರ ಮಟ್ಟದಲ್ಲಿ ತಮ್ಮ ಕಲೆಯ ನೈಪುಣ್ಯತೆಯನ್ನು ಪ್ರದರ್ಶನ ಮಾಡುವುದಕ್ಕಾಗಿ ಯುವಜನೋತ್ಸವದಂತಹ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಯುವ ಜನತೆ ಇಂತಹ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮಲ್ಲಿ ಅಡಗಿರುವ ಪ್ರತಿಭೆಯನ್ನು ಪ್ರದರ್ಶಿಸಬೇಕು ಎಂದು ತಿಳಿಸಿದರು.

ನಮ್ಮ ದೇಶ ಇಡೀ ವಿಶ್ವದಲ್ಲೇ ಅತೀ ಹೆಚ್ಚು ಜನಸಂಖ್ಯೆಯನ್ನು ಹೊಂದಿರುವ ದೇಶವಾಗಿದ್ದು, ಆದರೆ, ಕಲೆ, ಸಂಗೀತ ಮತ್ತು ವಿವಿಧ ಕ್ರೀಡೆಗಳಲ್ಲಿ ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸುವವರ ಸಂಖ್ಯೆ ಕಡಿಮೆಯಿದೆ. ಹಾಗಾಗಿ ಕಲೆ, ಸಂಗೀತ ಮತ್ತು ವಿವಿಧ ಕ್ರೀಡೆಗಳಲ್ಲಿ ಯುವಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವುದಕ್ಕಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವು ಮೂಲಕ ಅವರಿಗೆ ಉತ್ತೇಜಿಸಲಾಗುತ್ತಿದೆ. ಅಂತಹ ಕಾರ್ಯಕ್ರಮಗಳ ಸದುಪಯೋಗ ಪಡೆದುಕೊಂಡು ಮುಂದಿನ ದಿನಗಳಲ್ಲಿ ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸುವವರ ಸಂಖ್ಯೆ ಹೆಚ್ಚಾಗಬೇಕೆಂದು ಹೇಳಿದರು.




ದೇಶದ ಅತ್ಯುನ್ನತ ಪ್ರಶಸ್ತಿಗಳಲ್ಲೊಂದಾದ ಪದ್ಮಶ್ರೀ ಪ್ರಶಸ್ತಿ ಪಡೆದ ಬೀಮವ್ವ ಶಿಳ್ಳೇಕ್ಯಾತರ್ ಅವರು ನಮ್ಮ ಜಿಲ್ಲೆಯ ಹೆಮ್ಮೆಯಾಗಿದ್ದಾರೆ. ಅವರಲ್ಲಿರುವ ಪ್ರತಿಭೆಯು ಅವರನ್ನು ಹಳ್ಳಿಯಿಂದ ರಾಷ್ಟ್ರ ಮಟ್ಟದಲ್ಲಿ ಗುರುತಿಸುವಂತೆ ಮಾಡಿದೆ. ಪದ್ಮಶ್ರೀ ಪುರಸ್ಕೃತರಾದ ಬೀಮವ್ವ ಶಿಳ್ಳೇಕ್ಯಾತರ್ ಅವರು 103 ವರ್ಷದ ತಮ್ಮ ಇಳಿವಯಸ್ಸಿನಲ್ಲೂ ತಮ್ಮಲ್ಲಿನ ಕಲೆಯನ್ನು ಯಾವ ರೀತಿಯಲ್ಲಿ ಪ್ರದರ್ಶಿಸುತ್ತಿದ್ದಾರೆ. ಅವರನ್ನು ನಾವೆಲ್ಲರೂ ಸ್ಪೂರ್ತಿಯಾಗಿಸಿಕೊಳ್ಳಬೇಕು. ವಿಶೇಷವಾಗಿ ನಮ್ಮ ಯುವಜನರು ಯಾವುದೇ ರೀತಿಯಲ್ಲಿ ಹಿಂಜರಿತ ತೋರದೆ ಸ್ಪರ್ಧೆಗಳಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿ, ನಮ್ಮ ಜಿಲ್ಲೆ, ರಾಜ್ಯ ಮತ್ತು ದೇಶಕ್ಕೆ ಉತ್ತಮ ಹೆಸರು ತರುವರಂತವರಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಪದ್ಮಶ್ರೀ ಪುರಸ್ಕೃತರಾದ ಭೀಮವ್ವ ದೊಡ್ಡಬಾಳಪ್ಪ ಶಿಳ್ಳೇಕ್ಯಾತರ್ ಅವರು, ಇಂದಿನ ಮಕ್ಕಳು ಮತ್ತು ಯುವ ಸಮುದಾಯವು ಮೊಬೈಲ್ ಬಳಕೆಗೆ ಹೆಚ್ಚು ಸಮಯವನ್ನು ವ್ಯಯ ಮಾಡುತ್ತಾರೆ. ಕಲೆ, ಸಾಹಿತ್ಯ ಮತ್ತು ಕ್ರೀಡೆಗಳಲ್ಲಿ ಭಾಗವಹಿಸಿ, ತಮ್ಮಲ್ಲಿರುವ ಪ್ರತಿಭೆಯನ್ನು ಪ್ರದರ್ಶಿಸಬೇಕು. ಪೋಷಕರು ತಮ್ಮ ಮಕ್ಕಳಿಗೆ ಹೆಚ್ಚು ಮೊಬೈಲ್ ಬಳಕೆ ಮಾಡದಂತೆ ತಿಳಿ ಹೇಳಬೇಕು. ಅದರ ಬದಲಿಗೆ ಸಾಂಸ್ಕೃತಿಕ ಕಾರ್ಯಕ್ರಮಗಳು ಮತ್ತು ವಿವಿಧ ಕ್ರೀಡಾ ಸ್ಪರ್ಧೆಗಳಲ್ಲಿ ಪಾಲ್ಗೊಳ್ಳಲು ಅವರಿಗೆ ಪ್ರೆರೆಪಿಸಬೇಕು ಎಂದು ಹೇಳಿದರು.

ಕೊಪ್ಪಳ ನಗರಸಭೆಯ ಅಧ್ಯಕ್ಷರಾದ ಅಮ್ಜದ್ ಪಟೇಲ್ ಅವರು ಮಾತನಾಡಿ, ಯುವಕರು ಸಹ ನಮ್ಮ ದೇಶದ ಬೆನ್ನೆಲುಬು ಮತ್ತು ಭವ್ಯ ಪ್ರಜೆಗಳಾಗಿದ್ದಾರೆ. ನಮ್ಮ ರಾಜ್ಯ ಸರ್ಕಾರವು ಯುವಕರು ಮತ್ತು ಮಹಿಳೆಯರಿಗಾಗಿ ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ ಎಂದರು.

ಕೊಪ್ಪಳ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಅವರು ಮಾತನಾಡಿದರು. ಹೊಲಿಗೆ ಯಂತ್ರ ವಿತರಣೆ: ಮಹಿಳೆಯರ ಸ್ವಾವಲಂಬನೆ ಬದುಕನ್ನು ಕಟ್ಟುವ ನಿಟ್ಟಿನಲ್ಲಿ ರಾಜ್ಯ ಸರ್ಕಾರದ ಡಿ. ದೇವರಾಜ್ ಅರಸು ಅಭಿವೃದ್ಧಿ ನಿಗಮ ವತಿಯಿಂದ ಅರ್ಹ ಮಹಿಳಾ ಫಲಾನುಭವಿಗಳಿಗೆ ಹೊಲಿಗೆ ಯಂತ್ರಗಳನ್ನು ಇದೇ ಸಂದರ್ಭದಲ್ಲಿ ವಿತರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟ ಹಾಗೂ ಕನ್ನಡ ಜಾನಪದ ಪರಿಷತ್ತಿನ ರಾಜ್ಯ ಅಧ್ಯಕ್ಷರಾದ ಡಾ. ಎಸ್.ಬಾಲಾಜಿ, ರಾಜ್ಯ ಯುವ ಪ್ರಶಸ್ತಿ ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಶರಣಪ್ಪ ವಡಿಗೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ವಿಠ್ಠಲ್ ಬಿ. ಜಾಬಗೌಡರ, ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟದ ಜಿಲ್ಲಾ ಅಧ್ಯಕ್ಷರಾದ ಮಂಜುನಾಥ ಜಿ. ಗೊಂಡಬಾಳ, ತಾಲ್ಲೂಕು ಕ್ರೀಡಾಧಿಕಾರಿ ಶರಬಸಪ್ಪ ಬಂಡಿಹಾಳ ಸೇರಿದಂತೆ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಸಹಾಯಕ ಕ್ರೀಡಾಧಿಕಾರಿಗಳು, ರಾಜ್ಯ ಮತ್ತು ಜಿಲ್ಲಾ ಯುವ ಪ್ರಶಸ್ತಿ ಪುರಸ್ಕೃತರು, ಯುವ ಸಂಘಗಳ ಒಕ್ಕೂಟಗಳು ಹಾಗೂ ನೋಂದಾಯಿತ ಯುವ ಮಂಡಳಿಗಳು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಸಾಹಿತ್ಯ ಅಧ್ಯಯನದಿಂದ ಜ್ಞಾನದ ಸಾಕ್ಷಾತ್ಕಾರವಾಗುತ್ತದೆ

**ಕೊಪ್ಪಳ:** ಪ್ರಸ್ತುತ ದಿನಗಳಲ್ಲಿ ಲೇಖಕರ ಜೊತೆಗೆ ವಿಮರ್ಶಕರ ಅಗತ್ಯವಿದೆ. ಸಾಹಿತ್ಯವನ್ನು ಮೌಲ್ಯಮಾಪನ ಮಾಡುವ ಕಾರ್ಯ ನಿರಂತರವಾಗಿ ಸಾಬೇಕು. ಇಂತಹ ವಿಚಾರ ಸಂಕಿರಣಗಳು ಸಾಹಿತ್ಯವನ್ನು ಚರ್ಚಿಸಿ ಮೌಲ್ಯಮಾಪನ ಮಾಡಿ, ಸಾಹಿತ್ಯ ಸತ್ವ ಹಾಗೂ ಗಟ್ಟಿ ವಿಚಾರಗಳನ್ನು ಸಾಹಿತ್ಯ ಆಸಕ್ತರಿಗೆ ತಲುಪಿಸಿದಾಗ ವಿಚಾರ ಸಂಕಿರಣದ ಉದ್ದೇಶ ಸಾಕಾಗೊಳ್ಳುತ್ತವೆ. ನೂರಾರು ವರ್ಷಗಳ ಹಿಂದೆ ಜನಿಸಿದ ಕಾರಾಂತರು ಇಂದಿಗೂ ಪ್ರಸ್ತುತವಾಗಿದ್ದಾರೆ ಎಂದರೆ ಅವರ ವಿಚಾರಗಳೆ ಕಾರಣ ಎಂದು ಕಲಬುರಗಿಯ ಶರಣಬಸವ ವಿಶ್ವವಿದ್ಯಾಲಯದ ಕುಲಸಚಿವರಾದ ಪ್ರೊ. ಎಸ್.ಜಿ. ಡೊಳ್ಳೆಗೌಡರ್ ಹೇಳಿದರು.

ನಗರದ ಶ್ರೀ ಗವಿಸಿದ್ಧೇಶ್ವರ ಪದವಿ ಮಹಾವಿದ್ಯಾಲಯದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಡಾ. ಶಿವರಾಮ ಕಾರಂತ ಟ್ರಸ್ಟ್, ಉಡುಪಿ, ಜಿಲ್ಲೆ. ಹಾಗೂ ಮಹಾವಿದ್ಯಾಲಯದ, ಕನ್ನಡ ವಿಭಾಗ ಇವರ ಸಹಯೋಗದೊಂದಿಗೆ ಆಂತರಿಕ ಗುಣಮಟ್ಟ ಭರವಸೆ ಕೋಶದ ಅಡಿಯಲ್ಲಿ ಶುಕ್ರವಾರ ಅಯೋಜಿಸಿದ 'ಡಾ. ಶಿವರಾಮ ಕಾರಂತರ ಸಾಹಿತ್ಯ ಮತ್ತು ವೈಚಾರಿಕತೆ' ಕುರಿತ ಒಂದು ದಿನದ ರಾಷ್ಟ್ರೀಯ ವಿಚಾರ ಸಂಕಿರಣವನ್ನು ಉಧ್ಘಾಟಿಸಿ ಮಾತನಾಡಿದ ಅವರು ಸಾಹಿತ್ಯ ಒದುವದೆಂದರೆ ಬದುಕನ್ನು ತಿಳಿದುಕೊಳ್ಳುವುದು. ಸಾಹಿತ್ಯ ಅಧ್ಯಯನದಿಂದ ಜ್ಞಾನದ ಸಾಕ್ಷಾತ್ಕಾರವಾಗುತ್ತದೆ ಅಂತಹ ಬದುಕಿನ ಜ್ಞಾನ ಮತ್ತು ಅನುಭವವನ್ನು ಕಟ್ಟಿಕೊಟ್ಟವರು ಡಾ. ಶಿವರಾಮ ಕಾರಾಮತರಾಗಿದ್ದಾರೆ. ತಾವು ಸಾಹಿತ್ಯದ ಜೊತೆಗೆ ಕೌಶಲ್ಯಾಧಾರಿತ ಜ್ಞಾನವನ್ನು ಪಡೆದುಕೊಳ್ಳಬೇಕು ಎಂದು ಹೇಳಿದರು.



ನಂತರ ಆಶಯ ನುಡಿಗಳನ್ನಾಡಿದ ಡಾ. ಶಿವರಾಮ ಕಾರಂತ ಟ್ರಸ್ಟ್‌ನ ಅಧ್ಯಕ್ಷರಾದ ಡಾ. ಗಣನಾಥ ಶೆಟ್ಟಿ ಎಕ್ಕಾರು ಮಾತನಾಡಿ ತಾವು ಬೆಳೆಯಲು ಕಾಲದ ಮಹತ್ವವನ್ನು ನಾವು ಅರ್ಥಮಾಡಿಕೊಳ್ಳಬೇಕು. ಸಾಹಿತ್ಯದಲ್ಲಿ ಬಹುಶಿಸ್ತಿನ ಅಧ್ಯಯನದ ಅಗತ್ಯವಾಗಿದೆ. ಕಾರಾಂತರ ಸಾಹಿತ್ಯ ಸಾಹಿತ್ಯದ ಒಳನೋಟಗಳನ್ನು ತಾವು ಅಧ್ಯಯನಗೈಯ್ಯಬೇಕು ಎಂದರು.

ಪ್ರಥಮದರ್ಜೆ ಕಾಲೇಜಿನ ಪ್ರಾಚಾರ್ಯ ಬಸಂತಪ್ಪ ಹೊಸಳ್ಳಿ, ಉಡುಪಿಯ ಡಾ. ಶಿರಾಮ ಕಾರಂತ ಟ್ರಸ್ಟ್‌ನ ಸದಸ್ಯರಾದ ಸಂತೋಷ ನಾಯಕ ಪಟ್ಲಾ, ಪ್ರೊ. ಶರಣಬಸಪ್ಪ ಬಿಳಿಯಲೆ, ಡಾ. ದಯಾನಂದ ಸಾಳುಂಕೆ, ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಚನ್ನಬಸವ, ಆಯ್‌ಕ್ಯೂಎಸಿ ಸಂಯೋಜಕ ಡಾ. ಅರುಣಕುಮಾರ, ಉಪಪ್ರಾಚಾರ್ಯ ಡಾ. ಕರಿಬಸವೇಶ್ವರ, ಪ್ರಾಧ್ಯಾಪಕರಾದ ಡಾ. ಸುಂದರ ಮೇಟಿ, ಡಾ. ಪ್ರಶಾಂತ ಕೊಂಕಲ್, ಡಾ. ಸಿದ್ಧಲಿಂಗಪ್ಪ ಕೊಟ್ನೆಕಲ್, ವೆಂಕಟೇಶ ಬೋವಿ, ಸ್ವಾತಿ ಹಿರೇಮಠ, ಪ್ರತಿಭಾ ಚಿತ್ರಗಾರ, ಸಂಗೀತಾ ಮಸ್ಕಿ, ಪ್ರೀಯ ಪತ್ತಾರ, ಶ್ವೇತಾ ಗಿರಡ್ಡಿ, ಮಹಾಮತೇಶ ತವಳಗೇರಿ ಉಪಸ್ಥಿತರಿದ್ದರು.

## ಇಂದಿನಿಂದ ಶ್ರೀ ಭೀರದೇವರ ಜಾತ್ರಾ ಮಹೋತ್ಸವ

**ವಿಜಯಪುರ:** ತಾಲೂಕಿನ ನಾಗಠಾಣ ಗ್ರಾಮದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ದೀಪಾವಳಿ ಹಬ್ಬದ ನಿಮಿತ್ತ ಶ್ರೀ ಭೀರದೇವರ ಮತ್ತು ಪರಮಾನಂದ ದೇವರ ಜಾತ್ರಾ ಮಹೋತ್ಸವವು ದಿ:19–10–2025 ರಿಂದ 22–10–2025 ರವರೆಗೆ ವಿಜೃಂಭಣೆಯಿಂದ ಜರುಗಲಿದೆ.

ರವಿವಾರ ದಿ: 19–10–2025 ರಂದು ನೀರು ತುಂಬುವ ಹಬ್ಬ,ಈ ದಿನದಂದು ಹೂವಿನ ಹಚ್ಚಡ, ದೀವಟಿಗೆ ಆರತಿ ಕಾರ್ಯಕ್ರಮ ಇರುವದು. ಸೋಮವಾರ ದಿ: 20–10–2025 ರಂದು ಬೆಳಿಗ್ಗೆ 8 ಗಂಟೆಗೆ 8 ಕಿಮೀ ಗುಡ್ಡಗಾಡು ಓಟದ ಸ್ಪರ್ಧೆ ಶ್ರೀ ಅಕ್ಕಮಹಾದೇವಿ ಗುಡಿಯಿಂದ ಆರಂಭವಾಗುವದು. ಮುಂಜಾನೆ 9 ಕ್ಕೆ ಭೀರದೇವರ ಗುಡಿಯಲ್ಲಿ ಜೇವರ್ಗಿ ತಾಲೂಕಿನ ಕರ್ಜಗಿ ಗ್ರಾಮದ ಲಿಂಗರಾಯ ದೇವರ ಡೊಳ್ಳಿನ ಸಂಘ ಹಾಗೂ ಜತ್ತ ತಾಲೂಕಿನ ಭೌರಮ್ಮ ಕರಜಗಿ ಡೊಳ್ಳಿನ ಸಂಘದ ವತಿಯಿಂದ ಡೊಳ್ಳಿನ ಪದಗಳ ಹಾಡಿಕೆ ನಡೆಯುವದು.ಸಂಜೆ 6ಕ್ಕೆ ಕಗ್ಗೊಡ ದೇವರ,ಗೂಳಪ್ಪ ಪೂಜಾರಿಯ ಪಲ್ಲಕ್ಕಿಗಳ ಆಗಮನವಾಗುವದು. ರಾತ್ರಿ ಸೊಲ್ಲಾಪುರ ತಂಡದಿಂದ ಚಿತ್ರ ವಿಚಿತ್ರ ಮದ್ದು ಸುಡುವದು ಹಾಗೂ ಡೊಳ್ಳಿನ ಪದಗಳ ಹಾಡಿಕೆ ಇರುವದು.

ಮಂಗಳವಾರ ದಿ: 21–10 –2025 ರಂದು ನಸುಕಿನ 3 ಗಂಟೆಗೆ ಗೂಗದಡ್ಡಿಯಿಂದ ಮಹಾಲಕ್ಷ್ಮಿ ಪಲ್ಲಕ್ಕಿ ಆಗಮನ, ನಂತರ 4 ಗಂಟೆಗೆ ಭೀರದೇವರ ಶೃಂಗಾರ ಚೌಕಿಯೊಂದಿಗೆ ಭಕ್ತರ ಮನೆಗೆ ದರ್ಶನ ಕೊಡುತ್ತಾ, ಗಂಗೆ ಸೀತಾಳದಲ್ಲಿ ಪೂಜೆ ಮುಗಿಸಿ, ಅಲ್ಲಿ ಹೇಳಿಕೆ ಮುಗಿಸಿ, ಬಜಾರಕ್ಕೆ ಆಗಮನವಾಗಿ, ಅಲ್ಲಿ ಭಕ್ತರಿಗೆ ದರ್ಶನ ಕೊಟ್ಟು ನಂತರ ಗುಡಿಗೆ ಬರುವುದು. 3 ಗಂಟೆಗೆ ಶಾಲಾ ಆವರಣದಲ್ಲಿ ಭಾರ ಎತ್ತುವ ಸ್ಪರ್ಧೆ ಜರುಗಲಿದೆ. ಆ ಸ್ಪರ್ಧೆಯಲ್ಲಿ 207 ಕೆಜಿ ಗುಂಡು ಎತ್ತಿದವರಿಗೆ 1 ಕೆಜಿ ಬೆಳ್ಳಿಯ ಗದೆಯನ್ನು ವಿಶೇಷ ಬಹುಮಾನವಾಗಿ ಭೀರದೇವರ ಚೌಕಿ ಪೂಜಾರಿಗಳಾದ ಶ್ರೀ ಗೂಳಪ್ಪ ಪೂಜೇರಿ ಅವರು ನೀಡುವರು. ಸಂಜೆ 7ಕ್ಕೆ ಪರಮಾನಂದ ದೇವರ ಗುಡಿಯಲ್ಲಿ ಗೂಗದಡ್ಡಿಯ ಲಾಯಮ್ಮದೇವಿ ಗಾಯನ ಸಂಘ ಮತ್ತು ಕುರಗೋಟದ ಅಮೋಘಸಿದ್ದೇಶ್ವರ ಗಾಯನ ಸಂಘದ ವತಿಯಿಂದ ಡೊಳ್ಳಿನ ಪದಗಳು ಜರುಗುವವು.

ಬುಧವಾರ ದಿ: 22–10–2025 ರಂದು ಬೆಳಿಗ್ಗೆ 4 ಗಂಟೆಗೆ ಶ್ರೀ ಪರಮಾನಂದ ದೇವರ ಶೃಂಗಾರ ಚೌಕಿಯೊಂದಿಗೆ ಗೂಗದಡ್ಡಿಯ ಲಾಯಮ್ಮದೇವಿ ಸಂಘದ ಡೊಳ್ಳಿನ ವಾಲಗ,ಕರಡಿ ಮಜಲು ವಾದ್ಯ ಮೇಳದೊಂದಿಗೆ ಭಕ್ತರ ಮನೆಗೆ ಭೇಟಿ ನೀಡುತ್ತಾ, ಗಂಗೆ ಸೀತಾಳದಲ್ಲಿ ಪೂಜೆ ಸಲ್ಲಿಸಿ, 7 ಗಂಟೆಗೆ ಮುತ್ತಪ್ಪದೇವರ ಗುಡಿಯ ಮುಂದೆ ಮಳೆ–ಬೆಳೆ ಕುರಿತು ಹೇಳಿಕೆ ಹೇಳಿ, ಅಲ್ಲಿಂದ ಬಜಾರಕ್ಕೆ ಆಗಮನವಾಗಿ ಭಕ್ತರಿಗೆ ದರ್ಶನ ನೀಡಿ, ದೇವಸ್ಥಾನಕ್ಕೆ ಬರುವದು.

ಸಂಜೆ 4 ಗಂಟೆಗೆ 18 ರಿಂದ 40 ವಯಸ್ಸಿನವರಿಗೆ ಜಂಗಿ ಕುಸ್ತಿ ಸ್ಪರ್ಧೆ ನಡೆಯಲಿದೆ. ರಾತ್ರಿ 9 ಗಂಟೆಗೆ ಶ್ರೀ ಪುಟ್ಟರಾಜ ಕಲಾ ನಾಟ್ಯ ಸಂಘ ಜಮಖಂಡಿ ವತಿಯಿಂದ 'ದೇಸಾಯಿ ದರ್ಬಾರ್' ಎಂಬ ಸಾಮಾಜಿಕ ನಾಟಕ ನಡೆಯಲಿದೆ.

ಈ ಜಾತ್ರಾ ಮಹೋತ್ಸವದಲ್ಲಿ ನಿರಂತರ ಅನ್ನ ಪ್ರಸಾದ ವ್ಯವಸ್ಥೆ ಇದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪುನೀತರಾಗಬೇಕೆಂದು ಜಾತ್ರಾ ಕಮೀಟಿಯ ಅಧ್ಯಕ್ಷ ಪ್ರಭುಲಿಂಗ ಹಂಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಮಾಜದ ಸಬಲಿಕರಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಿ

**ಜಮಖಂಡಿ:** ಶೈಕ್ಷಣಿಕ ಹಾಗೂ ಸಾಮಾಜಿಕವಾಗಿ ಹಿಂದುಳಿದ ವಾಲ್ಮೀಕಿ ಸಮಾಜವನ್ನು ಮುಂದೆತ್ತುವ ಕಾರ್ಯ ನಡೆಯಬೇಕಿದೆ. ಸಮಾಜದ ಸಬಲಿಕರಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ನಗರದ ಬಸವ ಭವನದಲ್ಲಿ ಅಖಿಲ ಕರ್ನಾಟಕ ವಾಲ್ಮೀಕಿ ಮಹಾ ಸಭಾ ವತಿಯಿಂದ ಆಯೋಜಿಸಿದ್ದ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಡಾ. ಬಿ. ಆರ್. ಅಂಬೇಡ್ಕರ್ ಅವರ ಸಂವಿಧಾನದ ಫಲವಾಗಿ ಅನೇಕ ತುಳಿತಕ್ಕೊಳಗಾದ ಸಮಾಜಗಳು ಮುಖ್ಯ ವಾಹಿನಿಗೆ ಬರುವಂತಾಗಿದೆ. ಸರಕಾರ ಸಮಾಜದ ಅಭಿವೃದ್ಧಿಗೆ ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದು, ಅವುಗಳನ್ನು ಸದುಪಯೋಗಪಡಿಸಿಕೊಂಡು ಆರ್ಥಿಕ, ಸಾಮಾಜಿಕ ಮತ್ತು ರಾಜಕೀಯವಾಗಿ ಮುಂದೆ ಬರಬೇಕು ಎಂದು ಕರೆ ನೀಡಿದರು. ಮಹರ್ಷಿ ವಾಲ್ಮೀಕಿ ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಮಾತ್ರ ನಿಜವಾದ ಪ್ರಗತಿ ಸಾಧ್ಯ. ಸಮಾಜದ ಒಳಗಿನಿಂದಲೇ ಬದಲಾವಣೆ ಬರಬೇಕು ಎಂದರು



ಮಾಜಿ ಶಾಸಕ ಶ್ರೀಕಾಂತ ಕುಲಕರ್ಣಿ ಮಾತನಾಡಿ, ದೇಶಾದ್ಯಂತ ಜಾತಿಯತೆ ಹೆಚ್ಚುತ್ತಿರುವ ಹಿನ್ನೆಲೆ, ರಾಜಕೀಯ ಲಾಭಕ್ಕಾಗಿ ಜಾತಿಗಳನ್ನು ವಿಭಜಿಸುವ ಕೆಲಸ ನಡೆಯುತ್ತಿದೆ. ನಾವೆಲ್ಲ ಹಿಂದುಗಳು, ಸನಾತನ ಧರ್ಮದವರು ಎಂಬ ಭಾವನೆ ಬೆಳೆಸಿಕೊಳ್ಳಬೇಕು ಎಂದರು. ಮಾಜಿ ಶಾಸಕ ಆನಂದ ನ್ಯಾಮಗೌಡ ಅವರು ಸಮಾಜದ ಏಕತೆ ಕುರಿತಾಗಿ ಅಭಿಪ್ರಾಯ ವ್ಯಕ್ತಪಡಿಸಿದರು. ಬಬಲೇಶ್ವರದ ಶಿಕ್ಷಕ ಡಿ.ಜಿ. ನಾಯಕ ಅವರು ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮಕ್ಕೂ ಮುನ್ನ ನಗರದ ಹಳೆಯ ತಹಶೀಲ್ದಾರ ಕಚೇರಿಯಿಂದ ಬಸವ ಭವನದವರೆಗೆ ಭವ್ಯ ಮೆರವಣಿಗೆ ಜರುಗಿತು.

ಈ ಕಾರ್ಯಕ್ರಮದಲ್ಲಿ ಅಬಕಾರಿ ಸಚಿವ ಆರ್. ಬಿ. ತಿಮ್ಮಾಪೂರ, ನಗರಸಭೆ ಅಧ್ಯಕ್ಷ ಈಶ್ವರ ವಾಳೆಣ್ಣವರ, ವಾಲ್ಮೀಕಿ ಮಹಾ ಸಭಾದ ತಾಲೂಕು ಅಧ್ಯಕ್ಷ ಗಂಗಾಧರ ಮಾರಧಾನಿ, ಸಮಾಜ ಕಲ್ಯಾಣ ಅಧಿಕಾರಿ ಜಗದೇವ ಪಾರ್ಸೋಡಿ, ಶ್ರೀಶೈಲ ದಳವಾಯಿ, ಶಂಕರ ಲಮಾಣಿ ಹಾಗೂ ಅನೇಕ ಸಮಾಜ ಮುಖಂಡರು ಭಾಗವಹಿಸಿದ್ದರು.

## ರಾಜ್ಯೋತ್ಸವವನ್ನು ಅದ್ದೂರಿಯಾಗಿ ಆಚರಿಸಲು ಅಗತ್ಯ ಸಿದ್ಧತೆ

**ಸವದತ್ತಿ:** ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಶನಿವಾರ ಕರ್ನಾಟಕ ರಾಜ್ಯೋತ್ಸವ ಪೂರ್ವಭಾವಿ ಸಭೆ ನಡೆಯಿತು. ಶಾಸಕ ವಿಶ್ವಾಸ ವೈದ್ಯ ಮಾತನಾಡಿ, ಪ್ರತಿವರ್ಷದಂತೆ ಕನ್ನಡಾಂಬೆ ಭಾವಚಿತ್ರವನ್ನು ಬೆಳ್ಳಿ ರಥದಲ್ಲಿ ಜಾನಪದ ಕಲಾತಂಡ ಮತ್ತು ಆಶಾ ಅಂಗನವಾಡಿ ಕಾರ್ಯಕರ್ತೆಯರ ಪೂರ್ಣಕುಂಭ ಕಳಸದೊಂದಿಗೆ ಅದ್ದೂರಿ ಮೆರವಣಿಗೆ ಮಾಡಬೇಕು ಎಂದು ತಿಳಿಸಿದರು.

ಸರ್ಕಾರಿ ಕಚೇರಿ ಮತ್ತು ಮೆರವಣಿಗೆ ಸಾಗುವ ರಸ್ತೆಯಲ್ಲಿ ವಾಣಿಜ್ಯ ಮಳಿಗೆಗಳ ಮೇಲೆ ಕನ್ನಡ ಬಾವುಟ ಹಾರಿಸಲು ಕ್ರಮ ಕೈಗೊಳ್ಳಬೇಕು. ಮೆರವಣಿಗೆಯಲ್ಲಿ ಸಾಗುವ ಕನ್ನಡಾಂಬೆ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವಂತೆ ನಗರಸಭೆ ಕಾರ್ಯಕ್ರಮ ರೂಪಿಸಬೇಕು ಎಂದು ಹೇಳಿದರು.




ಈ ವೇಳೆ ತಹಶೀಲ್ದಾರ ಮಲ್ಲಿಕಾರ್ಜುನ ಹೆಗನ್ನವರ, ಪ್ರಬಾರಿ ಇಓ ಬಸವರಾಜ ಅಯ್ಯನಗೌಡ್ರ, ಉಪ ತಹಶೀಲ್ದಾರ ಎಮ್ ಎನ್. ಮಠದ, ಬಿಇಓ ಎ. ಎ. ಖಾಜಿ, ಕಸಾಪ ಅಧ್ಯಕ್ಷ ಡಾ. ವಾಯ್. ಎಂ. ಯ್ಯಾಕೋಳಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಕನ್ನಡ ಪರ ಸಂಘಟನೆಗಳ ಕಾರ್ಯಕರ್ತರು ಇದ್ದರು.

# ಬಿಳಿಜೋಳ ಉತ್ಪನ್ನ ಖರೀದಿ ಕೇಂದ್ರ ಆರಂಭಕ್ಕೆ ಸೂಚನೆ

**ಹಾವೇರಿ:** ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ 2025–26ನೇ ಸಾಲಿನ ಮುಂಗಾರು ಮತ್ತು ಹಿಂಗಾರು ಋತುವಿನ ಬಿಳಿಜೋಳ ಹೈಬ್ರೀಡ್/ಮಾಲ್ದಂಡಿ ಉತ್ಪನ್ನ ಖರೀದಿ ಕೇಂದ್ರಗಳನ್ನು ಜಿಲ್ಲೆಯ ವಿವಿಧ ತಾಲೂಕು ಕೇಂದ್ರಗಳಲ್ಲಿ ಆರಂಭಿಸುವಂತೆ ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ಅವರು ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕನಿಷ್ಠ ಬೆಂಬಲ ಬೆಲೆಯಡಿ ಸರ್ಕಾರದ ಮಾರ್ಗಸೂಚಿಯಂತೆ ಬಿಳಿಜೋಳ ಹೈಬ್ರೀಡ್/ಮಾಲ್ದಂಡಿ ಖರೀದಿಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಬೆಂಬಲ ಬೆಲೆ:** ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಸರ್ಕಾರ ಮುಂಗಾರು ಮತ್ತು ಹಿಂಗಾರು ಋತುವಿನ ಬಿಳಿಜೋಳ ಬೈಬ್ರೀಡ್ ಪ್ರತಿ ಕ್ವಿಂಟಾಲ್‌ಗೆ ರೂ.3,699 ಹಾಗೂ ಮಾಲ್ದಂಡಿ ಪ್ರತಿ ಕ್ವಿಂಟಾಲ್‌ಗೆ ರೂ. 3,749ಗಳಂತೆ ಖರೀದಿಗೆ, ಮುಂಗಾರು ಋತುವಿನ ರಾಗಿ ಪ್ರತಿ ಕ್ವಿಂಟಾಲ್‌ಗೆಗೆ ರೂ.4,886 ಮತ್ತು ಕಿರು ಸಿರಿಧಾನ್ಯ ಸಾಮೆ ಮತ್ತು ನವಣೆ ರೂ.4,886ರಂತೆ ದರ ನಿಗದಿಪಡಿಸಿದೆ.

ಆದರೆ ಜಿಲ್ಲೆಯಲ್ಲಿ ಮುಂಗಾರು ಋತುವಿನಲ್ಲಿ ರಾಗಿ ಕೇವಲ 23 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ ಹಾಗೂ ಕಿರುಸಿರಿ ಧಾನ್ಯಗಳಾದ ಸಾಮೆ ಮತ್ತು ನವಣೆ ಉತ್ಪನ್ನ ಜಿಲ್ಲೆಯಲ್ಲಿ ಬಿತ್ತನೆಯಾಗದ ಪ್ರಯುಕ್ತ ಈ ಉತ್ಪನ್ನಗಳ ಖರೀದಿ ಕೇಂದ್ರ ತೆರೆಯುವ ಅವಶ್ಯಕತೆ ಇರುವುದಿಲ್ಲವೆಂದು ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕರು ತಿಳಿಸಿದ ಹಿನ್ನಲೆಯಲ್ಲಿ, ಬಿಳಿಜೋಳ ಹೈಬ್ರೀಡ್/ಮಾಲ್ದಂಡಿ ಉತ್ಪನ್ನ ಖರೀದಿ ಅಗತ್ಯ ಸ್ಥಳಗಳಲ್ಲಿ ಆರಂಭಿಸಬೇಕು ಎಂದರು.

### ಖರೀದಿ ಕೇಂದ್ರ:

ಬೆಂಬಲ ಬೆಲೆ ಯೋಜನೆಯಡಿ ಬಿಳಿಜೋಳ ಹೈಬ್ರೀಡ್/ಮಾಲ್ದಂಡಿ ಉತ್ಪನ್ನ ಖರೀದಿ ಕೇಂದ್ರಗಳನ್ನು ಹಾವೇರಿ, ರಾಣೇಬೆನ್ನೂರು, ಶಿಗ್ಗಾಂವ ಹಾಗೂ ಸವಣೂರ ಎಪಿಎಂಸಿ ಯಾರ್ಡ್‌ಗಳಲ್ಲಿ ಆರಂಭಿಸಲು ಅಧಿಕಾರಿಗಳಿಗೆ ಸೂಚಿಸಿದರು.

### ಡಿಬಿಟಿ ಮೂಲಕ ಹಣ ಜಮೆ:

ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಖರೀದಿಸಿದ ಸೋಯಾಬಿನ್ ಹಾಗೂ ಶೇಂಗಾ ಉತ್ಪನದ ಮೊತ್ತವನ್ನು ರೈತರ ಹೆಸರಿನ ಆಧಾರ್ ಸಂಖ್ಯೆ ಜೋಡಣೆಯಾದ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ ಹಣ ಜಮೆ ಮಾಡಬೇಕು ಎಂದು ಸೂಚಿಸಿದರು.

**ನೋಂದಣಿ:** ದಿನಾಂಕ: 01–12–2025 ರಿಂದ 31–03–2026ರವರೆಗೆ ರೈತರ ನೋಂದಣಿ ಪ್ರಕ್ರಿಯೆ ಜರುಗಲಿದೆ. ದಿನಾಂಕ 01–01–2026 ರಿಂದ 31–03–2026ರವರೆಗೆ ನೋಂದಾಯಿತ ರೈತರಿಂದ ಬಿಳಿಜೋಳ ಹೈಬ್ರೀಡ್/ಮಾಲ್ದಂಡಿ ಉತ್ಪನ್ನ ಖರೀದಿಸಲು ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮವನ್ನು ಖರೀದಿ ಸಂಸ್ಥೆಯಾಗಿ ನೇಮಿಸಿ ಆದೇಶಿಸಲಾಗಿದೆ ಎಂದು ತಿಳಿಸಿದರು.

ಪ್ರತಿ ರೈತರಿಂದ ಪ್ರತಿ ಎಕರೆಗೆ 15ಕ್ವಿಂಟಲ್‌ನಂತೆ ಗರಿಷ್ಠ 150 ಕ್ವಿಂಟಲ್ ಬಿಳಿಜೋಳ ಹೈಬ್ರೀಡ್/ಮಾಲ್ದಂಡಿ ಉತ್ಪನ್ನ ಖರೀದಿಸಲು ಅವಕಾಶವಿದೆ. ಕನಿಷ್ಠ ಬೆಂಬಲ ಬೆಲೆಯಡಿ ಬಿಳಿಜೋಳ ಹೈಬ್ರೀಡ್/ಮಾಲ್ದಂಡಿ ಉತ್ಪನ್ನ ಖರೀದಿ ಉತ್ಪನ್ನ ಖರೀದಿ ಕೇಂದ್ರ ಆರಂಭಿಸಿರುವ ಕುರಿತಂತೆ ವ್ಯಾಪಕ ಪ್ರಚಾರನಡೆಸಿ, ಕರಪತ್ರ, ಬ್ಯಾನರ್ ಅಳಡಿಸುವ ಮೂಲಕ ರೈತರಿಗೆ ಮಾಹಿತಿ ತಲುಪಿಸಬೇಕು. ರೈತರಿಂದ ಖರೀದಿಸಿದ ಉತ್ಪನ್ನ ದಾಸ್ತಾನುಮಾಡಿಕೊಳ್ಳಲು ಮುಂಜಾಗ್ರತಾ ಕ್ರಮವಾಗಿ ಉಗ್ರಾಣಗಳನ್ನು ಕಾಯ್ದಿರಿಸಬೇಕು ಎಂದು ಸಂಬಂಧಪಟ್ಟ ಆಧಿಕಾರಿಗಳಿಗೆ ಸೂಚನೆ ನೀಡಿದರು.

**ನೋಡಲ್ ಅಧಿಕಾರಿಗಳ ನೇಮಕ:** ಬಿಳಿಜೋಳ ಖರೀದಿ ಕೇಂದ್ರದ ನೋಡಲ್ ಅಧಿಕಾರಿಗಳನ್ನಾಗಿ ಹಾವೇರಿ, ರಾಣೇಬೆನ್ನೂರು, ಶಿಗ್ಗಾಂವ, ಸವಣೂರು ಹಾಗೂ ಹಿರೇಕೆರೂರು ತಾಲೂಕಿನ ತಹಶೀಲ್ದಾರಗಳು ಮತ್ತು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿಗಳನ್ನು ನಿಯೋಜಿಸಲಾಗಿದೆ. ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಉಪನಿರ್ದೇಶಕರನ್ನು ಜಿಲ್ಲೆಯ ಎಲ್ಲಾ ಖರೀದಿ ಕೇಂದ್ರದ ಜಿಲ್ಲಾ ನೋಡಲ್ ಅಧಿಕಾರಿಯಾಗಿ ನಿಯೋಜಿಸಲಾಗಿದೆ.

**ಬಿತ್ತನೆ ಪ್ರದೇಶ:** ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯ 33 ಹೆಕ್ಟೇರ್ ಪ್ರದೇಶದಲ್ಲಿ ಬಿಳಿಜೋಳ ಹೈಬ್ರೀಡ್/ಮಾಲ್ದಂಡಿ ಬಿತ್ತೆನೆಯಾಗಿದೆ. ಹಿಂಗಾರು ಋತುವಿನಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಬಿಳಿಜೋಳ ಹೈಬ್ರೀಡ್/ಮಾಲ್ದಂಡಿ ಹುಟ್ಟುವಳಿ ಹೆಚ್ಚುವರಿ ಬಿತ್ತನೆಯಾಗುವ ಸಾಧ್ಯತೆ ಇದೆ ಎಂದು ಕೃಷಿ ಇಲಾಖೆ ಅಧಿಕಾರಿಗಳು ಮಾಹಿತಿ ನೀಡಿದರು.

ಸಭೆಯಲ್ಲಿ ಕೃಷಿ ಇಲಾಖೆ ಜಂಟಿ ನಿರ್ದೇಶಕರು, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ , ತೋಟಗಾರಿಕೆ ಇಲಾಖೆ ಅಧಿಕಾರಿಗಳು, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ಶಾಖಾ ವ್ಯವಸ್ಥಾಪಕರು, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿಗಳು ಇತರರು ಉಪಸ್ಥಿತರಿದ್ದರು.

## ಪ್ರತಿ ಎಕರೆಗೆ 50ಸಾವಿರ ಪರಿಹಾರಕ್ಕೆ ಆಗ್ರಹ

**ಬಬಲೇಶ್ವರ:** ಕಳೆದ ಐದು ತಿಂಗಳಿಂದ ವಿಜಯಪುರ ಜಿಲ್ಲೆಯ ಬಬಲೇಶ್ವರ ತಾಲೂಕಿನ ಪ್ರತಿ ಹಳ್ಳಿಯಲ್ಲಿ ಸುರಿಯುತ್ತಿರುವ ವಿಪರೀತ ಮಳೆಯಿಂದಾಗಿ ಎಲ್ಲ ಬೆಳೆಗಳು ಸಂಪೂರ್ಣ ನೀರಲ್ಲಿ ನಿಂತು ಹಾಳಾಗಿವೆ.

ಜಂಟಿ ಸಮೀಕ್ಷೆ ನೆಪದಲ್ಲಿ ಯಾವುದೇ ಸಮಯವನ್ನು ಹಾಳು ಮಾಡದೆ ತಾಲೂಕಿನ ಪ್ರತಿಯೊಂದು ಗ್ರಾಮದ ಪ್ರತಿಯೊಬ್ಬ ರೈತರಿಗೂ ಒಣ ಬೇಸಾಯಕ್ಕೆ 50,000 ಹಾಗೂ ನೀರಾವರಿ ಭೂಮಿಗೆ ಒಂದು ಲಕ್ಷ ರೂಪಾಯಿ ಹಾಗೆ ಬಹು ವಾರ್ಷಿಕ ಬೆಳೆಗಳಿಗೆ 2ಲಕ್ಷ ಪರಿಹಾರವನ್ನು ಕೊಡಬೇಕೆಂದು ಈ ಮೂಲಕ ಜಿಲ್ಲಾಡಳಿತಕ್ಕೆ ಹಾಗೂ ರಾಜ್ಯ ಸರ್ಕಾರಕ್ಕೆ ಒತ್ತಾಯ ಮಾಡುತ್ತಿದ್ದೇವೆ ಎಂದು ಜಿಲ್ಲಾಧ್ಯಕ್ಷರಾದ ಸಂಗಮೇಶ ಸಗರ ಅಗ್ರಹ ಮಾಡಿದರು

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಬಬಲೇಶ್ವರ ತಾಲೂಕು ದಂಡಾಧಿಕಾರಿಗಳ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿ ಅವರು ಮಾತನಾಡಿದರು. ವಿಪರೀತ ಮಳೆಯಿಂದಾಗಿ ತಾಲೂಕಿನ ಕೃಷಿ ಬೆಳೆಗಳಾದ ತೊಗರಿ ಹತ್ತಿ ಮೆಕ್ಕೆಜೋಳ ಸಜ್ಜಿ ಸೇರಿದಂತೆ ಸಮಸ್ತ ಬೆಳೆಗಳು ಹಾಳಾಗಿವೆ ದ್ರಾಕ್ಷಿ ದಾಳಿಂಬ್ರಿ ಲಿಂಬೆ, ಬಾಳೆ ಸೇರಿದಂತೆ ಎಲ್ಲ ಬೆಳೆಗಳಲ್ಲಿ ನೀರು ನಿಂತು ಹಾಳಾಗಿವೆ ಆದ್ದರಿಂದ ಯಾವುದೇ ಜಂಟಿ ಸಮೀಕ್ಷೆ ವೈಮಾನಿಕ ಸಮೀಕ್ಷೆ ಎಂದು ನೆಪ ಹೇಳದೆ 15 ದಿನದ ಒಳಗಾಗಿ ಜಿಲ್ಲೆಯ ಎಲ್ಲರಿಗೂ ಪರಿಹಾರ ಬರಲೇಬೇಕೆಂದು ಒತ್ತಾಯ ಮಾಡಲಾಯಿತು

ಸಮಸ್ತ ಬೆಳೆಗಳು ಕೂಡ ನಷ್ಟಗೊಂಡಿರುವ ಹಿನ್ನೆಲೆಯಲ್ಲಿ ಯಾರಿಗೂ ತಾರತಮ್ಯ ಮಾಡದೆ ಎಲ್ಲರಿಗೂ ನಷ್ಟ ಪರಿಹಾರವನ್ನು ಹಾಕಬೇಕು ಅದೇ ರೀತಿಯಾಗಿ ಫಸಲು ಭೀಮಾ ಯೋಜನೆಯ ವಿಮೇವೂ ಕೂಡ ಆದಷ್ಟು ಬೇಗನೆ ಕೊಡಬೇಕೆಂದರು

ಬಬಲೇಶ್ವರ ತಾಲೂಕಾ ಅಧ್ಯಕ್ಷರಾದ ಮಕಬುಲ್ ಕಿಜಿ ಅವರು ಮಾತನಾಡಿದರು. ನೆಪ ಮಾತ್ರಕ್ಕೆ ಸಮೀಕ್ಷೆ ಮಾಡಿ ಕಣ್ಣಿಗೆ ಕಾಣಬರುವ ಕೆಲವೇ ರೈತರಿಗೆ ನಷ್ಟ ಪರಿಹಾರ ಕೊಡುವುದಾಗಿ ವರದಿ ತಯಾರಿಸಿದ್ದೀರಿ ಆದರೆ ತಾಲೂಕಿನ ಎಲ್ಲಾ ಹಳ್ಳಿಯ ರೈತರಿಗೆ ಮಳೆಯಿಂದ ನಷ್ಟವಾಗಿದೆ. ಅವರೆಲ್ಲರಿಗೂ ಮತ್ತೊಮ್ಮೆ ಸಮೀಕ್ಷೆ ಮಾಡಿ ಅವರಿಗೂ ಪರಿಹಾರ ಕೊಡಿ ಎಂದರು.



ರೈತರಿಗೆ ತುಂಬಾ ಕಷ್ಟಗಳಿವೆ ಅವುಗಳಿಗೆ ಅನುಗುಣವಾಗಿ ಪರಿಹಾರ ನೀಡಲಿ ಸರ್ಕಾರ ಎಂದರು.

ಮನವಿ ಸ್ವೀಕರಿಸಿ ಮಾತನಾಡಿದ ತಹಸೀಲ್ದಾರ್ ಅವರು ಈಗಾಗಲೇ ಮೊದಲೇ ಹಂತದಲ್ಲಿ ನಷ್ಟಗೊಂಡ ರೈತರಿಗೆ ಪರಿಹಾರಕ್ಕೆ ಗುರುತಿಸಲಾಗಿತ್ತು, ಮತ್ತೆ ಇತ್ತೀಚಿಗೆ ಹೆಚ್ಚಿನ ಮಳೆ ಉಂಟಾಗಿ ಅನೇಕ ರೈತರ ಜಮೀನುಗಳಲ್ಲಿ ನೀರು ನಿಂತು ನಷ್ಟಗೊಂಡಿರುವ ಕುರಿತು ಪ್ರಥಮ ವರದಿಯನ್ನು ಆಯಾ ಗ್ರಾಮ ಪಂಚಾಯತ್ ಅಥವಾ ತಲಾಟಿ ಕಚೇರಿ ಮುಂದೆ ಅಂಟಿಸಲಾಗಿದೆ. ಇನ್ನು ಯಾವ್ ರೈತರು ನಷ್ಟಗೊಂಡು ಉಳಿದಿದ್ದರೆ ಅಂಥವರು ದಾಖಲೆಗಳನ್ನು ಕೊಡುವಂತೆ ತಿಳಿಸಿದರು.

ಈ ವೇಳೆ ಜಿಲ್ಲಾ ಸಂಚಾಲಕರಾದ ಸಂಗಪ್ಪ ಟಕ್ಕೆ, ತಾಲೂಕಾ ಉಪಾಧ್ಯಕ್ಷರಾದ ರಾಜುಗೌಡ ಬಿರಾದಾರ, ಅಪ್ಪಸಾಬ್ ವಾಲಿಕಾರ, ಆರ್. ಬಿ. ಮುಲ್ಲಾ, ಮುಖಂಡರಾದ ಎಂ. ಎ. ಕನ್ನೂರ್, ವಿ. ಎಸ್. ಕೊಡಬಾಗಿ, ರೇಖಾ ಹಿಟ್ನಾಳ ಸೇರಿದಂತೆ ಅನೇಕರು ಇದ್ದರು.

## ಕನ್ನಡ ಶಿಕ್ಷಣದ ತರಬೇತಿಗೆ ಅರ್ಜಿ ಆಹ್ವಾನ

**ಧಾರವಾಡ:** ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಕನ್ನಡ ಅಭಿವೃದ್ಧಿ ಯೋಜನೆಯಡಿ ಭಾರತೀಯ ಭಾಷಾ ಸಂಸ್ಥಾನ, ಮಾನಸ ಗಂಗೋತ್ರಿ ಮೈಸೂರು ಇವರಿಗೆ ಅಂಚೆ ಮೂಲಕ ಕನ್ನಡ ಶಿಕ್ಷಣ ಯೋಜನೆಗೆ ಪ್ರತಿ ವರ್ಷ ಅನುದಾನ ಬಿಡುಗಡೆ ಮಾಡುತ್ತಿದೆ. ಸಂಸ್ಥೆಯಿಂದ ಪ್ರಸಕ್ತ 2025–26 ನೇ ಸಾಲಿಗೆ ಅಂಚೆ ಮೂಲಕ ಕನ್ನಡ ಶಿಕ್ಷಣದ 39 ನೇಯ ತಂಡದ ತರಬೇತಿ ಆರಂಭಿಸಲಾಗುವುದು.

ಸದರಿ ಸಂಸ್ಥೆಯಿಂದ ಅರ್ಜಿಗಳನ್ನು ಪಡೆದು, ನವೆಂಬರ್ 30, 2025 ರೊಳಗಾಗಿ ಅರ್ಜಿಗಳನ್ನು ಸಲ್ಲಿಸಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ವಿಜಯ ಜ್ಯೋತಿ ರಥ ಆಗಮನ

**ಧಾರವಾಡ:** ಅಕ್ಟೋಬರ್ 19, 2025 ರಂದು ಬೆಳಗ್ಗೆ 11:30 ಗಂಟೆಗೆ ಕಿತ್ತೂರು ರಾಣಿ ಚನ್ನಮ್ಮ ಅವರ ವಿಜಯ ಜ್ಯೋತಿ ರಥವು ಧಾರವಾಡ ಜಿಲ್ಲೆಯ ಹಾರೋಬೆಳವಡಿ ಮಾರ್ಗವಾಗಿ ಧಾರವಾಡ ಜಿಲ್ಲಾಧಿಕಾರಿಗಳ ಕಚೇರಿ ತಲುಪುವುದು. ಬೆಳಿಗ್ಗೆ 11:30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗದಲ್ಲಿ ಕಿತ್ತೂರು ರಾಣಿ ಚನ್ನಮ್ಮ ವಿಜಯ ಜ್ಯೋತಿ ರಥದ ಸ್ವಾಗತ ಕಾರ್ಯಕ್ರಮ ನೆರವೇರುವುದು.

ಸದರಿ ಕಿತ್ತೂರು ರಾಣಿ ಚನ್ನಮ್ಮ ವಿಜಯ ಜ್ಯೋತಿ ರಥದ ಸ್ವಾಗತ ಕಾರ್ಯಕ್ರಮಕ್ಕೆ ಜಿಲ್ಲಾಮಟ್ಟದ ಅಧಿಕಾರಿಗಳು ಭಾಗವಹಿಸಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಿ ತಿಳಿಸಿದ್ದಾರೆ.

## ಶ್ರೇಷ್ಠ ತೋಟಗಾರಿಕಾ ರೈತ, ರೈತ ಮಹಿಳೆ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಧಾರವಾಡ:** ಬಾಗಲಕೋಟ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ 2025–26ನೇ ಸಾಲಿನಲ್ಲಿ ಡಿಸೆಂಬರ್ 21 ರಿಂದ 23 ರವರೆಗೆ ಮೌಲ್ಯವರ್ಧನೆ ಮತ್ತು ರಫ್ತು ಅವಕಾಶಗಳಿಗಾಗಿ ನಿಖರ ತೋಟಗಾರಿಕೆ ಎಂಬ ಧ್ಯೇಯದೊಂದಿಗೆ ತೋಟಗಾರಿಕಾ ಮೇಳವನ್ನು ಹಮ್ಮಿಕೊಳ್ಳಲಾಗಿದೆ.

ತೋಟಗಾರಿಕಾ ಮೇಳದಲ್ಲಿ ತೋಟಗಾರಿಕೆ ಕ್ಷೇತ್ರದಲ್ಲಿ ವಿಶೇಷ ಸಾಧನೆ ಮಾಡಿದ ವಿಶಿಷ್ಠ ಕೃಷಿಕರಿಗೆ, ಬಾಗಲಕೋಟೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ವ್ಯಾಪ್ತಿಯಲ್ಲಿ ಬರುವ ರಾಜ್ಯದ 24 ಜಿಲ್ಲೆಗಳಿಗೆ ಪ್ರತಿಯೊಂದು ಜಿಲ್ಲೆಗೆ ಒಬ್ಬ ಶ್ರೇಷ್ಠ ತೋಟಗಾರಿಕೆ ರೈತ ಹಾಗೂ ರೈತ ಮಹಿಳೆಯನ್ನು ಆಯ್ಕೆ ಮಾಡಿ ಸೂಕ್ತ ಬಹುಮಾನದೊಂದಿಗೆ ಪ್ರಶಸ್ತಿಯನ್ನು ನೀಡಿ ಸನ್ಮಾನಿಸಲಾಗುವುದು.

ಆಸಕ್ತ ಧಾರವಾಡ, ಗದಗ ಜಿಲ್ಲೆಯ ರೈತ, ರೈತ ಮಹಿಳೆಯರು ಅರ್ಜಿ ನಮೂನೆಯನ್ನು ಧಾರವಾಡ ವಿಸ್ತರಣಾ ಮುಂದಾಳು, ಪ್ರಾದೇಶಿಕ ತೋಟಗಾರಿಕಾ ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರದಲ್ಲಿ ಪಡೆಯಬಹುದು ಅಥವಾ ವೆಬ್‌ಸೈಟ್ www.uhsbagalkot.kar-nataka.gov.in ಮೂಲಕ ಪಡೆದು, ಭರ್ತಿ ಮಾಡಿದ ಅರ್ಜಿಗಳನ್ನು ಅಕ್ಟೋಬರ್ 31, 2025 ರೊಳಗಾಗಿ ಪ್ರಾದೇಶಿಕ ತೋಟಗಾರಿಕಾ ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರ ಧಾರವಾಡದಲ್ಲಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 7892770955, 9880036097 ಅಥವಾ ಶುಲ್ಕ ರಹಿತ ಉದ್ಯಾನ ಸಹಾಯವಾಣಿ ಸಂಖ್ಯೆ:1800 425 7910 ಗೆ ಸಂಪರ್ಕಿಸಬಹುದು ಎಂದು ಬಾಗಲಕೋಟ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಪ್ರಕಟಣೆ ತಿಳಿಸಿದೆ.

## ಅತಿಥಿ ಶಿಕ್ಷಕರ ಹುದ್ದೆಗೆ ಅರ್ಜಿ ಆಹ್ವಾನ

**ಕೊಪ್ಪಳ:** ಹಿರೇಕಾಸನಕಂಡಿಯ ಮೊರಾರ್ಜಿ ದೇಸಾಯಿ ವಸತಿ ಶಾಲೆ (ಹಿ.ವರ್ಗ–609) ಯಲ್ಲಿ ವಿಜ್ಞಾನ ಶಿಕ್ಷಕರ ಹುದ್ದೆ ಖಾಲಿ ಇದ್ದು, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಠಿಯಿಂದ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರನ್ನು ನೇಮಿಸಿಕೊಳ್ಳಲು ಅರ್ಜಿ ಆಹ್ವಾನಿಸಿದೆ.

ಬಿಎಸ್‌ಸಿ, ಬಿ.ಇಡಿ(ಸಿಬಿಝಡ್) ವಿದ್ಯಾರ್ಹತೆ ಹಾಗೂ ಟಿಇಟಿ ಆದವರಿಗೆ ಪ್ರಥಮ ಆದ್ಯತೆ ನೀಡಲಾಗುವುದು. ಆಸಕ್ತರು ಅಕ್ಟೋಬರ್ 24 ರೊಳಗಾಗಿ ಅರ್ಜಿಯನ್ನು ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಿರೇಕಾಸನಕಂಡಿ, ಅಶೋಕ ರೈಸ್ ಮಿಲ್, ಗದಗ ರೋಡ್, ಕೊಪ್ಪಳ ಇಲ್ಲಿಗೆ ಸಲ್ಲಿಸಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ಮಂಜುನಾಥ ಬೇಳೂರು, ಪ್ರಾಂಶುಪಾಲರು ಮೊ. ನಂ: 9482326285 ಇವರನ್ನು ಸಂಪರ್ಕಿಸಬಹುದು ಎಂದು ಶಾಲೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯೋತ್ಸವ ಅದ್ದೂರಿಯಾಗಿ ಆಚರಿಸಲು ಅಗತ್ಯ ಸಿದ್ಧತೆ



**ಧಾರವಾಡ:** ಪ್ರಸಕ್ತ ಸಾಲಿನ ಕರ್ನಾಟಕ ರಾಜ್ಯೋತ್ಸವವನ್ನು ಅದ್ದೂರಿಯಾಗಿ ಮತ್ತು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದ್ದು, ಇಲಾಖೆ ಅಧಿಕಾರಿಗಳು ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಸೂಚಿಸಿದರು.

ಅವರು ಗುರುವಾರ ಸಂಜೆ ಜಿಲ್ಲಾಧಿಕಾರಿಗಳ ಕಚೇರಿ ನೂತನ ಸಭಾಂಗಣದಲ್ಲಿ ಜರುಗಿದ ಪ್ರಸಕ್ತ ಸಾಲಿನ ಕರ್ನಾಟಕ ರಾಜ್ಯೋತ್ಸವದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ಕನ್ನಡ ನಾಡು, ನುಡಿಯ ಬಗ್ಗೆ ಜಾಗೃತಿ ಮೂಡಿಸುವಲ್ಲಿ ರಾಜ್ಯೋತ್ಸವ ಕಾರ್ಯಕ್ರಮಗಳು ರೂಪಗೊಳ್ಳಬೇಕು. ಕರ್ನಾಟಕದ ಏಕೀಕರಣದಲ್ಲಿ ಉತ್ತರ ಕರ್ನಾಟಕದ ಅದರಲ್ಲೂ ವಿಶೇಷವಾಗಿ ಧಾರವಾಡ ಜಿಲ್ಲೆಯ ಪಾತ್ರ ಬಹು ಮುಖ್ಯವಾಗಿದೆ. ಕನ್ನಡ ನಾಡಿನ ಕಲ್ಪನೆ ಕಟ್ಟಿದ ಆಲೂರು ವೆಂಕಟರಾಯರು ಧಾರವಾಡದವರು. ಅಖಂಡ ಧಾರವಾಡ ಜಿಲ್ಲೆಯ ಇಂತಹ ಅನೇಕ ಮಹನೀಯರ ಕೊಡುಗೆ ಕರ್ನಾಟಕ ಏಕೀಕರಣದಲ್ಲಿ ಬಹು ಮುಖ್ಯವಾಗಿದೆ. ಆದ್ದರಿಂದ ನಾವು ನಮ್ಮ ಹಿರಿಯರ, ಹೋರಾಟಗಾರರ ಕೊಡುಗೆಯನ್ನು ಸ್ಮರಿಸುವ ನಿಟ್ಟಿನಲ್ಲಿ ವಿವಿಧ ಪ್ರಕಾರದ ಕಾರ್ಯಕ್ರಮಗಳನ್ನು ರೂಪಿಸುವ ಅಗತ್ಯವಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮವು, ಜಿಲ್ಲೆಯಲ್ಲಿ ಜರುಗಿರುವ ಕನ್ನಡ ಹೋರಾಟ, ನಾಡಿನ ಏಕೀಕರಣ ಚಳುವಳಿಗಳ ಹಿನ್ನಲೆಯಲ್ಲಿ ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ಇತಿಹಾಸ ತಿಳಿಸುವ ಕೆಲಸವಾಗಬೇಕು. ಈ ನಿಟ್ಟಿನಲ್ಲಿ ಸಾಂಸ್ಕೃತಿಕವಾಗಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಶಾಲಾ ಶಿಕ್ಷಣ ಇಲಾಖೆ ಮತ್ತು ಪದವಿ ಪೂರ್ವ ಶಿಕ್ಷಣ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತವಾಗಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದರು.

ಪ್ರತಿ ವರ್ಷದಂತೆ ರಾಜ್ಯೋತ್ಸವವನ್ನು ಆರ್.ಎನ್.ಶೆಟ್ಟಿ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗುತ್ತದೆ. ಎಲ್ಲ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ಕಡ್ಡಾಯವಾಗಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು. ಶಿಕ್ಷಣ ಇಲಾಖೆಯ ಅಧಿಕಾರಿಗಳು ಶಾಲಾ ಮಕ್ಕಳನ್ನು ಮತ್ತು ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ವಸತಿ ನಿಲಯಗಳ ವಿದ್ಯಾರ್ಥಿಗಳೊಂದಿಗೆ ಕಾರ್ಯಕ್ರಮಕ್ಕೆ ಹಾಜರಾಗಬೇಕೆಂದು ಅವರು ಸೂಚಿಸಿದರು.

ಪೊಲೀಸ್ ಪಡೆ, ಜಿಲ್ಲಾ ಮೀಸಲು ಪೊಲೀಸ್ ಪಡೆ, ಜಿಲ್ಲಾ ಗೃಹರಕ್ಷಕ ದಳ, ಅರಣ್ಯ ಇಲಾಖೆ, ಅಗ್ನಿಶಾಮಕ ದಳ, ಎನ್.ಸಿ.ಸಿ. ವಿದ್ಯಾರ್ಥಿಗಳು, ಭಾರತ ಸೇವಾದಳ ಮತ್ತು ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳು ಕವಾಯತ್ ದಲ್ಲಿ ಪಾಲ್ಗೊಂಡು ಉತ್ತಮ ರೀತಿಯಲ್ಲಿ ಪ್ರದರ್ಶನ ನೀಡುವಂತೆ ಪೊಲೀಸ್ ಇಲಾಖೆ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅವರು ಹೇಳಿದರು.

ಜಿಲ್ಲಾ ಕ್ರೀಡಾಂಗಣದಲ್ಲಿ ಕ್ರೀಡಾ ಇಲಾಖೆಯು ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ಅನುಕೂಲವಾಗುವಂತೆ ಗ್ಯಾಲರಿ ವ್ಯವಸ್ಥೆ ಮಾಡಬೇಕು. ಮಹಾನಗರ ಪಾಲಿಕೆಯಿಂದ ಶೌಚಾಲಯಗಳ ವ್ಯವಸ್ಥೆಯನ್ನು ಮಾಡಬೇಕು. ರಾಜ್ಯೋತ್ಸವದ ಮುನ್ನ ದಿನ ಪ್ರಮುಖ ಸರ್ಕಾರಿ ಕಟ್ಟಡಗಳನ್ನು ದೀಪಾಲಂಕರ ಮಾಡಬೇಕು. ಲೋಕೋಪಯೋಗಿ ಇಲಾಖೆಯಿಂದ ಸುಂದರವಾದ ವೇದಿಕೆಯನ್ನು ಸಿದ್ಧಗೊಳಿಸಬೇಕು ಎಂದು ಅವರು ಹೇಳಿದರು. ಎಲ್ಲ ಇಲಾಖೆಗಳು ತಮ್ಮ ಅಧೀನದಲ್ಲಿ ಅನುಷ್ಠಾನಗೊಂಡಿರುವ ಪ್ರಮುಖ ಕಾರ್ಯಕ್ರಮ ಮತ್ತು ಯೋಜನೆಗಳ ಕುರಿತು ಸಂಕ್ಷಿಪ್ತ ವರದಿಯನ್ನು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳಿಗೆ ಸಲ್ಲಿಸಬೇಕು. ಅವರು ಸಚಿವರ ರಾಜ್ಯೋತ್ಸವದ ಸಂದೇಶವನ್ನು ರೂಪಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು

ಕಾರ್ಯಕ್ರಮ ಸ್ಥಳದಲ್ಲಿ ಅಗತ್ಯ ಕುಡಿಯುವ ನೀರು, ಶೌಚಾಲಯ ಮತ್ತು ವಿದ್ಯಾರ್ಥಿಗಳಿಗೆ ಅಲ್ಪೋಪಹಾರ ವ್ಯವಸ್ಥೆಯನ್ನು ಮಾಡಬೇಕು. ಆರೋಗ್ಯ ಇಲಾಖೆಯಿಂದ ಸಿಬ್ಬಂದಿಗಳನ್ನು ನೇಮಿಸಬೇಕು. ಯಾವುದೇ ರೀತಿಯ ತೊಂದರೆ ಆಗದಂತೆ ವ್ಯವಸ್ಥಿತವಾಗಿ ಕಾರ್ಯಕ್ರಮವನ್ನು ರೂಪಿಸಬೇಕೆಂದು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಅವರು ನಿರ್ದೇಶಿಸಿದರು.

ಸಭೆಗೆ ಕೆಲವು ಇಲಾಖೆ ಅಧಿಕಾರಿಗಳು ಪೂರ್ವಾನುಮತಿ ಪಡೆಯದೆ ಗೈರಾಗಿದ್ದಾರೆ ಮತ್ತು ಕೆಲವು ಇಲಾಖೆ ಅಧಿಕಾರಿಗಳು ತಮ್ಮ ಬದಲಿಗೆ ಪ್ರತಿನಿಧಿಗಳನ್ನು ಕಳುಹಿಸಿದ್ದಾರೆ. ಅವರಿಗೆ ಎಚ್ಚರಿಕೆ ನೋಟಿಸ್ ನೀಡಲು ಜಿಲ್ಲಾಧಿಕಾರಿಗಳು ಸೂಚಿಸಿದರು. ಸಭೆಯಲ್ಲಿ ಸಹಾಯಕ ಪೊಲೀಸ್ ಆಯುಕ್ತ ಪ್ರಶಾಂತ್ ಸಿದ್ದನಗೌಡ, ಧಾರವಾಡ ತಹಸಿಲ್ದಾರ ಡಾ. ಡಿ .ಎಚ್ ಹೂಗಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಡಾ. ಎಚ್.ಎಚ್ .ಕುಕನೂರ, ಜಿಲ್ಲಾ ಅರೋಗ್ಯಾಧಿಕಾರಿ ಡಾ.ಎಸ್. ಎಂ.ಹೊನಕೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

## ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ



**ಗದಗ:** ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಾಕ್ರಮ ವಿಭಾಗ, ಕೆ.ಎಚ್.ಪಾಟೀಲ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಪುನರ್ವಿಮರ್ಶಾ ಮಂಡಳಿ, ತಾಲೂಕಾ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಮತ್ತು ಬಸವೇಶ್ವರ ಕಲಾ ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯ, ಇವರುಗಳ ಸಂಯುಕ್ತ ಆಶ್ರಯದಲ್ಲಿ ಗುರುವಾರದಂದು ನಗರದ ಬಸವೇಶ್ವರ ಕಲಾ ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯ, ಸಭಾಂಗಣದಲ್ಲಿ ಕಾಲೇಜು ಪ್ರಾಂಶುಪಾಲರಾದ ಪ್ರೊ. ಎಮ್.ಎಮ್. ಬುರುಡಿ ಇವರ ಅಧ್ಯಕ್ಷತೆಯಲ್ಲಿ "ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ–2025" ಅಂಗವಾಗಿ ಕಾರ್ಯಕ್ರಮ ಜರುಗಿತು,

ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಗಂಗಾಧರ ಸಿಎಂ ಇವರು ಕಾರ್ಯಕ್ರಮ ಉದ್ಘಾಟಿಸಿ ನಂತರ ಮಾತನಾಡಿ ಒತ್ತಡ, ಆತಂಕ, ನಿರಿಕ್ಷೆ, ಇತ್ಯಾದಿಗಳು ನಿತ್ಯದ ಬದುಕಿನಲ್ಲಿ ಒಳಗೊಂಡಿವೆ. ದೈಹಿಕ ಆರೋಗ್ಯ ದಷ್ಟೆ ಮಾನಸಿಕವಾಗಿ ಸದೃಢರಾಗಿರಬೇಕಾಗಿರುವುದು ಇಂದಿನ ಜೀವನದಲ್ಲಿ ಅತ್ಯವಶ್ಯಕವಾಗಿದೆ. ಹಾಗೂ ಮಾನಸಿಕ ಅಸ್ವಸ್ಥರಿಗೆ ಹಕ್ಕುಗಳು ಯಾವುದೆಂದರೆ ಮಾನಸಿಕ ಆರೋಗ್ಯ ರಕ್ಷಣೆಯನ್ನು ಪಡೆಯುವ ಹಕ್ಕು, ಸಮೂದಾಯದಲ್ಲಿ ಜೀವಿಸುವ ಹಕ್ಕು, ಘನತೆಯಿಂದ ಬದುಕುವ ಹಕ್ಕು, ವೈದ್ಯಕೀಯ ದಾಖಲೆಗಳನ್ನು ಪಡೆಯುವ ಹಕ್ಕು, ಇದೆ ಎಂದು ತಿಳಿಸಿದರು.

ಹಿರಿಯ ದಿವಾನಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಸಿ.ಎಸ್.ಶಿವನಗೌಡ್ರ ಮಾತನಾಡಿದರು. ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಎಸ್. ಎಸ್.ನೀಲಗುಂದ, ಗುರುರಾಜ ಬಿ. ಗೌರಿ ವಕೀಲರು ಸಹಾಯಕ ಕಾನೂನು ಅಭಿರಕ್ಷಕರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಗದಗ, ಆರ್.ಎಚ್. ಪಾಟೀಲ್ ಸದಸ್ಯರು ಜಿಲ್ಲಾ ಮಾನಸಿಕ ಆರೋಗ್ಯ ಪುನರ್ವಿಮರ್ಶಾ ಮಂಡಳಿ, ರೂಪಸೇನ ಚೌವ್ಹಾಣ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳು, ಗದಗ ಇವರು ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಿಬ್ಬಂದಿಗಳು ಮತ್ತು ಬಸವೇಶ್ವರ ಕಲಾ ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯ, ಗದಗದ ಬೊಧಕ ಬೊಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಹಾಜರಿದ್ದರು.

## ನೈಜ ಸಮೀಕ್ಷೆಗೆ ನಡಹಳ್ಳಿ ಆಗ್ರಹ

**ಮುದ್ದೇಬಿಹಾಳ:** ನಿರಂತರ ಮಳೆಯಿಂದ ಪ್ರಕೃತಿ ವಿಕೋಪ ಉಂಟಾಗಿ ಲಕ್ಷಾಂತರ ಹೆಕ್ಟೇರ್ ಬೆಳೆ ಹಾನಿಯಾಗಿದ್ದರೂ ಪರಿಹಾರ ಬಿಡುಗಡೆಗೊಳಿಸುವ ಮೂಲಕ ರೈತರ ಸಂಕಷ್ಟಕ್ಕೆ ಬಾರದ ಕಾಂಗ್ರಸ್ ಪಕ್ಷ, ಮುಖ್ಯಮಂತ್ರಿ ಸಿದ್ದರಾಮಯ್ಯ ರೈತ ವಿರೋಧಿಗಳೆನ್ನಿಸಿಕೊಂಡಿದ್ದಾರೆ ಎಂದು ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ, ಮಾಜಿ ಶಾಸಕ ಎ.ಎಸ್.ಪಾಟೀಲ ನಡಹಳ್ಳಿ ದೂರಿದರು.

ತಾಲ್ಲೂಕಿನ ಹುಲ್ಲೂರ ಗ್ರಾಮದ ಶ್ರೀ ಸಾಯಿಬಾಬಾ ಮಂದಿರ ಆವರಣದಲ್ಲಿ ಗುರುವಾರ ರೈತರ ಸಭೆಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿಯವರು ವೈಮಾನಿಕ ಸಮೀಕ್ಷೆ ನಡೆಸಿದ ನಂತರ ಪರಿಹಾರ ಕೊಡುವುದಾಗಿ ಹೇಳಿದ್ದರು. ಇದುವರೆಗೂ ನಮ್ಮ ರೈತರಿಗೆ ಪರಿಹಾರ ಸಿಕ್ಕಿಲ್ಲ ಎಂದರು.

ಬೆಳೆಹಾನಿಗೆ ಕೇಂದ್ರ ಸರ್ಕಾರದ ಜೊತೆ ರಾಜ್ಯ ಸರ್ಕಾರವೂ ಪರಿಹಾರ ಕೊಡುತ್ತದೆ. ಈಗಾಗಲೇ ಕೇಂದ್ರ ಸರ್ಕಾರದ ಪರಿಹಾರದ ಹಣ ಜಿಲ್ಲಾಧಿಕಾರಿಗಳ ಖಾತೆಯಲ್ಲಿ ಜಮಾ ಆಗಿದೆ. ಜಿಲ್ಲಾಡಳಿತ ನೈಜ ಹಾನಿಯ ವಾಸ್ತವ ಸಮೀಕ್ಷೆ ನಡೆಸಿ ವರದಿ ಸಲ್ಲಿಸದ ಕಾರಣ ಪರಿಹಾರ ವಿಳಂಬವಾಗತೊಡಗಿದೆ. ಕೂಡಲೇ ನೈಜ ಸಮೀಕ್ಷೆಯ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಬೇಕು ಎಂದರು.

ಹೊಲ ಹರಗಬೇಕೆನ್ನುವ ಭರದಲ್ಲಿ ರೈತರು ಹಾನಿಯ ಪರಿಹಾರ ಪಡೆಯುವುದನ್ನು ಮರೆಯುತ್ತಿದ್ದಾರೆ. ಶಾಸಕ, ಸಚಿವ ಮತ್ತು ಅಧಿಕಾರಿಗಳಿಗೆ ಇದೇ ಬೇಕಾಗಿದೆ. ಹರಗಿದ ಮೇಲೆ ಬೆಳೆಹಾನಿ ಸಾಕ್ಷಿ ಕೇಳಿದರೆ ಕೊಡಲು ನಿಮ್ಮ ಮೋಬೈಲಲ್ಲಿ ದಾಖಲೆ ಇರಬೇಕು ಎನ್ನುವ ಕಾರಣಕ್ಕೆ ಮುಂಚಿತವಾಗಿಯೇ ಹಾನಿಯ ಜಿಪಿಎಸ್ ವಿಡಿಯೋ, ಪೋಟೊ ತೆಗೆದುಕೊಂಡಿರುವಂತೆ ರೈತರಿಗೆ ಹೇಳುತ್ತಿದ್ದೇನೆ. ರೈತರೆ ಜಿಪಿಎಸ್ ದಾಖಲೆ ಕೊಡ್ತಾರೆ. ತಂಡವು ಸಂಜೆ ಊರಿಗೆ ಹೋಗಿ ಇದನ್ನು ಸಂಗ್ರಹಿಸಿಕೊಂಡ ರೈತರ ಪಟ್ಟಿ ತಯಾರಿಸುವಂತೆ ಡಿಸಿಗೂ ಸಲಹೆ ಕೊಟ್ಟಿದ್ದೇನೆ ಎಂದರು.

ಶಾಸಕರು ಜನರನ್ನು ಮರೆತಿದ್ದಾರೆ. ಅಧಿಕಾರಿಗಳನ್ನು ಹೊಲಗಳಿಗೆ ಕರೆತಂದು ಸಮೀಕ್ಷೆ ಮಾಡಿಸಿ ನೈಜ ಪರಿಹಾರ ಕೊಡಿಸುವ ಶಕ್ತಿ, ಸಾಮರ್ಥ್ಯ ಅವರಲ್ಲಿಲ್ಲ. ನಾನು ಹಣ ಗಳಿಸಲು ರಾಜಕಾರಣಕ್ಕೆ ಬಂದಿಲ್ಲ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ರೈತ ಮೋರ್ಚಾ ತಾಲ್ಲೂಕು ಅಧ್ಯಕ್ಷ ಶಂಕರಗೌಡ ಶಿವಣಗಿ ಕಂದಗನೂರ, ಬಿಜೆಪಿ ಯುವ ಮೋರ್ಚಾ ತಾಲ್ಲೂಕು ಅಧ್ಯಕ್ಷ ಗಿರೀಶಗೌಡ ಪಾಟೀಲ ಹಿರೇಮುರಾಳ, ಸಂಗಮೇಶ ಹತ್ತಿ, ತಾಪಂ ಮಾಜಿ ಸದಸ್ಯ ಪ್ರೇಮಸಿಂಗ್ ರಾಠೋಡ, ಅಶೋಕ ರಾಠೋಡ ನೇಬಗೇರಿ, ಚನಬಸ್ಸು ಚನ್ನಿಗಾವಿಶೆಟ್ರು, ನಾಗೇಶ ಕವಡಿಮಟ್ಟಿ, ವೈ.ಟಿ.ಗೌಡರ, ಭೀಮರಾವ ಹುಲ್ಲೂರ, ಸುಭಾಷ ಕಟ್ಟಿಮನಿ, ಎ.ಎಸ್. ದನ್ನೂರ, ಎಸ್.ಎಂ.ಅಂಗಡಿ, ಡಿ.ಎಸ್.ಬಿರಾದಾರ. ವಿನೋದ ಓಲೇಕಾರ, ಮುತ್ತು ಕೊಡಗಾನೂರ, ಅಮೋಘಸಿದ್ದ ಸೇರಿ ಹಲವರು ಇದ್ದರು.



### ಕಬ್ಬು ಬೆಳೆಗಾರ ರೈತರೊಂದಿಗೆ ಜಿಲ್ಲಾಧಿಕಾರಿಗಳ ಸಭೆ

## ಕಬ್ಬು ಸಾಗಾಣಿಕೆ ವೆಚ್ಚ ನಿಗದಿಗೆ ಕ್ರಮ



**ಧಾರವಾಡ:** ಕಲಘಟಗಿ ಭಾಗದ ರೈತರೊಂದಿಗೆ ಕಬ್ಬು ಸಾಗಾಣಿಕೆ ದರ ನಿಗದಿ ಬಗ್ಗೆ ಶುಕ್ರವಾರ ಸಂಜೆ ತಮ್ಮ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಸಭೆ ಜರುಗಿಸಿದರು.

ಸಭೆಯಲ್ಲಿ ಮಾತನಾಡಿ, ಕಲಘಟಗಿ ತಹಶೀಲ್ದಾರ ಮತ್ತು ಪೊಲೀಸ ಅಧಿಕಾರಿಗಳಿಗೆ ಜಿಲ್ಲಾ ಉಸ್ತವಾರಿ ಸಚಿವರು ಹಾಗೂ ಜಿಲ್ಲಾಡಳಿತ ನೀಡಿರುವ ಸೂಚನೆಗಳನ್ನು ಪಾಲಿಸುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.ಜಿಲ್ಲೆಯ ಎಲ್ಲ ಕಾರ್ಖಾನೆಗಳು ಕಬ್ಬು ಕಟಾವಣೆಯ ದರವನ್ನು ಸರ್ಕಾರದ ನಿಯಮಾನುಸಾರ ತೆಗೆದುಕೊಳ್ಳಬೇಕು. ನಿಯಮಾನುಸಾರ ತೆಗೆದುಕೊಳ್ಳದೇ ಇರುವದರಿಂದ ರೈತರಿಗೆ ಬಹಳಷ್ಟು ತೊಂದರೆಯಾಗುತ್ತಿದೆ. ಅದೇ ರೀತಿ ಪ್ಯಾರಿ ಶುಗರ್ ಕಾರ್ಖಾನೆಯವರು ಸಹ ನಿಯಮಾನುಸಾರ ಹಣ ತೆಗೆದುಕೊಳ್ಳಬೇಕು ಎಂದು ಅವರು ಹೇಳಿದರು. ಬೇರೆ ಫ್ಯಾಕ್ಟರಿ ಸಿಬ್ಬಂದಿಗಳು ರೈತರಿಗೆ ತಪ್ಪು ಮಾಹಿತಿ ನೀಡದಂತೆ ಕ್ರಮವಹಿಸಬೇಕು. ಕಬ್ಬಿಗೆ ಮತ್ತು ಕಬ್ಬು ಸಾಗಾಣಿಕೆಯಲ್ಲಿ ನ್ಯಾಯಯುತ ದರ ನೀಡುವಲ್ಲಿ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ಉಪವಿಭಾಗಾಧಿಕಾರಿ ಶಾಲಂ ಹುಸೇನ್, ಆಹಾರ ಇಲಾಖೆ ಜಂಟಿ ನಿರ್ದೇಶಕ ಡಾ.ವಿನೋದ ಹೆಗ್ಗಳಗಿ, ಕಲಘಟಗಿ ತಹಶಿಲ್ದಾರ ಬಸವರಾಜ ಹೊಂಕಣದವರ, ರೈತ ಮುಖಂಡರಾದ ಮಹೇಶ ಬೆಳಗಾಂವಕರ್, ಉಳವಪ್ಪಾ ಬಡಿಗೇರ, ವಸಂತ ಲಕ್ಕಪ್ಪನವರ, ಪರುಶುರಾಮ ಎತ್ತಿನಗುಡ್ಡ, ಶಿವು ತಡಸ, ಬಸನಗೌಡ ಸಿದ್ದನಗೌಡರ ಸೇರಿದಂತೆ ಇತರ ರೈತ ಪ್ರಮುಖರು, ಅಧಿಕಾರಿಗಳು ಭಾಗವಹಿಸಿದ್ದರು.



**ಬಸವನಬಾಗೇವಾಡಿ ಬಸವೇಶ್ವರ ವೃತ್ತದಲ್ಲಿ ಬಸವ ಸಂಸ್ಕೃತಿ ಅಭಿಯಾನ, ಲಿಂಗಾಯತ ಮಠಾಧೀಶರ ಒಕ್ಕೂಟದ ವಿರುದ್ಧ ಕನ್ಹೇರಿಯ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿ ಅವಾಚ್ಯ ಶಬ್ದಗಳಿಂದ ನಿಂದಿಸಿ ಅವಹೇಳನಕಾರಿಯಾಗಿ ಮಾತನಾಡಿರುವ ಹಿನ್ನೆಲೆ ಕನ್ಹೇರಿ ಸ್ವಾಮೀಜಿ ವಿರುದ್ಧ ಕ್ರಮಕ್ಕೆ ಒತ್ತಾಯಿಸಿ ಗುರುವಾರ ಮಠಾಧೀಶರ ನೇತೃತ್ವದಲ್ಲಿ ವಿವಿಧ ಬಸವ ಪರ ಸಂಘಟನೆಗಳಿಂದ ಹೋರಾಟ ನಡೆಸಿ ಅವರ ಭಾವಚಿತ್ರಕ್ಕೆ ಚಪ್ಪಲಿ ಹಾರಹಾಕಿ ಪ್ರತಿಕೃತಿ ದಹಿಸಿ ಆಕ್ರೋಶ ವ್ಯಕ್ತಪಡಿಸಿದರು.**

## ದೈಹಿಕ, ಮಾನಸಿಕ ಆರೋಗ್ಯದ ಸಮತೋಲನ ಮುಖ್ಯ



**ಕೊಪ್ಪಳ:** ದೈಹಿಕ ಆರೋಗ್ಯ ಎಷ್ಟು ಮುಖ್ಯವೋ ಮಾನಸಿಕ ಆರೋಗ್ಯವೂ ಅಷ್ಟೇ ಮುಖ್ಯವಾಗಿದೆ. ದೈಹಿಕ ಮತ್ತು ಮಾನಸಿಕ ಇವು ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ಇವೆರಡರ ಸಮತೋಲನ ಕಾಪಾಡಿಕೊಂಡು ಹೋಗಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ದರಗದ ಅವರು ಹೇಳಿದರು.

ಶುಕ್ರವಾರದಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧೀಕಾರ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳ ಕಛೇರಿ, ತಾಲೂಕಾ ಆರೋಗ್ಯಾಧಿಕಾರಿಗಳ ಕಛೇರಿ ಹಾಗೂ ಭಾರತರತ್ನ ಶ್ರೀ ಅಟಲ್ ಬಿಹಾರಿ ವಾಜಪೇಯಿ ಕಾನೂನು ಕಾಲೇಜ್ ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಕಾಲೇಜಿನ ಸಭಾ ಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿ ವರ್ಷ ಅಕ್ಟೋಬರ್ 10 ರಂದು ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ ಕಾರ್ಯಕ್ರಮ ಆಚರಿಸಲಾಗುತ್ತದೆ. ಸೇವೆಗಳ ಲಭ್ಯತೆ–ವಿಪತ್ತುಗಳು ಮತ್ತು ತುರ್ತು ಪರಿಸ್ಥಿಗಳಲ್ಲಿ ಮಾನಸಿಕ ಆರೋಗ್ಯ ಎಂಬ ಘೋಷವಾಕ್ಯದೊಂದಿಗೆ ಈ ವರ್ಷ ಕಾರ್ಯಕ್ರಮ ಆಚರಿಸಲಾಗುತ್ತಿದೆ. ಈ ಕಾರ್ಯಕ್ರಮದ ಉದ್ದೇಶ ಮಾನಸಿಕ ಖಾಯಿಲೆ ಗುಣಪಡಿಸಲು ಮತ್ತು ಮಾನಸಿಕ ರೋಗಕ್ಕೆ ತುತ್ತಾಗದಂತೆ ಸಾರ್ವಜನಿಕರಿಗೆ ಅರಿವು ಮೂಡಿಸುವುದಾಗಿದೆ. ಮಾನಸಿಕ ರೋಗಕ್ಕೆ ಮುಖ್ಯ ಕಾರಣ ಮೆದುಳಿನಲ್ಲಿರುವ ರಾಸಾಯನಿಕ ಬದಲಾವಣೆ, ಮಾದಕ ವಸ್ತುಗಳಾದ ಗಾಂಜಾ, ಅಫೀಮ್ ಹಾಗೂ ಆಲ್ಕೋಹಾಲ್ ಸೇವನೆ ಮತ್ತು ಮೆದುಳಿಗೆ ಸಂಬಂಧಿಸಿದ ಸೋಂಕು, ಗಡ್ಡೆ, ಪೆಟ್ಟು, ಕುಟುಂಬ, ಹಣಕಾಸು, ಉದ್ಯೋಗ, ರೀತಿನೀತಿಗಳ ಗೊಂದಲ ಕಾರಣವಾಗಿವೆ. ಈ ವಿಶ್ವ ಮಾನಸಿಕ ಆರೋಗ್ಯ ದಿನದಂದು ನಾವೆಲ್ಲರೂ ಪರಸ್ಪರ ಗಮನ ಹರಿಸೋಣ, ದಯೆ ತೋರೋಣ ಮತ್ತು ಕಳಂಕವನ್ನು ಕೊನೆಗೊಳಿಸೋಣ ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅಧಿಕಾರಿ ಡಾ. ಪ್ರಕಾಶ ಮಾತನಾಡಿದರು. ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ. ರವೀಂದ್ರನಾಥ್ ಎಂ.ಹೆಚ್. ಅವರು ವಿಶೇಷ ಉಪನ್ಯಾಸ ನೀಡಿದರು.

ಕಾಲೇಜಿನ ಪ್ರಾಂಶುಪಾಲರಾದ ಉಷಾದೇವಿ ಹಿರೇಮಠ ಅವರು ಮಾತನಾಡಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಮ್ಮಿಕೊಳ್ಳುವ ಇಂತಹ ಜಾಗೃತಿ ಕಾರ್ಯಕ್ರಮಗಳು ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ಬಹಳ ಉಪಯುಕ್ತವಾಗಿವೆ. ವಿದ್ಯಾರ್ಥಿಗಳು ಈ ಕಾರ್ಯಕ್ರಮಗಳ ಸದುಪಯೋಗ ಪಡೆದುಕೊಂಡು ತಮ್ಮ ತಮ್ಮ ಗ್ರಾಮ, ವಾರ್ಡ್‌ಗಳಲ್ಲಿ ಹಾಗೂ ಸುತ್ತ ಮುತ್ತಲಿನ ಸಾರ್ವಜನಿಕರಿಗೆ ಅರಿವು ಮೂಡಿಸಿ, ಆರೋಗ್ಯವಂತ ಸಮಾಜ ನಿರ್ಮಾಣ ಮಾಡಲು ಕೈಜೋಡಿಸುವಂತೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ನಂದಕುಮಾರ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ಗೋನಾಳು ಕುಮಾರಸ್ವಾಮಿ, ತಾಲೂಕಾ ಆರೋಗ್ಯಾಧಿಕಾರಿ ಡಾ.ರಾಮಾಂಜನೇಯ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವ್ಹಿ.ಪಿ, ಕಾನೂನು ಕಾಲೇಜಿನ ಉಪಪ್ರಾಂಶುಪಾಲರಾದ ಬಸವರಾಜ, ಸಹಉಪನ್ಯಾಸಕರಾದ ಸೋಮಶೇಖರ ಹಾಗೂ ವಿದ್ಯಾರ್ಥಿಗಳು, ಸಿಬ್ಬಂದಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ಶಿವಪ್ಪ ಬಾವಿಕಟ್ಟಿ ಕಾರ್ಯಕ್ರಮ ನಿರೂಪಿಸಿದರು, ಶರಣು ಸ್ವಾಗತಿಸಿದರು, ಸುವರ್ಣ ವಂದಿಸಿದರು.

## ಜಿಲ್ಲಾ ಮಟ್ಟದ ಅಧಿಕಾರಿಗಳು ನಿಕ್ಷಯ್ ಮಿತ್ರರಾಗಿ ಕೈಜೋಡಿಸಲು ಮನವಿ

**ಕೊಪ್ಪಳ:** ಜಿಲ್ಲೆಯ ಎಲ್ಲಾ ಜಿಲ್ಲಾಮಟ್ಟದ ಅಧಿಕಾರಿಗಳು ಸ್ವ ಇಚ್ಛೆಯಿಂದ ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿಗಳ ಸಹಯೋಗದೊಂದಿಗೆ ಚಿಕಿತ್ಸೆಯನ್ನು ಪಡೆಯುತ್ತಿರುವ ಕ್ಷಯರೋಗಿಗಳನ್ನು 6 ತಿಂಗಳ ಕಾಲ ಪೌಷ್ಠಿಕ ಆಹಾರ ನೀಡುವ ಮೂಲಕ ದತ್ತು ಪಡೆದು ನಿಕ್ಷಯ್ ಮಿತ್ರರಾಗುವಂತೆ ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಅವರು ಮನವಿ ಮಾಡಿದ್ದಾರೆ.

ಜಿಲ್ಲೆಯಲ್ಲಿ ಪ್ರತಿ ವರ್ಷ ಸುಮಾರು 2800 ರಿಂದ 3000 ಕ್ಷಯರೋಗಿಗಳು ಪತ್ತೆಯಾಗುತ್ತಿದ್ದಾರೆ. ಕ್ಷಯರೋಗವು ಮಾರಣಾಂತಿಕ ರೋಗವಾಗಿದ್ದು, ಈ ರೋಗವು ಅಪೌಷ್ಠಿಕತೆಯಿಂದ ಬಳಲುತ್ತಿರುವ ಜನರಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕಂಡುಬರುತ್ತಿದೆ. ಆದ್ದರಿಂದ ಜಿಲ್ಲೆಯ ಎಲ್ಲ ಜಿಲ್ಲಾ ಮಟ್ಟದ ಅಧಿಕಾರಿಗಳು ಕ್ಷಯರೋಗಿಯನ್ನು ದತ್ತು ಪಡೆದು 6 ತಿಂಗಳ ಕಾಲ ಪೌಷ್ಠಿಕ ಆಹಾರವನ್ನು ನೀಡುವ ಮೂಲಕ ಕ್ಷಯರೋಗಿಗಳ ಮರಣ ಪ್ರಮಾಣ ಮತ್ತು ಅನಾರೋಗ್ಯದ ಪ್ರಮಾಣವನ್ನು ಕಡಿಮೆಗೊಳಿಸುವ ಮೂಲಕ ಜಿಲ್ಲೆಯನ್ನು ಕ್ಷಯಮುಕ್ತ ಜಿಲ್ಲೆಯನ್ನಾಗಿಸಬೇಕು. ಇದು ನಮ್ಮೆಲ್ಲರ ಜವಾಬ್ದಾರಿಯಾಗಿದ್ದು, ಈ ನಿಟ್ಟಿನಲ್ಲಿ ನಿಕ್ಷಯ್ ಮಿತ್ರರಾಗಿ ತಮ್ಮ ಸಹಾಯ ಮತ್ತು ಸಹಕಾರವನ್ನು ನೀಡಿ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮಕ್ಕೆ ಕೈಜೋಡಿಸುವಂತೆ ಜಿಲ್ಲಾಧಿಕಾರಿಗಳು ಕೋರಿದ್ದಾರೆ.

## ಅ. 23ರಂದು ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ

**ಕಾರವಾರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿಯನ್ನು ಅ.23 ರಂದು ಬೆಳಗ್ಗೆ 10 ಗಂಟೆಗೆ ಕಾರವಾರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮವನ್ನು ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಉದ್ಘಾಟಿಸಲಿದ್ದು, ಕರ್ನಾಟಕ ಮಾರ್ಕೆಟಿಂಗ್ ಕನ್ಸಲ್ಟೆಂಟ್ ಅಂಡ್ ಏಜೆನ್ಸಿಸ್ ಅಧ್ಯಕ್ಷ ಸತೀಶ ಕೆ. ಸೈಲ್ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್.ವಿ ದೇಶಪಾಂಡೆ, ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ಶಾಸಕರಾದ ಶಿವರಾಮ ಹೆಬ್ಬಾರ್, ದಿನಕರ ಕೆ. ಶೆಟ್ಟಿ, ಭೀಮಣ್ಣ ಟಿ. ನಾಯ್ಕ, ವಿಧಾನ ಪರಿಷತ್ ಶಾಸಕರಾದ ಎಸ್. ವಿ.ಸಂಕನೂರು, ಶಾಂತಾರಾಮ ಬುಡ್ನ ಸಿದ್ದಿ, ಗಣಪತಿ ಡಿ.ಉಳ್ವೇಕರ ಹಾಗೂ ನಗರಸಭೆ ಅಧ್ಯಕ್ಷ ರವಿರಾಜ ಚಂದ್ರಹಾಸ ಅಂಕೋಲೇಕರ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಸತೀಶ ನಾಯ್ಕ ಮತ್ತಿತರರು ಪಾಲ್ಗೊಳ್ಳಲಿದ್ದಾರೆ.

## ಸಮೀಕ್ಷೆ ಕಾರ್ಯ ಪರಿಶೀಲಿಸಿದ ಬಿಇಓ



**ಇಂಡಿ:** ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಕುರಿತು ಸಮೀಕ್ಷೆ ಕೈಗೊಂಡಿದ್ದು, ಇಂದು ಶನಿವಾರದಂದು ತಾಲೂಕಿನ ಹಿರೇರೂಗಿ ಗ್ರಾಮದಲ್ಲಿ ಸಮೀಕ್ಷೆ ಕಾರ್ಯವನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಶ್ರೀಮತಿ ಎಸ್ ಎಸ್ ಮುಜಾವರ ಹಾಗೂ ಕ್ಷೇತ್ರ ಸಮನ್ವಯಾಧಿಕಾರಿಗಳಾದ ಎಸ್ ಆರ್ ನಡುಗಡ್ಡಿ ಅವರು ಪರಿಶೀಲಿಸಿದರು.

ಗ್ರಾಮದ ಅನೇಕ ಮನೆ ಮನೆಗಳಿಗೆ ಭೇಟಿ ನೀಡಿ ಸಮೀಕ್ಷೆ ಕಾರ್ಯದಲ್ಲಿ ಪಾಲ್ಗೊಂಡಿದ್ದರ ಕುರಿತು ಮನೆಯ ಸದಸ್ಯರ ಜೊತೆ ಸಮಾಲೋಚಿಸಿ ಮಾಹಿತಿ ಪಡೆದರು. ಹಾಗೆಯೇ ಸಮೀಕ್ಷಾ ಕಾರ್ಯವನ್ನು ಅಚ್ಚುಕಟ್ಟಾಗಿ ಹಾಗೂ ನಿರಾಂತಕವಾಗಿ ಮಾಡಲು ಗಣತಿದಾರರಿಗೆ ಮಾಹಿತಿ ನೀಡಿ ಯಶಸ್ವಿಯಾಗಿ ಪೂರ್ಣಗೊಳಿಸಲು ಸೂಚಿಸಲಾಯಿತು.

ಈ ಸಂದರ್ಭದಲ್ಲಿ ಬಿ ಆರ್ ಪಿ ಅಧಿಕಾರಿ ಎ ಜಿ ಚೌಧರಿ, ಗಣತಿದಾರರಾದ ಸಂತೋಷ ಬಂಡೆ, ಎಸ್ ಆರ್ ಚಾಳೇಕರ, ಎಸ್ ಎಸ್ ಅರಬ, ಎಸ್ ಕೆ ನಾವದಗಿ, ಸಾವಿತ್ರಿ ಸಂಗಮದ, ರಾಜೇಶ್ವರಿ ಬೇನೂರ, ಸುಜಾತಾ ಹಾವಳಗಿ, ಸಹಾಯಕಿ ಶಾಲುಬಾಯಿ ಸೈನಸಾಕಳೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ರಾಜ್ಯೋತ್ಸವವನ್ನು ಹಬ್ಬದಂತೆ ಆಚರಿಸಲು ಸಿದ್ಧತೆ ಕೈಗೊಳ್ಳಿ

**ವಿಜಯಪುರ:** ಕನ್ನಡ ರಾಜ್ಯೋತ್ಸವದ ಆಚರಣೆ ಹಬ್ಬದ ವಾತಾವರಣದ ರೀತಿಯಲ್ಲಿ, ಅದ್ದೂರಿಯಾಗಿ ಮತ್ತು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದ್ದು, ಆಯಾ ಇಲಾಖೆ ಅಧಿಕಾರಿಗಳು ಈ ಕಾರ್ಯಕ್ರಮವನ್ನು ಅತ್ಯಂತ ಅಚ್ಚುಕಟ್ಟಾಗಿ ನಿರ್ವಹಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಡಾ.ಆನಂದ ಕೆ ಅವರು ಸೂಚಿಸಿದರು.

ಅವರು ಶನಿವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಈ ಬಾರಿಯ ಕರ್ನಾಟಕ ರಾಜ್ಯೋತ್ಸವ ಆಚರಣೆ ಕುರಿತು ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ಕನ್ನಡ ನಾಡು, ನುಡಿಯ ಬಗ್ಗೆ ಜಾಗೃತಿ ಮೂಡಿಸುವಲ್ಲಿ ರಾಜ್ಯೋತ್ಸವ ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ನಿರ್ವಹಿಸಿ,ಕನ್ನಡಮಯ ಹಬ್ಬದ ವಾತಾವರಣ ಇರುವಂತೆ ಅಗತ್ಯ ಯೋಜನೆ ರೂಪಿಸುವಂತೆಯೂ, ಕನ್ನಡದ ಶ್ರೀಮಂತ ಪರಂಪರೆ ಕಲೆ ಹಾಗೂ ಸಂಸ್ಕೃತಿ ಪ್ರತಿಬಿಂಬಿಸುವ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಸಮ್ಮಿಳಿತಗೊಳಿಸಬೇಕು. ಶ್ರೀಮಂತ ಸಂಸ್ಕೃತಿಯ ಪರಿಚಯ ಮಾಡಿಕೊಡುವ ಕಲಾ ಪ್ರಕಾರಗಳನ್ನು ಆಯೋಜಿಸಲು ಯೋಜನೆ ರೂಪಿಸಿಕೊಳ್ಳುವಂತೆಯೂ, ರಾಜ್ಯೋತ್ಸವ ಕಾರ್ಯಕ್ರಮದ ಮೂಲಕ ನಾಡಿನ ಕಲೆ,ಸಂಸ್ಕೃತಿ, ಇತಿಹಾಸ, ಸಾಹಿತ್ಯದ ಹಿರಿಮೆ-ಗರಿಮೆ ಕುರಿತು ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ತಿಳಿಸಿಕೊಡುವ ನಿಟ್ಟಿನಲ್ಲಿ ಕಾರ್ಯಕ್ರಮ ರೂಪಿಸಬೇಕು. ಈ ನಿಟ್ಟಿನಲ್ಲಿ ಸಾಂಸ್ಕೃತಿಕವಾಗಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ಹೇಳಿದರು.



ಕಾರ್ಯಕ್ರಮವು ನಗರದ ಡಾ.ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ವ್ಯವಸ್ಥಿತವಾಗಿ ಹಮ್ಮಿಕೊಳ್ಳಬೇಕು. ಅಂದು ಬೆಳಿಗ್ಗೆ 9ಗಂಟೆಗೆ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಿಂದ ಧ್ವಜಾರೋಹಣ ನೆರವೇರಲಿದೆ. ಕಾರ್ಯಕ್ರಮಕ್ಕೆ ಸಬಂಧಿಸಿದಂತೆ ಅಧಿಕಾರಿಗಳಿಗೆ ವಹಿಸಿದ್ದ ಎಲ್ಲ ಕೆಲಸ ಕಾರ್ಯಗಳನ್ನು ವ್ಯವಸ್ಥಿತವಾಗಿ ಕೈಗೊಳ್ಳಬೇಕು. ಅಂದು ಬೆಳಿಗ್ಗೆ 7.30ಕ್ಕೆ ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ಭುವನೇಶ್ವರ ದೇವಿಯ ಭಾವಚಿತ್ರದ ಭವ್ಯ ಮೆರವಣಿಗೆಯನ್ನು ವಿವಿಧ ಇಲಾಖೆಗಳು ನಿರ್ಮಿಸಿರುವ ಸ್ಥಬ್ಧಚಿತ್ರಗಳು, ಕಲಾ ತಂಡದೊಂದಿಗೆ ನಗರದ ವಿವಿಧ ವೃತ್ತಗಳ ಮೂಲಕ ಜಿಲ್ಲಾ ಕ್ರೀಡಾಂಗಣಕ್ಕೆ ಆಗಮಿಸುವುದು. ವೇದಿಕೆ ಸಿದ್ಧತೆ, ಶಿಷ್ಟಾಚಾರದಂತೆ ಅತಿಥಿ ಗಣ್ಯರನ್ನು ಆಹ್ವಾನಿಸುವುದು. ಆಹ್ವಾನ ಪತ್ರಿಕೆಯ ಮುದ್ರಣ ಹಾಗೂ ವಿತರಣೆ, ಆಸನದ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಸ್ವಚ್ಛತೆ ಕಾರ್ಯ ಕೈಗೊಳ್ಳಲು ನಿರ್ದೇಶಿಸಿದರು.

ನಗರದ ಎಲ್ಲಾ ಮುಖ್ಯ ವೃತ್ತಗಳ ಸ್ವಚ್ಛತೆ ಹಾಗೂ ವಿದ್ಯುತ್ ದೀಪಾಲಂಕಾರ ಕೈಗೊಳ್ಳುವ ಜವಾಬ್ದಾರಿಯನ್ನು ನಿರ್ವಹಿಸುವುದು, ಇನ್ನಿತರ ಕಾರ್ಯಕ್ರಮಗಳ ಕುರಿತು ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಜಿಲ್ಲಾಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು ಕಡ್ಡಾಯವಾಗಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು. ಈಗಾಗಲೇ ಸಮಿತಿ ರಚಿಸಿದ್ದು, ವಿವಿಧ ಸಮಿತಿ ಅಧಿಕಾರಿಗಳು ಕಾರ್ಯಕ್ರಮ ಅಚ್ಚುಕಟ್ಟಾಗಿ ನಿರ್ವಹಿಸಬೇಕು. ವೈದ್ಯಕೀಯ ವ್ಯವಸ್ಥೆ ಹಾಗೂ ವೈದ್ಯಕೀಯ ತಂಡದೊಂದಿಗೆ ಆಂಬ್ಯುಲೆನ್ಸ್, ಅಗ್ನಿ ನಿರೋಧಕ ವಾಹನದ ವ್ಯವಸ್ಥೆ ಮಾಡಿಕೊಳ್ಳಬೇಕು. ಪೊಲೀಸ್ ಪಡೆ, ಹೊಂಗಾರ್ಡ್ಸ್, ಸೈನಿಕ ಶಾಲೆಯ ವಿದ್ಯಾರ್ಥಿಗಳು, ಎನ್‌ಸಿಸಿ ವಿದ್ಯಾರ್ಥಿಗಳು, ಅಗ್ನಿ ಶಾಮಕ ದಳ, ಅರಣ್ಯ ಇಲಾಖೆ, ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳು ಒಳಗೊಂಡಂತೆ ವಿವಿಧ ತಂಡಗಳು ಕವಾಯತಿನಲ್ಲಿ ಪಾಲ್ಗೊಂಡು ಉತ್ತಮ ರೀತಿಯಲ್ಲಿ ಪ್ರದರ್ಶನ ನೀಡುವಂತೆ ಸಕಲ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಸೂಚಿಸಿದರು. ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಸಂಜೆ ಕನ್ನಡ ನಾಡು ನುಡಿ ಹಾಗೂ ನಾಡಿನ ವೈವಿಧ್ಯತೆ ಪ್ರತಿಬಿಂಬಿಸುವ ಸಾಂಸ್ಕೃತಿಕ ಕಾರ್ಯಕ್ರಮ ಅತ್ಯಂತ ವ್ಯವಸ್ಥಿತವಾಗಿ ಆಯೋಜಿಸುವಂತೆಯೂ, ಭಾಗವಹಿಸುವ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಲು ಪ್ರಮಾಣ ವಿತರಿಸುವಂತೆ ಅವರು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಾದ ರಿಷಿ ಆನಂದ, ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ, ಪಾಲಿಕೆ ಆಯುಕ್ತ ವಿಜಯ ಮೆಕ್ಕಳಿಕಿ, ಹೆಸ್ಕಾಂ ಅಧೀಕ್ಷಕ ಅಭಿಯಂತರರಾದ ಸಿದ್ದಪ್ಪ ಬಿಂಜಗೇರಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಬದ್ರುದ್ದಿನ್ ಸೌದಾಗರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಕೆ.ಕೆ.ಚವ್ಹಾಣ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಮಹೇಶ ಪೋತದಾರ, ಉಪ ನಿರ್ದೇಶಕ ವೀರಯ್ಯ ಸಾಲಿಮಠ, ಸಾರಿಗೆ ಇಲಾಖೆಯ ಪ್ರಾದೇಶಿಕ ಸಾರಿಗೆ ಅಧಿಕಾರಿ ವಸೀಂ ಬಾಬಾ ಕ್ರೀಡಾಧಿಕಾರಿ ರಾಜಶೇಖರ ದೈವಾಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ಭೋವಿ, ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾಧ್ಯಕ್ಷರಾದ ಎಂ.ಸಿ.ಮುಲ್ಲಾ, ಅಡಿವೆಪ್ಪ ಸಾಲಗಲ್, ಫಯಾಜ್ ಕಲಾದಗಿ, ರಾವಜಿ, ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಶ್ರೇಷ್ಠ ತೋಟಗಾರಿಕೆ ರೈತ, ರೈತ ಮಹಿಳೆ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಮೂಡಲಗಿ:** ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟದಲ್ಲಿ ಇದೆ 2025ರ ಡಿಸೆಂಬರ್ 21 ರಿಂದ 23 ರವರೆಗೆ "ಮೌಲ್ಯವರ್ಧನೆ ಮತ್ತು ರಫ್ತು ಅವಕಾಶಗಳಿಗಾಗಿ ನಿಖರ ತೋಟಗಾರಿಕೆ" ಎಂಬ ಧ್ಯೇಯದೊಂದಿಗೆ ತೋಟಗಾರಿಕೆ ಮೇಳವನ್ನು ಹಮ್ಮಿಕೊಳ್ಳಲಾಗಿದೆ. ಸದರಿ ತೋಟಗಾರಿಕೆ ಮೇಳದಲ್ಲಿ ತೋಟಗಾರಿಕೆ ಕ್ಷೇತ್ರದಲ್ಲಿ ವಿಶೇಷ ಸಾಧನೆ ಮಾಡಿದ ಕೃಷಿಕರಿಗೆ ವಿಶ್ವವಿದ್ಯಾಲಯವು ರಾಜ್ಯದ ಪ್ರತಿಯೊಂದು ಜಿಲ್ಲೆಯಿಂದ ಒಬ್ಬ ಶ್ರೇಷ್ಠ ತೋಟಗಾರಿಕೆ ರೈತ ಅಥವಾ ರೈತ ಮಹಿಳೆಯನ್ನು ಆಯ್ಕೆ ಮಾಡಿ ಸೂಕ್ತ ಬಹುಮಾನದೊಂದಿಗೆ ಪ್ರಶಸ್ತಿ ನೀಡಿ ಸನ್ಮಾನಿಸಲಾಗುವದು. ಆದುದರಿಂದ ಈ ಪ್ರಶಸ್ತಿಗಾಗಿ ಅರ್ಜಿ ಸಲ್ಲಿಸಲು ಬಯಸುವ ಬೆಳಗಾವಿ ಜಿಲ್ಲೆಯ ರೈತ/ರೈತ ಮಹಿಳೆಯರು ಅರ್ಜಿ ನಮೂನೆಯನ್ನು ಡೀನ್ ಕಛೇರಿ, ಕಿತ್ತೂರ ರಾಣಿ ಚನ್ನಮ್ಮ ತೋಟಗಾರಿಕೆ ಮಹಾವಿದ್ಯಾಲಯ, ಅರಭಾವಿ ಅಥವಾ ವಿಸ್ತರಣಾ ಮುಂದಾಳು, ತೋಟಗಾರಿಕೆ ವಿಸ್ತರಣಾ ಶಿಕ್ಷಣ ಘಟಕ, ಅರಭಾವಿಯಲ್ಲಿ ಅಥವಾ ತೋವಿವಿಯ ವೆಬ್‌ಸೈಟ್: www.uhsbagalkot.karnataka.gov.in ಮೂಲಕ ಪಡೆದುಕೊಳ್ಳಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ದಿನಾಂಕ 5ನೇ ನವೆಂಬರ್ 2025ರ ಒಳಗಾಗಿ ಸಮೀಪದ ಅರಭಾವಿಯ ಡೀನ್, ಕಿತ್ತೂರ ರಾಣಿ ಚನ್ನಮ್ಮ ತೋಟಗಾರಿಕೆ ಮಹಾವಿದ್ಯಾಲಯ ಇವರಿಗೆ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ಅರಭಾವಿಯ ಕಿ.ರಾ.ಚ.ತೋ. ಮಹಾವಿದ್ಯಾಲಯದ ಮುಂದಾಳು ಡಾ. ಎ. ಎಮ್. ನದಾಫ್ 8660834191 ಸಂಪರ್ಕಿಸಬಹುದು.

# ವೃತ್ತಿಯಾಚೆಗಿನ ಸೇವೆಯೇ ಪ್ರಶಸ್ತಿಗೆ ಮಾನದಂಡ

**ಜಮಖಂಡಿ:** ವೃತ್ತಿಯಾಚೆ ಹೆಚ್ಚುವರಿಯಾಗಿ ಸಲ್ಲಿಸಿದ ಸಮಾಜಸೇವೆಯೆ ತಮ್ಮನ್ನು ಪ್ರಶಸ್ತಿಗೆ ಆಯ್ಕೆ ಮಾಡಿದ ಮಾನದಂಡ ಆಗಿತ್ತು. ವೃತ್ತಿಯ ಆಚೆ ಮಾಡುವ ಸೇವೆಯನ್ನು ಸಮಾಜ ನೋಡುತ್ತಿರುತ್ತದೆ. ಆದಾಗ್ಯೂ, ಆತ್ಮತೃಪ್ತಿಗಾಗಿ ಸೇವೆ ಮಾಡಬೇಕು ಎಂದು ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜಿನ ಉಪನ್ಯಾಸಕ ಡಾ.ಲಿಂಗಾನಂದ ಗವಿಮಠ ಹೇಳಿದರು.

ಕರ್ನಾಟಕ ಸರ್ಕಾರ ಕೊಡಮಾಡಿದ ರಾಜ್ಯ ಮಟ್ಟದ ಶ್ರೇಷ್ಠ ಉಪನ್ಯಾಸಕ ಪ್ರಶಸ್ತಿಗೆ ಭಾಜನರಾದ ಪ್ರಯುಕ್ತ ರೋಟರಿ ಸಂಸ್ಥೆ ಇಲ್ಲಿನ ವಿಜಯಪುರ ರಸ್ತೆ ಪಕ್ಕದ ರೋಟರಿ ಭವನದಲ್ಲಿ ಶುಕ್ರವಾರ ಸಂಜೆ ಏರ್ಪಡಿಸಿದ್ದ ವಾರದ ಸಭೆಯಲ್ಲಿ ನೀಡಿದ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಇಕೋ ಕ್ಲಬ್ ಮೂಲಕ ಪರಿಸರ ಸಂರಕ್ಷಣೆ ಜಾಗೃತಿ ಅಭಿಯಾನ, ಪವಾಡ ರಹಸ್ಯ ಬಯಲು ಕಾರ್ಯಕ್ರಮಗಳ ಮೂಲಕ ಸಾರ್ವಜನಿಕರಲ್ಲಿ ವೈಜ್ಞಾನಿಕ ಮನೋಭಾವನೆ ಬೆಳೆಸುವುದು, ಇಂಟ್ರ್ಯಾಕ್ಟ್ ಸಂಸ್ಥೆಯ ಅಡಿಯಲ್ಲಿ ಕೈಗೊಂಡ ಪಲ್ಸ್ ಪೋಲಿಯೋ ಜಾಗೃತಿ ಅಭಿಯಾನ, ಸಾರ್ವಜನಿಕರಿಂದ ಪೋಲಿಯೋ ಸಹಾಯಧನ ಸಂಗ್ರಹ, ಲಾತೂರ ಭೂಕಂಪ ಸಂತ್ರಸ್ತರಿಗಾಗಿ ಸಹಾಯಧನ ಸಂಗ್ರಹ ಸೇರಿದಂತೆ ಬಿಡುವಿನ ವೇಳೆಯಲ್ಲಿ ಸಲ್ಲಿಸಿದ ಇತರ ಸಮಾಜಸೇವೆಗಳನ್ನು ಪರಿಗಣಿಸಿ ತಮಗೆ ಪ್ರಶಸ್ತಿ ಬಂದಿದೆ ಎಂದರು.




ರೋಟರಿ ಸಂಸ್ಥೆಯ ಅಧ್ಯಕ್ಷ ರಾಜಶೇಖರ ಕೋವಳ್ಳಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ರೋಟರಿ ಫೌಂಡೇಷನ್‌ಗೆ ವೈಯಕ್ತಿಕವಾಗಿ ದೇಣಿಗೆ ನೀಡಿದ ಪ್ರಯುಕ್ತ ರೋಟರಿ ಅಂತಾರಾಷ್ಟ್ರೀಯ ಸಂಸ್ಥೆ ಕೊಡಮಾಡಿದ ಪಾಲ್ ಹ್ಯಾರೀಸ್ ಫೆಲೋ(ಪಿಎಚ್‌ಎಫ್)ಗೆ ಭಾಜನರಾದ ಸುಮಾರು 15 ಜನ ರೋಟರಿ ಸದಸ್ಯರಿಗೆ ರೋಟರಿ ಪಿನ್ ವಿತರಿಸಲಾಯಿತು. ಪ್ರಶಾಂತ ಗಾತಾಡೆ ರೋಟರಿ ಸಂಸ್ಥೆಯ 'ದಿ ಫೋರ್ ವೇ ಟೆಸ್ಟ್' ಓದಿದರು. ಕೃಷಿ ಅಧಿಕಾರಿ ಮಲ್ಲಪ್ಪ ಬುಜರುಕ ಅತಿಥಿಗಳನ್ನು ಪರಿಚಯಿಸಿದರು. ರೋಟರಿ ಸಂಸ್ಥೆಯ ಮಾಜಿ ಅಧ್ಯಕ್ಷ ಕಿರಣ ದೇಸಾಯಿ ನಿರೂಪಿಸಿದರು. ಕಾರ್ಯದರ್ಶಿ ಎಂ.ಎಚ್. ಕಡ್ಲಿಮಟ್ಟಿ ವಂದಿಸಿದರು.

## ಅ. 23 ರಂದು ರಾಣಿ ಚೆನ್ನಮ್ಮ ಜಯಂತಿ

**ಹುಬ್ಬಳ್ಳಿ:** ಪ್ರತಿ ವರ್ಷದಂತೆ ಈ ವರ್ಷವು ಕೂಡ ಅದ್ದೂರಿಯಾಗಿ ಅ.23 ರಂದು ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಆಚರಣೆ ಮಾಡಲಾಗುವುದು ಎಂದು ಹುಬ್ಬಳ್ಳಿ ನಗರ ಗ್ರೇಡ್-2 ತಹಶೀಲ್ದಾರರಾದ ಶಿವಾನಂದ ಹೆಬ್ಬಳ್ಳಿ ಅವರು ಹೇಳಿದರು. ಶನಿವಾರ ತಾಲೂಕು ಆಡಳಿತ ಸೌಧದ ತಹಶೀಲ್ದಾರ ಕಾರ್ಯಾಲಯದ ಸಭಾಭವನದಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಆಚರಣೆ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ಅಂದು ಬೆಳಿಗ್ಗೆ 10 ಗಂಟೆಗೆ ತಾಲೂಕು ಆಡಳಿತ ಸಭಾಭವನದಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ರವರ ಜಯಂತಿ ಆಚರಣೆ ಮಾಡಲಾಗುತ್ತದೆ. ಹಾಗೂ ,ಸಮಾಜದ ಸಾಧಕರಿಗೆ ಸನ್ಮಾನ ಮಾಡಲಾಗುವದು, ಮತ್ತು ಹೆಚ್ಚಿನ ಸಂಖ್ಯೆಯಲ್ಲಿ ಸಮಾಜದ ಮುಖಂಡರು ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದರು. ಪೂರ್ವಭಾವಿ ಸಭೆಯಲ್ಲಿ ,ಸಂಜೀವ ಧುಮ್ಮಕನಾಳ,ಚನ್ನಬಸಪ್ಪ ಧಾರವಾಡಶೆಟ್ರ, ರತ್ನಾ.ಎಸ್. ಚಾಶೆಟ್ಟಿ, ಬಿ.ಎಂ. ಗೌಡ್ರ, ಸದಾಶಿವ. ಎಸ್. ಚಾಶೆಟ್ಟಿ, ವೀರಣ್ಣ. ಬ.ನೀರಲಗಿ, ಡಾ. ಮೋಹನ್. ಎಂ. ನುಚ್ಚಿ, ರತ್ನ, ಆಶ್ವಿನಿ ಮಾದರ, ರತ್ನ, ಗುರುನಾಥ ಬರದೇವ, ಸುರೇಶ ಬಾರಕೇರ, ಅಂದನಪ್ಪ, ಡಾ.ಸುವರ್ಣಲತಾ ಗದಿಗೆಪ್ಪ ಗೌಡ್ರು, ರತ್ನಾ. ವಿ, ರತ್ನಾ.ಕ, ಸಮಾಜದ ಮುಖಂಡರು ಅಧಿಕಾರಿಗಳು ಉಪಸ್ಥಿತರಿದ್ದರು.



# ಕನ್ಹೇರಿ ಶ್ರೀಗಳಿಗೆ ರಾಜ್ಯ ಪ್ರವೇಶ ನಿರ್ಬಂಧಕ್ಕೆ ಒತ್ತಾಯ

**ಬೆಳಗಾವಿ:** ಕನ್ನೇರಿ ಕಾಡಸಿದ್ದೇಶ್ವರ ಮಠದ ಸ್ವಾಮಿಜಿಗಳು ನೀಡಿರುವ ವಿವಾದಾತ್ಮಕ ಹಾಗೂ ಅವಹೇಳನಕಾರಿ ಹೇಳಿಕೆ ಖಂಡಿಸಿ, ಬಸವಪರ ಸಂಘಟನೆಗಳ ವತಿಯಿಂದ ಕನ್ನೆರಿ ಮಠದ ಸ್ವಾಮಿಗಳಿಗೆ ಬೆಳಗಾವಿ ಸೇರಿದಂತೆ ಕರ್ನಾಟಕ ರಾಜ್ಯ ಪ್ರವೇಶಿಸದಂತೆ ನಿರ್ಬಂಧ ಹೇರಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಶುಕ್ರವಾರ ಪ್ರತಿಭಟಿಸಿ, ಜಿಲ್ಲಾಡಳಿತದ ಮೂಲಕ ರಾಜ್ಯ ಸರಕಾರಕ್ಕೆ ಮನವಿ ರವಾನಿಸಲಾಯಿತು.

ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಸೇರಿದ ಪ್ರತಿಭಟನಾಕಾರರು, ಕನ್ನೇರಿ ಕಾಡಸಿದ್ದೇಶ್ವರ ಮಠದ ಸ್ವಾಮಿಜಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಸ್ವಾಮೀಜಿಯವರ ಅವಹೇಳನಕಾರಿ ಹಾಗೂ ಪ್ರಚೋದನಾತ್ಮಕ ಹೇಳಿಕೆ ಸಮಾಜದಲ್ಲಿ ಶಾಂತಿ ಕದಡಿ

ಕಾನೂನು ವ್ಯವಸ್ಥೆಗೆ ದಕ್ಕೆ ಬರುವ ಸಂಭವವಿದ್ದು, ಹೀಗಾಗಿ ಕೂಡಲೇ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ವೇಳೆ ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಬಸವರಾಜ ರೊಟ್ಟಿ ಅವರು ಮಾತನಾಡಿ, ಇತ್ತೀಚಿಗೆ ಮಹಾರಾಷ್ಟ್ರದ



ಬಿಳ್ಳೂರ ಮಠದಲ್ಲಿ ಜರುಗಿದ ಸಮಾರಂಭದಲ್ಲಿ ಕನ್ನೇರಿ ಕಾಡಸಿದ್ದೇಶ್ವರ ಮಠದ ಸ್ವಾಮಿಜಿಗಳು ಬಸವ ಸಂಸ್ಕೃತಿ ಅಭಿಯಾನವನ್ನು ಅಪಮಾನಿಸಿದ್ದಾರೆ. ಅಲ್ಲದೇ, ಲಿಂಗಾಯತ ಮಠಾಧೀಶರ ವಿರುದ್ಧ ಅವಾಚ್ಯ,ಅಶ್ಲೀಲ ಪದ ಬಳಕೆ ಮಾಡಿದ್ದಾರೆ. ಒಬ್ಬ ಸ್ವಾಮೀಜಿಗಳಾಗಿ ಈ ರೀತಿ ಪದ ಬಳಕೆ ಮಾಡಿರುವುದು ಖಂಡನೀಯ. ಇದು ಲಿಂಗಾಯಿತ ಧರ್ಮೀಯರಿಗೆ ಹಾಗೂ ಬಸವಣ್ಣನವರ ಅನುಯಾಯಿಗಳಿಗೆ ನೋವುಂಟು ಮಾಡಿದೆ.ಹೀಗಾಗಿ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದರು.

ಪ್ರತಿಭಟನೆಯಲ್ಲಿ ಜಾಗತಿಕ ಲಿಂಗಾಯಿತ ಮಹಾಸಭೆಯ ಪ್ರವೀಣ ಚಿಕಲಿ, ಮುರುಗೇಶ ಶಿವಪೂಜಿ, ಮುರಿಗೆಪ್ಪ ಬಾಳಿ, ಲಿಂಗಾಯತ ಸಂಘಟನೆ ಅಧ್ಯಕ್ಷ ಈರಣ್ಣ ದೇಯಣ್ಣವರ, ಲಿಂಗಾಯತ ಕ್ಷೇಮಾಭಿವೃದ್ಧಿ ಸಂಘದ ಎಸ್.ಜಿ.ಸಿದ್ನಾಳ, ಶಂಕರ್ ಗುಡುಸ್, ಆರ್.ಪಿ.ಪಾಟೀಲ್, ಜಾಗತಿಕ ಲಿಂಗಾಯತ ಮಹಾಸಭಾ ಮಹಿಳಾ ಘಟಕದ ಅಧ್ಯಕ್ಷೆ ಪ್ರೇಮಕ್ಕ ಅಂಗಡಿ ಸೇರಿದಂತೆ ಇತರರು ಇದ್ದರು.

**ನಾಗನೂರು ಭಕ್ತರಿಂದ ಮನವಿ:** ನಾಗನೂರಿಯಿಂದ ಹಲವು ವಾಹನಗಳಲ್ಲಿ ಆಗಮಿಸಿದ ನೂರಾರು ಬಸವ ಭಕ್ತರು ಪ್ರತ್ಯೇಕವಾಗಿ ಮನವಿ ಸಲ್ಲಿಸಿದರು.

# ದೀಪಾವಳಿಯಲ್ಲಿ ಅಹಿತಕರ ಘಟನೆ ನಡೆಯದಂತೆ ಎಚ್ಚರವಹಿಸಿ

**ಕೊಪ್ಪಳ:** ಜಿಲ್ಲೆಯಲ್ಲಿ ದೀಪಾವಳಿ ಹಬ್ಬವು ಪರಿಸರ ಸ್ನೇಹಿಯಾಗಿ ಹಾಗೂ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಸಂಭ್ರಮದಿಂದ ಆಚರಣೆಯಾಗುವಂತೆ ಅಧಿಕಾರಿಗಳು ನೋಡಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಛೇರಿಯ ಕೆ-ಸ್ವಾನ್ ವಿಸಿ ಹಾಲ್‌ನಲ್ಲಿ ದೀಪಾವಳಿ ಹಬ್ಬದ ಅಂಗವಾಗಿ ಕರೆದ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳೊಂದಿಗೆ ವಿಡಿಯೋ ಸಂವಾದ ನಡೆಸಿ ಮಾತನಾಡಿದರು.

ಸಾರ್ವಜನಿಕರು ತಿರುಗಾಡುವ ರಸ್ತೆಗಳಲ್ಲಿ ಜನರು ಎಲ್ಲೆಂದರಲ್ಲಿ ಪಟಾಕಿಗಳನ್ನು ಸಿಡಿಸಿ ಸಂಚಾರಕ್ಕೆ ತೊಂದರೆ ಮಾಡುವುದು ಹಾಗೂ ಶಬ್ದ ಮಾಲಿನ್ಯ ಮತ್ತು ಆಸ್ಪತ್ರೆ, ಶಾಲೆ ಸೇರಿದಂತೆ ಇತರೆ ಸ್ಥಳಗಳಲ್ಲಿ ಜನರು ಪಟಾಕಿಗಳನ್ನು ಸಿಡಿಸದಂತೆ ನೋಡಿಕೊಳ್ಳಬೇಕು. ಕೇಂದ್ರ ಮತ್ತು ರಾಜ್ಯ ಸರ್ಕಾರದ ಮಾರ್ಗಸೂಚಿಗಳನ್ನು ಪಾಲನೆ ಮಾಡುತ್ತ ಈ ಹಬ್ಬವನ್ನು ಆಚರಣೆ ಮಾಡೋಣ ಎಂದರು.

ಜನರು ಪರಿಸರ ಸ್ನೇಹಿ ಹಸಿರು ಪಟಾಕಿ ಜೊತೆಗೆ ಮಣ್ಣಿನ ಹಣತೆಯ ದೀಪಗಳಿಂದ ಈ ದೀಪಾವಳಿ ಆಚರಿಸಬೇಕು. ಇದರಿಂದ ಗ್ರಾಮೀಣ



ಭಾಗದಲ್ಲಿ ತಯಾರಿಸುವ ಹಣತೆಯಿಂದ ಗ್ರಾಮೀಣ ಪ್ರದೇಶಕ್ಕೆ ಆದಾಯವಾಗುವುದರ ಜೊತೆಗೆ ಯಾವುದೇ ಪರಿಸರ ಮಾಲಿನ್ಯವೂ ಆಗುವುದಿಲ್ಲ. ಹಸಿರು ಪಟಾಕಿಗಳನ್ನು ಬಳಸುವಾಗ ಚಿಕ್ಕ ಮಕ್ಕಳು, ವೃದ್ಧರು, ಪ್ರಾಣಿ, ಪಕ್ಷಿಗಳಿಗೆ ತೊಂದರೆಗಳಾಗದಂತೆ ಸಾರ್ವಜನಿಕರು ಮುಂಜಾಗ್ರತೆ ವಹಿಸಬೇಕು ಎಂದರು.

ಆಸ್ಪತ್ರೆ, ಶಾಲಾ-ಕಾಲೇಜುಗಳು ಸೇರಿದಂತೆ ಇತರೆ ನಿಷೇಧಿತ ಪ್ರದೇಶಗಳಲ್ಲಿ ಪಟಾಕಿಗಳನ್ನು ಬಳಸುವಂತಿಲ್ಲ. ನಮ್ಮ ಹಿಂದಿನ ಸಂಪ್ರದಾಯದಂತೆ ಮಣ್ಣಿನ ಹಣತೆಗಳಲ್ಲಿ ದೀಪಗಳನ್ನು ಬೆಳಗಿಸುವ ಮೂಲಕ ಈ ಹಬ್ಬವನ್ನು ಆಚರಣೆ ಮಾಡುತ್ತಾ ಬರಲಾಗುತ್ತಿದ್ದು, ಅದರಂತೆ ಈ ವರ್ಷ ಮಣ್ಣಿನ ಹಣತೆಯ ದೀಪಗಳನ್ನು ಬೆಳಗಿಸುವ ಮೂಲಕ ಸ್ಥಳೀಯ ಹಣತೆ ತಯಾರಕರಿಗೆ ಉತ್ತೇಜನ ನೀಡುವುದರ ಜೊತೆಗೆ ಈ ದೀಪಾವಳಿಯನ್ನು ಎಲ್ಲರೂ ಸಂಭ್ರಮ ಮತ್ತು ಸಡಗರದಿಂದ ಜಿಲ್ಲೆಯಲ್ಲಿ ಆಚರಿಸೋಣವೆಂದು ಹೇಳಿದರು.

ಈ ಸಭೆಯಲ್ಲಿ ಜಿಲ್ಲಾ ಪಂಚಾಯತನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ನಾಗಮಣಿ ಹೊಸಮನಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ರುದ್ರೇಶಪ್ಪ ಟಿ.ಎಸ್., ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಅಜ್ಜಪ್ಪ ಸೊಗಲದ ಸೇರಿದಂತೆ ಇತರೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗೆ ಅಧಿಕಾರಿಗಳು, ಜಿಲ್ಲೆಯ ಎಲ್ಲಾ ತಾಲ್ಲೂಕಿನ ತಹಶೀಲ್ದಾರರು, ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಕನ್ಹೇರಿ ಸ್ವಾಮೀಜಿ ವಿರುದ್ಧ ಕ್ರಮಕ್ಕೆ ಒತ್ತಾಯಿಸಿ ಪ್ರತಿಭಟನೆ

**ಬಸವನಬಾಗೇವಾಡಿ:** ಪಟ್ಟಣದಲ್ಲಿ ಬಸವನ ಬಾಗೇವಾಡಿ ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ, ಮಸಬಿನಾಳ ವಿರಕ್ತಮಠದ ಸಿದ್ದರಾಮ ಸ್ವಾಮೀಜಿ, ಯಲ್ಲಾಲಿಂಗಮಠದ ಬಸವರಾಜ ಮಹಾರಾಜರ ನೇತೃತ್ವದಲ್ಲಿ ವಿವಿಧ ಬಸವ ಪರ ಸಂಘಟನೆಗಳಿಂದ ಗುರುವಾರ ಬಸವೇಶ್ವರ ವೃತ್ತದಲ್ಲಿ ಬಸವ ಸಂಸ್ಕೃತಿ ಅಭಿಯಾನ, ಲಿಂಗಾಯತ ಮಠಾಧೀಶರ ಒಕ್ಕೂಟದ ವಿರುದ್ಧ ಕನ್ಹೇರಿಯ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿ ಅವಾಚ್ಯ ಶಬ್ದಗಳಿಂದ ನಿಂದಿಸಿ ಅವಹೇಳನಕಾರಿಯಾಗಿ ಮಾತನಾಡಿರುವ ಹಿನ್ನೆಲೆ ಕನ್ಹೇರಿ ಸ್ವಾಮೀಜಿ ವಿರುದ್ಧ ಕ್ರಮಕ್ಕೆ ಒತ್ತಾಯಿಸಿ ಸಿಎಂ ಅವರಿಗೆ ಬರೆದ ಮನವಿ ಪತ್ರವನ್ನು ತಹಸೀಲ್ದಾರ ಮೂಲಕ ಸಲ್ಲಿಸಲಾಯಿತು.

ಪಟ್ಟಣದ ವಿರಕ್ತಮಠದ ಕನ್ಹೇರಿಯ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿ ಅವರ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ಪ್ರತಿಭಟನೆ ಮೆರವಣಿಗೆ ಮೂಲಕ ಬಸವೇಶ್ವರ ವೃತ್ತದಲ್ಲಿ ಜಮಾಯಿಸಿದ ನಂತರ ಕೆಲ ಹೊತ್ತು ಪ್ರತಿಭಟನೆ ನಡೆಸಿ ತಹಸೀಲ್ದಾರ ಅವರಿಗೆ ಮನವಿ ಸಲ್ಲಿಸಿದ ನಂತರ ಕನ್ಹೇರಿ ಮಠದ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿಯವರ ಭಾವಚಿತ್ರಕ್ಕೆ ಚಪ್ಪಲಿ ಹಾರಹಾಕಿ ಬೆಂಕಿ ಹಚ್ಚಿ ದಹಿಸಿ ಪ್ರತಿಭಟನೆಕಾರರು ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆ ಉದ್ದೇಶಿಸಿ ಮಸಬಿನಾಳದ ಸಿದ್ದರಾಮ ಸ್ವಾಮೀಜಿ ಮಾತನಾಡಿ, ವಿಶ್ವಗುರು ಬಸವೇಶ್ವರರು ನುಡಿದರೆ ಮುತ್ತಿನ ಹಾರದಂತಿರಬೇಕು. ನುಡಿದರೆ ಸ್ಫಟಿಕದ ಸಲಾಕೆಯಂತಿರಬೇಕು. ನುಡಿದರೆ ಹೌದು ಹೌದು ಎನ್ನುತ್ತಿರಬೇಕು ಎಂದು ಹೇಳಿದ್ದಾರೆ. ಇದನ್ನು ಅರಿಯದೇ ಸ್ವಾಮೀಜಿಯವರಾದ ಕನ್ಹೇರಿ ಮಠದ ಶ್ರೀಗಳು ಮಾತನಾಡಿದ್ದಾರೆ. ಕನ್ಹೇರಿ ಶ್ರೀಗಳು ಅವಹೇಳನಕಾರಿಯಾಗಿ ಮಾತನಾಡಿದ್ದರಿಂದಲೇ ಬಸವ



ಭಕ್ತರು ಬೀದಿಗಿಳಿಯಬೇಕಾಗಿದೆ. ಬಸವ ಸಂಸ್ಕೃತಿಯ ಕುರಿತು ಅರಿಯದೇ ಈ ರೀತಿಯಾಗಿ ಮಾತನಾಡುವದು ಸರಿಯಲ್ಲ. ಅವರು ಮಾತನಾಡಿದ ಶಬ್ದಗಳನ್ನು ಕೇಳಿದರೆ ಅವರಿಗೆ ಸಂಸ್ಕಾರ ಇಲ್ಲ ಎಂಬುವದು ಗೊತ್ತಾಗುತ್ತದೆ. ಇವರ ವಿರುದ್ಧ ಉಗ್ರವಾದ ಹೋರಾಟ ನಿರಂತರವಾಗಿ ನಡೆಯುವಂತಾಗಲೆಂದರು.

ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ ಮಾತನಾಡಿ, ಬಸವಜನ್ಮ ಸ್ಥಳ ಬಸವನಬಾಗೇವಾಡಿಯಿಂದ ಮಠಾಧೀಶರ ಒಕ್ಕೂಟದಿಂದ ಬಸವ ಸಂಸ್ಕೃತಿ ಅಭಿಯಾನ ಆರಂಭಗೊಂಡು ರಾಜ್ಯದ ಎಲ್ಲ ಜಿಲ್ಲೆಗಳಿಗೆ ತೆರಳಿ ಜನರಲ್ಲಿ ಬಸವ ಸಂಸ್ಕೃತಿಯ ಕುರಿತು ಜಾಗೃತಿ ಮೂಡಿಸಲಾಗಿದೆ. ಈ ಅಭಿಯಾನದ ಯಶಸ್ವಿಗೆ ನಾಡಿನ ತುಮಕೂರು, ಗದಗ, ಬಾಲ್ಕಿ, ಇಲಕಲ್ಲ ಶ್ರೀಗಳು ಸೇರಿದಂತೆ ನಾಡಿನ ನೂರಾರು ಶ್ರೀಗಳು ಹಗಲಿರುಳು ಶ್ರಮಿಸಿದ್ದಾರೆ. ಈ ಅಭಿಯಾನದ ಕುರಿತು ಕನ್ಹೇರಿ ಶ್ರೀಗಳು ಅವಹೇಳನಕಾರಿಯಾಗಿ ಮಾತನಾಡಿರುವುದು ಅವರಿಗೆ ಶೋಭೆ ತರುವಂತದಲ್ಲ. ಅವರು ಹೇಳಿದ ಮಾತುಗಳಿಂದ ಇಡೀ ಬಸವ ಭಕ್ತರಿಗೆ ನೋವಾಗಿದೆ. ಅಭಿಯಾನದಲ್ಲಿ ಯಾವ ವಿಷಯಗಳು ಚರ್ಚೆಯಾಗಿವೆ ಎಂಬುವದನ್ನು ಅವರು ಸರಿಯಾಗಿ ಅರ್ಥೈಸಿಕೊಳ್ಳಬೇಕಿದೆ. ಇದರ ಬಗ್ಗೆ ಅವರಿಗೆ ಏನಾದರೂ ಗೊಂದಲವಿದ್ದರೆ ಬಹಿರಂಗವಾಗಿ ಅವರು ಚರ್ಚೆ ಬಂದು ಅವರ ಗೊಂದಲ ನಿವಾರಿಸಿಕೊಳ್ಳಬಹುದು. ಇದನ್ನು ಅರಿತುಕೊಳ್ಳದೇ ಈ ರೀತಿಯಾಗಿ ಅಭಿಯಾನ, ಮಠಾಧೀಶರ ಒಕ್ಕೂಟದ ಶ್ರೀಗಳ ಕುರಿತು ಮಾತನಾಡಿರುವದು ಅವರ ಸ್ಥಾನಕ್ಕೆ ಗೌರವ ತರುವ ಸಂಗತಿಯಲ್ಲ. ಇವರು ಬಸವನಬಾಗೇವಾಡಿಯಲ್ಲಿ ಒಂದು ಮಠವನ್ನು ನಿರ್ಮಾಣ ಮಾಡುತ್ತಿದ್ದಾರೆ. ಅವರು ಬಸವ ಸಂಸ್ಕೃತಿಯನ್ನನು ಅಳವಡಿಸಿಕೊಳ್ಳುವಂತಾಗಬೇಕು. ಅವರ ಮಾತನಾಡುವದು ಅವರ ಸಂಸ್ಕೃತಿ, ಸಂಸ್ಕಾರ ತೋರಿಸುತ್ತದೆ. ಅವರ ಬಸವ ಭಕ್ತರ ಕ್ಷಮೆ ಕೋರಬೇಕೆಂದರು.

ಪ್ರತಿಭಟನೆ ಉದ್ದೇಶಿಸಿ ಪಿಕೆಪಿಎಸ್ ಬ್ಯಾಂಕಿನ ಅಧ್ಯಕ್ಷ ಸಂಗನಗೌಡ ಚಿಕ್ಕೊಂಡ, ಸಾಹಿತಿ ಲ.ರು.ಗೊಳಸಂಗಿ, ರಾಷ್ಟ್ರೀಯ ಬಸವಸೈನ್ಯ ಸಂಸ್ಥಾಪಕ ಅಧ್ಯಕ್ಷ ಶಂಕರಗೌಡ ಬಿರಾದಾರ, ಹಾಲುಮತ ಸಮಾಜದ ಮುಖಂಡ ಸಂಗಮೇಶ ಓಲೇಕಾರ,ತಾಲೂಕು ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವೀರಣ್ಣ ಮರ್ತುರ ಮಾತನಾಡಿ, ಶ್ರೀಗಳು ರಾಜ್ಯದ ಬಸವ ಭಕ್ತರ ಕ್ಷಮೆ ಕೋರಬೇಕು. ಸಿಎಂ ಸಿದ್ದರಾಮಯ್ಯನವರು ಶ್ರೀಗಳ ಮೇಲೆ ಕಾನೂನು ಕ್ರಮ ತೆಗೆದುಕೊಳ್ಳಬೇಕೆಂದು ಆಗ್ರಹಿಸಿದ ಅವರು, ಅವರಿಗೆ ಕ್ರಮ ತೆಗೆದುಕೊಳ್ಳುವವರೆಗೂ ನಮ್ಮ ಹೋರಾಟ ನಿರಂತರವಾಗಿ ನಡೆಯುತ್ತದೆ ಎಂದರು.

ಪ್ರತಿಭಟನೆಯಲ್ಲಿ ಜಾಗತಿಕ ಲಿಂಗಾಯತ ಮಹಾಸಭಾದ ತಾಲೂಕಾಧ್ಯಕ್ಷ ಎಫ್.ಡಿ.ಮೇಟಿ, ತಾಲೂಕು ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವೀರಣ್ಣ ಮರ್ತುರ, ಮುಖಂಡರಾದ ಎಂ.ಜಿ.ಆದಿಗೊಂಡ, ಎಸ್.ಎಸ್.ಝಳಕಿ, ಆರ್.ಜಿ.ಅಳ್ಳಗಿ, ಸಿ.ಎಲ್.ಮುರಾಳ, ಎಸ್.ಎ.ದೇಗಿನಾಳ, ಮಹಾಂತೇಶ ಮಡಿಕೇಶ್ವರ, ಎಚ್.ಎಸ್.ಬಿರಾದಾರ, ಬಸವರಾಜ ಹಾರಿವಾಳ, ಶ್ರೀಕಾಂತ ಕೊಟ್ರಶೆಟ್ಟಿ, ಪ್ರವೀಮ ಪೂಜಾರಿ, ಮಲ್ಲಿಕಾರ್ಜುನ ಹಡಪದ, ಬಸವರಾಜ ಏವೂರ, ಶೇಖರಗೌಡ ಪಾಟೀಲ, ಶೇಖರ ಗೊಳಸಂಗಿ, ಎಸ್.ಜಿ.ಮೊಕಾಶಿ, ಮುರುಗೆಪ್ಪ ಚಿಂಚೋಳಿ, ರುದ್ರಗೌಡ ಬಿರಾದಾರ, ಮಹಾಂತೇಶ ಹಂಜಗಿ, ಹಣಮಂತ್ರಾಯ ಬಿರಾದಾರ, ಪ್ರಭಾಕರ ಖೇಡದ, ಶಿವಯೋಗಿ ಒಣರೊಟ್ಟಿ, ಸಂಗಪ್ಪ ಬಶೆಟ್ಟಿ, ಸಂಕನಗೌಡ ಪಾಟೀಲ, ಸುರೇಶಗೌಡ ಪಾಟೀಲ, ಡಾ.ಮಲ್ಲಿಕಾರ್ಜುನ ಹಳ್ಳಿ, ಪ್ರಭಾವತಿ ಹಳ್ಳಿ, ಎಚ್.ಎಸ್. ಹತ್ತಿ, ಕಸ್ತೂರಿ ಬಿರಾದಾರ, ಎಸ್.ಕೆ.ಸೋಮನಕಟ್ಟಿ, ಎಂ.ಎಸ್.ತಳವಾರ, ಸಿದ್ದಲಿಂಗಪ್ಪ ಪಾಟೀಲ, ಬಸಮ್ಮ ಪಡಶೆಟ್ಟಿ, ಕಸ್ತೂರಿ ಅಪ್ಪಣ್ಣನವರ, ಶೋಭಾ ರೇವಡಕರ, ಸಾವಿತ್ರಿ ಅರಸನಾಳ, ಕಮಲಾ ಸಜ್ಜನ, ಶಾಂತಾ ಬಸರಕೋಡ, ಯಮನಕ್ಕ ಅಂಬಳೂರ ಸೇರಿದಂತೆ ನೂರಾರು ಜನರು ಭಾಗವಹಿಸಿದ್ದರು.

## ಯೋಗಾ ತಂಡಕ್ಕೆ ವಿದ್ಯಾರ್ಥಿಗಳು ಆಯ್ಕೆ



**ಮೂಡಲಗಿ:** ಇತ್ತೀಚೆಗೆ ಮೂಡಲಗಿ ಶಿಕ್ಷಣ ಸಂಸ್ಥೆಯ ದೈಹಿಕ ಶಿಕ್ಷಣ ಮಹಾವಿದ್ಯಾಲಯದ ಆತಿಥ್ಯದಲ್ಲಿ ಜರುಗಿದ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಅಂತರ ಕಾಲೇಜುಗಳ ಏಕವಲಯ ಪುರುಷ ಹಾಗೂ ಮಹಿಳಾ ಯೋಗಾಸನ ಸ್ಪರ್ಧೆಯಲ್ಲಿ ತಾಲೂಕಿನ ಕಲ್ಲೋಳಿ ಪಟ್ಟಣದ ಶ್ರೀ ರಾಮಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಪ್ರಥಮ ದರ್ಜೆಯ ಮಹಾವಿದ್ಯಾಲಯದ ವಿದ್ಯಾರ್ಥಿಗಳಾದ ಕುಮಾರಿ ಪ್ರೇಮಾ ಕೊಡ್ಲಿಕಾರ, ಸೌಜನ್ಯ ತುಪ್ಪಾರೊಟ್ಟಿ, ಸುಷ್ಮಾ ಬಳೋಬಾಳ, ಸಂಜು ಘೋಡಗೇರಿ, ಭರತ ರಾಮಗೌಡ ಸಾಂಪ್ರದಾಯಿಕ ಗುಂಪು ಯೋಗಾಸನದಲ್ಲಿ ಮತ್ತು ಗಂಗವ್ವಾ ಸನದಿ ಕಲಾತ್ಮಕ ವಿಭಾಗದಲ್ಲಿ ವಿಶ್ವವಿದ್ಯಾಲಯದ ಯೋಗಾಸನ ತಂಡಕ್ಕೆ ಬ್ಲ್ಯೂ ಆಗಿ ಆಯ್ಕೆಯಾಗಿ ಅಖಿಲ ಭಾರತ ಅಂತರ್ ವಿಶ್ವವಿದ್ಯಾಲಯ ಯೋಗಾಸನ ಸ್ಪರ್ಧೆಯಲ್ಲಿ ವಿಶ್ವವಿದ್ಯಾಲಯವನ್ನು ಪ್ರತಿನಿಧಿಸಲಿದ್ದಾರೆ.

ಆಯ್ಕೆ ಆದ ವಿದ್ಯಾರ್ಥಿಗಳನ್ನು ರಾಮಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಚೇರಮನ್ನ ಬಸಗೌಡ ಪಾಟೀಲ, ಆಡಳಿತ ಮಂಡಳಿಯ ಸದಸ್ಯರು, ಪ್ರಾಚಾರ್ಯ ಸುರೇಶ ಹನಗಂಡಿ, ದೈಹಿಕ ನಿರ್ದೇಶಕ ಬಿ. ಕೆ. ಸೊಂಟನವರ, ಕ್ರೀಡಾ ಕಾರ್ಯದರ್ಶಿ ಬಿ. ಬಿ. ವಾಲಿ, ತರಬೇತಿದಾರ ಬಸವರಾಜ ಬಡವಣ್ಣಿ, ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಅಭಿನಂದಿಸಿದ್ದಾರೆ.

ಜಿಲ್ಲಾ ನೀರು ಮತ್ತು ನೈರ್ಮಲ್ಯ ಸಮಿತಿ ಸಭೆಯಲ್ಲಿ ಅಧಿಕಾರಿಗಳಿಗೆ ಡಾ.ದಿಲೀಷ್ ಶಶಿ ನಿರ್ದೇಶನ

# ದಾಖಲೆಗಳೊಂದಿಗೆ ಕಾಮಗಾರಿಗಳ ಕ್ರಿಯಾ ಯೋಜನೆ ರೂಪಿಸಿ

**ಕಾರವಾರ:** ಕುಡಿಯುವ ನೀರು ಯೋಜನೆಗಳಿಗೆ ಸಂಬಂಧಿಸಿದಂತೆ ಕ್ರಿಯಾ ಯೋಜನೆಗಳನ್ನು ರೂಪಿಸುವಾಗ, ಸದ್ರಿ ಯೋಜನೆಯ ಅಗತ್ಯತೆ, ಈ ಕುರಿತ ನಿಯಮಾವಳಿಗಳು ಮತ್ತು ಸಂಬಂಧಪಟ್ಟ ಅಗತ್ಯ ಅನುಮೋದಿತ ದಾಖಲೆಗಳೊಂದಿಂಗೆ ಸಮರ್ಪಕವಾದ ಕ್ರಿಯಾ ಯೋಜನೆಯನ್ನು ರೂಪಿಸಿ ಮಂಜೂರಾತಿಗೆ ಸಲ್ಲಿಸುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ ನಿರ್ದೇಶನ ನೀಡಿದರು.

ಅವರು ಶನಿವಾರ ಜಿಲ್ಲಾ ಪಂಚಾಯತ್ ಸಭಾಂಗಂದಲ್ಲಿ ನಡೆದ ಜಿಲ್ಲಾ ನೀರು ಮತ್ತು ನೈರ್ಮಲ್ಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಬೇಸಿಗೆ ಸಮಯದಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಸಮರ್ಪವಾಗಿ ನಿರ್ವಹಿಸಲು ಅನುಕೂಲವಾಗುವಂತೆ ರೂ.2 ಕೋಟಿಗಳ ಅನುದಾನವನ್ನು ಮಂಜೂರು ಮಾಡಿದ್ದು, ಈ ಅನುದಾನದಲ್ಲಿ ವಿವಿಧ ಕಾಮಗಾರಿಗಳನ್ನು ಕೈಗೊಳ್ಳಲು 118 ಕಾಮಗಾರಿಗಳ ಕ್ರಿಯಾ ಯೋಜನೆಯನ್ನು ಸಿದ್ದಪಡಿಸಲಾಗಿದೆ. ಆದರೆ ಈ ಕ್ರಿಯಾ ಯೋಜನೆಯನ್ನು ಸಿದ್ದಪಡಿಸುವಾಗ ಕಾಮಗಾರಿಗಳ ಅಗತ್ಯತೆ ಮತ್ತು ಇವುಗಳನ್ನು ಕೈಗೊಳ್ಳಲು ಅನುಸರಿಸಬೇಕಾದ ನಿಯಮಾವಳಿಗಳು ಮತ್ತು ಸಂಬಂಧಪಟ್ಟ ಅಗತ್ಯ ಅನುಮೋದಿತ ದಾಖಲೆಗಳು ಸಮರ್ಪಕವಾಗಿಲ್ಲದ ಕಾರಣ ಒಂದು ವಾರದಲ್ಲಿ ಎಲ್ಲಾ ದಾಖಲೆಗಳನ್ನು ಒಳಗೊಂಡ ಸಮಗ್ರ ಕ್ರಿಯಾ ಯೋಜನೆಯನ್ನು ಸಿದ್ದಪಡಿಸಿ, ಪುನಃ



ಅನುಮೋದನೆಗೆ ಸಲ್ಲಿಸುವಂತೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಇಂಜಿನಿಯರ್‌ಗಳಿಗೆ ಸೂಚಿಸಿದರು. ಜಲ ಜೀವನ್ ಮಿಷನ್ ಕಾಮಗಾರಿಗಳನ್ನು 4 ಹಂತದಲ್ಲಿ ಕೈಗೊಂಡಿದ್ದು ಒಟ್ಟು 965 ಕಾಮಗಾರಿಗಳ ಪೈಕಿ 956 ಕಾಮಗಾರಿಗಳು ಆರಂಭಗೊಂಡಿದ್ದು, 718 ಕಾಮಗಾರಿಗಳನ್ನು ಪೂರ್ಣಗೊಳಿಸಿ, 657 ಕಾಮಗಾರಿಗಳನ್ನು ಸಂಬಂಧಪಟ್ಟ ಗ್ರಾಮ ಪಂಚಾಯತಗಳಿಗೆ ಹಸ್ತಾಂತರಿಸಲಾಗಿದೆ. ಬಾಕಿ ಉಳಿದ ಕಾಮಗಾರಿಗಳನ್ನು ಆದ್ಯತೆಯಲ್ಲಿ ಪೂರ್ಣಗೊಳಿಸುವಂತೆ ಸೂಚಿಸಿದ ಅವರು, ಸಂಪೂರ್ಣಗೊಂಡಿರುವ ಕಾಮಗಾರಿಗಳ ಕುರಿತ ವಿವರಗಳನ್ನು ಒಳಗೊಂಡ ಸಾರ್ವಜನಿಕ ಮಾಹಿತಿ ಫಲಕಗಳನ್ನು ಸಂಬಂಧಪಟ್ಟ ಗ್ರಾಮಗಳಲ್ಲಿ ಅಳವಡಿಸುವ ಕುರಿತು ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಜಲ ಜೀವನ್ ಮಿಷನ್ ಕಾಮಗಾರಿಗಳಲ್ಲಿ ಜಲಮೂಲದ ಸ್ಥಳ ಬದಲಾವಣೆ, ಹೆಚ್ಚಿನ ಮನೆಗಳಿಗೆ ಸಂಪರ್ಕ ನೀಡಬೇಕಾದ ಸಂದರ್ಭದಲ್ಲಿ ಕಾಮಗಾರಿಗಳ ಪರಿಮಾಣಗಳಲ್ಲಿ ಉಂಟಾಗುವ ವ್ಯತ್ಯಾಸಗಳ ಕುರಿತ ವೇರಿಯೇಷನ್ ಪ್ರಸ್ತಾವನೆಗಳು ಮತ್ತು ವಿವಿಧ ಕಾರಣಗಳಿಂದ ಕಾಮಗಾರಿಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸದೇ ಇರುವ ಕುರಿತು ಅವಧಿ ವಿಸ್ತರಣಾ ಪ್ರಸ್ತಾವನೆಗಳನ್ನು ಸೂಕ್ತ ಕಾರಣಗಳು, ತಾಂತ್ರಿಕ ದಾಖಲೆಗಳು ಹಾಗೂ ಪೂರಕವಾದ ಇತರೇ ಅಗತ್ಯ ದಾಖಲೆಗಳೊಂದಿಗೆ ಕಡ್ಡಾಯವಾಗಿ ಅನುಮೋದನೆಗೆ ಸಲ್ಲಿಸುವಂತೆ ಸೂಚನೆ ನೀಡಿದರು.

ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯಡಿಯಲ್ಲಿ ಸಿದ್ದಾಪುರ ತಾಲೂಕಿನ ಹಳಗೇರಿ ಗ್ರಾಮ ಪಂಚಾಯತ್ ನಲ್ಲಿ ನಿರ್ಮಿಸಲು ಉದ್ದೇಶಿಸಿದ್ದ ಮಲ ತ್ಯಾಜ್ಯ ನಿರ್ವಹಣಾ ಘಟಕದ ಕಾಮಗಾರಿಗೆ ಸಂಬಂಧಪಟ್ಟ ಗ್ರಾಮ ಪಂಚಾಯತ್ ನಿಂದ ಆಕ್ಷೇಪ ವ್ಯಕ್ತವಾಗಿರುವ ಕುರಿತಂತೆ ಸಭೆಯಲ್ಲಿ ವಿಸ್ತೃತ ಚರ್ಚೆ ನಡೆಯಿತು,ಈ ಕಾಮಗಾರಿಯ ಕುರಿತ ಈವರೆಗಿನ ಪ್ರಗತಿಯ ಸಂಪೂರ್ಣ ವಿವರಗಳನ್ನು ಸಲ್ಲಿಸುವಂತೆ ಸಿಇಓ ತಿಳಿಸಿದರು.

ಸಭೆಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಧಾರವಾಡ ವಿಭಾಗದ ಮುಖ್ಯ ಇಂಜಿನಿಯರ್ ರೇಣುಕಾರಾಧ್ಯ ಸೊಪ್ಪಿನಮಠ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಅಲ್ಲಾ ಭಕಷ್, ಮುಖ್ಯ ಲೆಕ್ಕಾಧಿಕಾರಿ ಆನಂದ್ ಸಾ ಹಬೀಬ್ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಎಲ್ಲಾ ತಾಲೂಕುಗಳ ಇಂಜಿನಿಯರ್‌ಗಳು ಉಪಸ್ಥಿತರಿದ್ದರು.

# 2 ದಿನಗಳ ಸಿಇಟಿ, ಟಿಇಟಿ ತರಬೇತಿ ಕಾರ್ಯಾಗಾರ



**ರಾಮದುರ್ಗ:** ಯಾವುದೇ ಸರಕಾರಿ ನೌಕರಿ ಆಯ್ಕೆಗೆ ಪರೀಕ್ಷೆಗಳ ಮೂಲಕ ಪ್ರತಿಭಾನ್ವೇಷನೆ ನಡೆಯುತ್ತಿದೆ. ವೃತ್ತಿ ಆಯ್ಕೆಯಲ್ಲಿ ಎದುರಾಗುವ ಸವಾಲುಗಳನ್ನು ಅಧ್ಯಯನ ಮಾಡಿ, ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಆಯ್ಕೆಯಾಗುವ ಜ್ಞಾನ ಪಡೆದುಕೊಂಡಲ್ಲಿ ಮಾತ್ರ ಸರಕಾರಿ ನೌಕರಿ ಗಟ್ಟಿಸಿಕೊಳ್ಳಬಹುದು ಎಂದು ಪ್ರಾದೇಶಿಕ ಶಿಕ್ಷಣ ಸಂಸ್ಥೆಯ ಸಹ ಪ್ರಾಧ್ಯಾಪಕ ಡಾ. ಪ್ರಕಾಶ ಬಡಿಗೇರ ಹೇಳಿದರು.

ಪಟ್ಟಣದ ವಿದ್ಯಾ ಪ್ರಸಾರಕ ಸಮಿತಿಯ ಶಿಕ್ಷಣ ಮಹಾವಿದ್ಯಾಲಯದಲ್ಲಿ ಏರ್ಪಡಿಸಿದ 2 ದಿನಗಳ ಸಿ.ಇ.ಟಿ ಹಾಗೂ ಟಿ.ಇ.ಟಿ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಸರಕಾರ ನಡೆಸುವ ಪ್ರತಿ ಹಂತದ ಪರೀಕ್ಷಾ ಪದ್ಧತಿಯಲ್ಲಿ ಬದಲಾವಣೆ ತರುತ್ತಿದೆ. ಏನೇ ಬದಲಾವಣೆ ತಂದರೂ ವಿಷಯದಲ್ಲಿ ಬದಲಾವಣೆ ಸಾಧ್ಯವಿಲ್ಲ. ವಿಷಯದ ಆಳವನ್ನು ಅರಿತುಕೊಂಡಲ್ಲಿ ಮಾತ್ರ ಸಮರ್ಪಕ ಉತ್ತರಿಸುವ ಸಾಮರ್ಥ್ಯ ಸಾಧ್ಯವಿದೆ ಎಂದು ತಿಳಿಸಿದರು.

ಶಿಕ್ಷಣ ಮಹಾವಿದ್ಯಾಲಯದ ಸಂಯೋಜಕ ಪ್ರೊ. ಎಸ್. ಲೇಪಾಕ್ಷಿ ಅಧ್ಯಕ್ಷತೆ ವಹಸಿ ಮಾತನಾಡಿ, ಪ್ರಶಿಕ್ಷಣಾರ್ಥಿಗಳು ತರಬೇತಿ ಅವಧಿಯಲ್ಲಿಯೇ ಭವಿಷ್ಯ ರೂಪಿಸಿಕೊಳ್ಳಬಲ್ಲ ಕೌಶಲ್ಯಗಳು ದೊರೆಯುತ್ತದೆ. ಶ್ರಮಪಟ್ಟು ಕೌಶಲ್ಯಗಳನ್ನು ಕರಗತ ಮಾಡಿಕೊಳ್ಳಬೇಕೆಂದು ಹೇಳಿದರು.

ಸಂಪನ್ಮೂಲ ವ್ಯಕ್ತಿಗಳಾದ ರಮೇಶ ಆಗೋಜಿ, ದಾವಲಸಾಬ ವಾಲೀಕಾರ ಸಿ.ಇ.ಟಿ ಮತ್ತು ಟಿ.ಇ.ಟಿ ಬಗ್ಗೆ ಮಾರ್ಗದರ್ಶನ ನೀಡಿದರು.

ಜಿಮಖಾನಾ ಉಪಾಧ್ಯಕ್ಷ ಡಾ. ವಿ.ಬಿ. ವಗ್ಗರ, ಉಪನ್ಯಾಸಕರಾದ ಎಸ್.ಎಂ. ನಾಯಕ, ಎಂ.ಆರ್. ಕುಂಬಾರ, ಡಾ. ಎನ್.ಎನ್. ವಾಳ್ವೇಕರ, ಪ್ರೊ ಜಿ.ಪಿ. ಗಡದೆ, ಪ್ರೊ. ಜಿ.ಬಿ. ಬಟಕುರ್ಕಿ, ಎಮ್. ಎಚ್. ರಾಠೋಡ, ಎಸ್.ಆರ್ ಗೊಲನ್ನವರ, ದೈಹಿಕ ಶಿಕ್ಷಣ ನಿರ್ದೇಶಕ ಆನಂದ ಲಮಾಣಿ ಉಪಸ್ಥಿತರಿದ್ದರು. ಪ್ರಾಚಾರ್ಯ ಡಾ.ಆರ್.ಎಲ್. ಕುಳ್ಳೂರ ಸ್ವಾಗತಿಸಿದರು. ಮಂಜುಳಾ ಪಾಟೀಲ ನಿರೂಪಿಸಿದರು. ಲಕ್ಷ್ಮೀ ಚಂದರಗಿ ವಂದಿಸಿದರು.

## ಪರಿಸರ ಸ್ನೇಹಿ ದೀಪಾವಳಿ ಆಚರಣೆಗೆ ಮನವಿ

**ಬಾಗಲಕೋಟೆ:** ದೀಪಾವಳಿ ಹಬ್ಬದ ಸಂದರ್ಭದಲ್ಲಿ ಉಂಟಾಗುವ ವಾಯು ಮಾಲಿನ್ಯ, ಶಬ್ದ ಮಾಲಿನ್ಯವನ್ನು ನಿಯಂತ್ರಿಸಲು ಕೆಲವು ಸೂಚನೆಗಳನ್ನು ಪಾಲಿಸಿ ಪರಿಸರ ಸ್ನೇಹಿಯಾಗಿ ಆಚರಿಸಲು ಕೋರಲಾಗಿದೆ. ಸರ್ವೋಚ್ಚ ನ್ಯಾಯಾಲಯದ ಆದೇಶ ಹಾಗೂ ಹಸಿರು ಪಟಾಕಿ ಕುರಿತು ವಿವರಗಳು ಮಂಡಳಿಯ ವೆಬ್‌ಸೈಟ್‌ನಲ್ಲಿ (http://kspcb.gov.in) ಲಭ್ಯವಿದ್ದು, ಸದರಿ ಆದೇಶದಲ್ಲಿ ರಾತ್ರಿ 8 ಗಂಟೆಯಿಂದ 10 ಗಂಟೆಯವರೆಗೆ ಪಟಾಕಿ ಸಿಡಿಸಲು ಅವಕಾಶ ನೀಡಿದೆ. ಇದಲ್ಲದೇ ಹಸಿರು ಪಟಾಕಿಗಳನ್ನು ಬಿಟ್ಟು ಯಾವುದೇ ಯಾವುದೇ ಇತರೇ ಪಟಾಕಿ ಮಾರಾಟ ಹಾಗೂ ಬಳಕೆಯನ್ನು, 125 ಡೆಸಿಬಲ್‌ಗೂ (ಶಬ್ದದ ಪ್ರಮಾಣ) ಮೇಲ್ಪಟ್ಟ ಪಟಾಕಿಗಳ ಸಿಡಿತವನ್ನು, ಪಟಾಕಿ ಮಳಿಗೆಗಳನ್ನು ವಾಸಸ್ಥಳದಲ್ಲಾಗಲೀ ಅಥವಾ ವಾಣಿಜ್ಯ ಪ್ರದೇಶದಲ್ಲಾಗಲೀ ಕಿರಿದಾದ ಸ್ಥಳಗಳಲ್ಲಿ ತೆರೆಯುವುದನ್ನು ನಿಷೇಧಿಸಿರುತ್ತದೆ.

ಆಸ್ಪತ್ರೆಗಳು-ವೃದ್ಧಾಶ್ರಮಗಳ ಹತ್ತಿರ ಪಟಾಕಿ ಹಚ್ಚದಂತೆ, ಗಿಡ-ಮರಗಳು ಮತ್ತು ಪ್ರಾಣಿ ಪಕ್ಷಿಗಳಿಗೆ ಯಾವುದೇ ಹಾನಿಯಾಗದಂತೆ ಎಚ್ಚರವಹಿಸಬೇಕು. ಪಟಾಕಿಗಳು ಹೊರಸೂಸುವ ಅನಿಲವು ಆರೋಗ್ಯ ಸಂಬಂಧಿತ ಕಾಯಿಲೆಗಳು, ಪರಿಸರ ಮಾಲಿನ್ಯ, ಪಟಾಕಿಗಳ ಸಿಡಿತದ ನಂತರ ಉತ್ಪತ್ತಿಯಾಗುವ ಘನ ತ್ಯಾಜ್ಯಗಳ ಹೆಚ್ಚಳದಿಂದ ನಗರದ ಶುಚಿತ್ವದ ಸಮಸ್ಯೆ ಉಲ್ಬಣವಾಗುವುದರಿಂದ ಪಟಾಕಿಗಳ ಸಿಡಿತವನ್ನು ಕಡಿಮೆಗೊಳಿಸುವಂತೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪರಿಸರ ಅಧಿಕಾರಿಗಳು ಪ್ರಕಟಣೆ ಮೂಲಕ ಸಾರ್ವಜನಿಕರಲ್ಲಿ ಕೋರಿದ್ದಾರೆ.

## ಪೊಲೀಸ್ ಹುತಾತ್ಮರ ದಿನಾಚರಣೆ

**ವಿಜಯಪುರ:** ಅ. 21 ರಂದು ಬೆಳಿಗ್ಗೆ 8 ಗಂಟೆಗೆ ವಿಜಯಪುರ ಜಿಲ್ಲಾ ಪೊಲೀಸ್ ವತಿಯಿಂದ ಪೊಲೀಸ್ ಹುತಾತ್ಮರ ದಿನಾಚರಣೆಯನ್ನು ವಿಜಯಪುರ ಜಿಲ್ಲಾ ಪೊಲೀಸ್ ಕವಾಯತ ಮೈದಾನದಲ್ಲಿ ಆಚರಿಸಲಾಗುವುದು.ಈ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಗೌರವಾನ್ವಿತ ಹರೀಶ ಎ.ಅವರು ಆಗಮಿಸುವರು. ಜಿಲ್ಲಾಧಿಕಾರಿಗಳಾದ ಡಾ.ಆನಂದ.ಕೆ, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಿಷಿ ಆನಂದ ಅವರು ವಿಶೇಷ ಅತಿಥಿಗಳಾಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಲಕ್ಷ್ಮಣ ನಿಂಬರಗಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ರಾಮನಗೌಡ ಹಟ್ಟಿ ಉಪಸ್ಥಿತರಿರುವರು.

# ಗ್ರಾಮವೆಲ್ಲಾ ಪಗಡೆಮಯ: ರಾಜ್ಯ ಮಟ್ಟದ ಪಗಡಿಯಾಟ

ವರದಿ: ಮಲ್ಲಿಕಾರ್ಜುನ ತುಂಗಳ

**ರಬಕವಿ-ಬನಹಟ್ಟಿ:** ಬಾಗಲಕೋಟೆ ಜಿಲ್ಲೆಯ ರಬಕವಿ-ಬನಹಟ್ಟಿ ತಾಲೂಕಿನ ಜಗದಾಳ ಗ್ರಾಮದಲ್ಲಿ ಬ್ರಹ್ಮದೇವರ ಜಾತ್ರೆ ನಿಮಿತ್ಯ ಮಂಗಳವಾರ ಅಂತರಾಜ್ಯಮಟ್ಟದ ಹಗಲು ರಾತ್ರಿ ಪಗಡೆ ಪಂದ್ಯಾವಳಿಗಳು ನಡೆದು ಇಡೀ ಗ್ರಾಮವೇ ಪಗಡೆಮಯವಾಗಿ ಪರಿವರ್ತನೆಗೊಂಡು ಪಗಡೆ ಪಂದ್ಯಗಳು ಸಾವಿರಾರು ಜನರನ್ನು ಆಕರ್ಷಿಸುವಲ್ಲಿ ಕಾರಣವಾಯಿತು.

ಪಗಡೆ ಎಂದ ಕೂಡಲೇ ನೆನಪಾಗುವುದು ಮಹಾಭಾರತದಲ್ಲಿ ಶಕುನಿ ಹಾಗೂ ಪಾಂಡವರ ಪಾತ್ರಗಳು ನಮ್ಮ ಕಣ್ಣ ಮುಂದೆ ಬರುತ್ತವೆ. ಪಗಡೆಯಾಟದಿಂದ ತಮ್ಮ ಇಡೀ ಸರ್ವಸ್ವವನ್ನು ಕಳೆದುಕೊಳ್ಳುವ ಕಥೆ ಎಲ್ಲರ ಕಣ್ಮುಂದೆ ಇದೆ. ಆದರೆ ಸಮೀಪದ ಜಾನಪದರ ಗ್ರಾಮ ಜಗದಾಳ ಗ್ರಾಮದಲ್ಲಿ ಪ್ರತಿ ವರ್ಷ ಬ್ರಹ್ಮದೇವರ ಹಬ್ಬದ ನಿಮಿತ್ಯ ರಾಜ್ಯ ಮಟ್ಟದ ಹೊನಲು ಬೆಳಕಿನ ಮುಕ್ತ ಪಗಡೆ ಸ್ಪರ್ಧೆಯನ್ನು ಏಪಡಿಸುವುದರ ಜೊತೆಗೆ ಅದರಲ್ಲಿ ಜಯಶಾಲಿಯಾದವರಿಗೆ ಬಹುಮಾನ ಕೂಡಾ ಕೊಡುವ ವಾಡಿಕೆ ಇದೆ.

ಕಳೆದ 35 ವರ್ಷಗಳಿಂದ ಪಗಡೆ ಆಟದ ಸ್ಪರ್ಧೆಯನ್ನು ಗ್ರಾಮದ ಹಿರಿಯರು ನಡೆಸಿಕೊಂಡು ಬಂದಿದ್ದು, ಅದು ಇಂದಿಗೂ ಮುಂದುವರೆದಿದೆ. ಇಂದು ನಡೆದ ಸ್ಪರ್ಧೆಯಲ್ಲಿ ಬಾಗಲಕೋಟ, ಬಿಜಾಪೂರ, ಗದಗ, ಬೆಳಗಾಂವ ಹಾಗೂ ಮಹಾರಾಷ್ಟ್ರ



ರಾಜ್ಯದ ಸಾಂಗಲಿ, ಕೊಲ್ಲಾಪೂರ ಜಿಲ್ಲೆಗಳಿಂದ ನೂರಕ್ಕೂ ತಂಡಗಳು ಆಗಮಿಸಿದ್ದವು.

ಪ್ರಥಮ ಬಹುಮಾನ ಬೈಕ್, ದ್ವಿತೀಯ ಬಹುಮಾನ ರೂ. 30,001, ತೃತೀಯ ಬಹುಮಾನ್ ರೂ. 20,001, ಚತುರ್ಥ ಬಹುಮಾನ್ ರೂ. 10,001 ಸೇರಿದಂತೆ 8 ಬಹುಮಾನಗಳನ್ನು ವಿಜೇತರಿಗೆ ನೀಡಲಾಯಿತು.

ಭಾರಿ ಕೂತುಹಲ ಮೂಡಿಸಿದ್ದ ಪ್ರತಿ ಪಂದ್ಯಗಳು ನೋಡುಗರ ಕಣ್ಮಣ ಸೆಳೆದವು. ಗ್ರಾಮೀಣ ಕ್ರೀಡೆಯಾಗಿರುವ ಪಗಡೆ ಈಗಲೂ ಕೂಡಾ ಇಂತಹ ಹಳ್ಳಿಗಳಲ್ಲಿ ತನ್ನದೇ ಆದ ಅಸ್ಥಿತ್ವವನ್ನು ಉಳಿಸಿಕೊಂಡು ಹೊರಟಿದ್ದು ಅದಕ್ಕೆ ಜಗದಾಳ ಗ್ರಾಮದ ಬ್ರಹ್ಮದೇವರ ಹಬ್ಬದ ಜಾತ್ರಾ ಕಮೀಟಿ ಕೂಡಾ ಟೊಂಕಕಟ್ಟಿ ನಿಂತಿದೆ.

'ಗ್ರಾಮವೆಲ್ಲಾ ಪಗಡೆಮಯ'-ಪಗಡೆಯಾಟಕ್ಕೆ ಒಂದು ತಂಡದಲ್ಲಿ 6 ಜನ ಆಟಗಾರರಿರುತ್ತಾರೆ.

> 'ಇಂದಿನ ದಿನಗಳಲ್ಲಿ ನಮ್ಮಿಂದ ದೂರವಾಗುತ್ತಿರುವ ದೇಸಿ ಕ್ರೀಡೆಗಳನ್ನು ಪ್ರತಿಯೊಬ್ಬರು ಪ್ರೋತ್ಸಾಹಿಸಬೇಕು. ನಮ್ಮ ಮುಂದಿನ ಪೀಳಿಗೆಗೆ ದೇಸಿ ಕ್ರೀಡೆಗಳನ್ನು ಪರಿಚಯಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ'.
>
> **ಶೇಖರ ನೀಲಕಂಠ,**
> **ಸಮಾಜ ಸೇವಕ, ಜಗದಾಳ.**

ಒಂದು ಆಟವಾಡಲು ಕನಿಷ್ಠ 3 ಗಂಟೆಯಿಂದ 5 ಗಂಟೆವರೆಗೆ ಸಮಯವಾದರೂ ಬೇಕು. ಹೀಗಾಗಿ ಇಡೀ ಜಗದಾಳ ಗ್ರಾಮದ ತುಂಬೆಲ್ಲಾ ಹಾಕಿದ್ದ ಶಾಮಿಯಾನದಲ್ಲಿ ಪಗಡೆ ಸ್ಪರ್ಧಾಳುಗಳೇ ಕಾಣಸಿಗುತ್ತಾ ಇಡೀ ಗ್ರಾಮವೆಲ್ಲಾ ಪಗಡೆಮಯವಾಗಿ ಕಾಣುತ್ತಿತ್ತು. ಶುಕ್ರವಾರ ರಾತ್ರಿ ಪ್ರಾರಂಭಗೊಂಡ ಪಗಡೆಯಾಟಗಳು ಸೋಮವಾರ ಇಡೀ ದಿನ ಪಗಡೆಯಾಟದಲ್ಲಿಯೇ ಗ್ರಾಮ ತಲ್ಲೀಣವಾಗಿದ್ದು ವಿಶೇಷವಾಗಿತ್ತು.

ಗ್ರಾಮೀಣ ಸೊಗಡು ಎದ್ದು ಕಾಣುತ್ತಿತ್ತು-ಪಗಡೆಯಾಟವೆಂಬುದು ಸಧ್ಯದ ಮಟ್ಟಿಗೆ ಗ್ರಾಮಗಳಿಗೆ ಮಾತ್ರ ಸೀಮಿತವಾಗಿವೆ. ಆಟವಾಡುವಾಗ ಆಗಾಗ ಚಹಾ ಸೇವನೆಯೊಂದಿಗೆ, ಎಲೆ ಅಡಿಕೆ ಜಗಿಯುವದು ಕೆಲ ಆಟಗಾರರ ಆಟದ ಒತ್ತಡವನ್ನು ಕಡಿಮೆಗೊಳಿಸುವಲ್ಲಿ ಕಾರಣವಾಯಿತು.

## ಶಾಲಾ ಸಂಸತ್ತಿನ ಪದಗ್ರಹಣ ಸಮಾರಂಭ



**ಬೆಳಗಾವಿ:** ನಮ್ಮಲ್ಲಿನ ಶಿಸ್ತು ನಮ್ಮ ಕರ್ತವ್ಯ ನಿಷ್ಠೆಯನ್ನು ತೋರಿಸುತ್ತದೆ. ವಿದ್ಯಾರ್ಥಿಗಳು ದೃಢ ಸಂಕಲ್ಪದೊಂದಿಗೆ ಸತತ ಪರಿಶ್ರಮ ವಹಿಸಿದರೆ ನಿಶ್ಚಿತ ಗುರಿ ತಲುಪಲು ಸಾಧ್ಯ. ವಿದ್ಯಾರ್ಥಿಗಳು ಆಧುನಿಕ ತಂತ್ರಜ್ಞಾನದಿಂದ ವಿಚಲಿತರಾಗದೇ ದೃಢ ನಿಶ್ಚಯ, ಕಠಿಣ ಪರಿಶ್ರಮ ವಹಿಸಬೇಕು ಇವು ಯಶಸ್ಸಿನ ಶಿಖರವೇರಲು ಪ್ರೇರೇಪಿಸುತ್ತವೆ ಎಂದು ಉಪ ಪೊಲೀಸ್ ಆಯುಕ್ತ ನಾರಾಯಣ ಭರಮಣಿ ಅಭಿಪ್ರಾಯಪಟ್ಟರು. ಅವರು ಇಂದು ಇಲ್ಲಿನ ಶಿವಬಸವ ನಗರದ ಸಿದ್ಧರಾಮೇಶ್ವರ ಆಂಗ್ಲ ಮಾಧ್ಯಮ ಶಾಲೆಯ ಶಾಲಾ ಸಂಸತ್ತಿನ ಪದಗ್ರಹಣ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಸಮಾರಂಭದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ನಾಗನೂರು ರುದ್ರಾಕ್ಷಿಮಠ ಡಾ. ಅಲ್ಲಮಪ್ರಭು ಮಹಾಸ್ವಾಮಿಗಳು ಮಾತನಾಡಿ ವಿದ್ಯಾರ್ಥಿಗಳು ಬಾಲ್ಯದಲ್ಲಿ ನಾಯಕತ್ವ ಗುಣಗಳನ್ನು ಅಳವಡಿಸಿಕೊಂಡು ನಿಸ್ವಾರ್ಥ ಮನೋಭಾವದಿಂದ ಸೇವಾ ಕಾರ್ಯಗಳಲ್ಲಿ ತೊಡಗಿಸಿಕೊಂಡರೆ ಭವಿಷ್ಯದಲ್ಲಿ ದೇಶದ ಆಸ್ತಿಯಾಗಿ ರೂಪಗೊಳ್ಳುತ್ತಾರೆ. ನಾಯಕತ್ವ ಎನ್ನುವುದು ಮುಂಚೂಣಿ ಸೇವೆಗಾಗಿ ಇರಬೇಕೆ ಹೊರತು ಅಧಿಕಾರ ಅನುಭವಿಸಲಿಕ್ಕೆ ಅಲ್ಲ. ಪ್ರಚಾರ ಪ್ರತಿಷ್ಠೆಯ ಬೆನ್ನು ಹತ್ತದೇ ದೊರೆತ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಲು ಪ್ರಯತ್ನಿಸಬೇಕು ಎಂದರು.

ಸಿದ್ದರಾಮೇಶ್ವರ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಎಸ್.ಪಿ. ಹಿರೇಮಠ ಸಭೆಯ ಅಧ್ಯಕ್ಷತೆ ವಹಿಸಿದ್ದರು. ವೇದಿಕೆ ಮೇಲೆ ಪದವಿ ಕಾಲೇಜಿನ ಪ್ರಾಚಾರ್ಯ ಸಿದ್ದರಾಮ ರೆಡ್ಡಿ ಪ್ರೌಢಶಾಲೆಯ ಸಂಯೋಜಕ ರಾಜಶೇಖರ ಪಾಟೀಲ ಉಪಸ್ಥಿತರಿದ್ದರು.

# ಭವ್ಯ ಕ್ರೀಡಾ ಸ್ಪರ್ಧೆಗಳ ಉದ್ಘಾಟನೆ



**ಖಾನಾಪುರ:** ಖಾನಾಪುರ ತಾಲೂಕಿನ ತೋಪಿನಕಟ್ಟಿಯಲ್ಲಿ ದೀಪಾವಳಿಯ ಪ್ರಯುಕ್ತ ಶ್ರೀ ಮಹಾಲಕ್ಷ್ಮೀ ಪ್ರೌಢಶಾಲಾ ಮಾಜಿ ವಿದ್ಯಾರ್ಥಿಗಳ ವತಿಯಿಂದ ಆಯೋಜಿಸಲಾಗಿದ್ದ ಭವ್ಯ ಖೋ-ಖೋ ಮತ್ತು ಕಬಡ್ಡಿ ಸ್ಪರ್ಧೆಯನ್ನು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಉದ್ಘಾಟಿಸಿದರು.

ದೈಹಿಕ ಚಟುವಟಿಕೆಗಳ ಕಡೆಗೆ ಯುವಕರನ್ನು ಆಕರ್ಷಿಸುವ ಉದ್ದೇಶದಿಂದ ಕ್ರೀಡಾ ಚಟುವಟಿಕೆಗಳನ್ನು ಆಯೋಜಿಸಿರುವುದು ಶ್ಲಾಘನೀಯವಾಗಿದೆ. ಮಾನಸಿಕ ಮತ್ತು ದೈಹಿಕ ಆರೋಗ್ಯ ಕಾಪಾಡಲು ಕ್ರೀಡೆ ಮಹತ್ವದ ಪಾತ್ರ ವಹಿಸಲಿದೆ ಎಂದು ಚನ್ನರಾಜ ಹೇಳಿದರು.


ಇದೇ ಸಂದರ್ಭದಲ್ಲಿ, ಎಂ.ಕೆ.ಹುಬ್ಬಳ್ಳಿ ಮಲಪ್ರಭಾ ಸಹಕಾರಿ ಸಕ್ಕರೆಯ ಕಾರ್ಖಾನೆಯ ನೂತನ ಆಡಳಿಯ ಮಂಡಳಿಯ ನಿರ್ದೇಶಕರುಗಳನ್ನು ಸನ್ಮಾನಿಸಲಾಯಿತು. ಶಾಸಕ ವಿಠ್ಠಲ ಹಲಗೇಕರ್ ಹಾಗೂ ಸ್ಥಳೀಯ ಮುಖಂಡಜರು ಉಪಸ್ಥಿತಿತರಿದ್ದರು.

ಗಾರ್ಡನ್ ಜಾಗದಲ್ಲಿ ಮರಳು-ಕಟ್ಟಿಗೆ ಸಂಗ್ರಹ: ವಿಷ ಜಂತುಗಳ ಹಾವಳಿ

# ಗಾರ್ಡನ್ ಸ್ವಚ್ಛಗೊಳಿಸಲು ನಾಗರಿಕರ ಒತ್ತಾಯ

**ತಾಳಿಕೋಟೆ:** ಪಟ್ಟಣದ ಟಿಪ್ಪು ನಗರ ಬಡಾವಣೆಯ ವಾರ್ಡ ನಂ.6 ಕ್ಕೆ ಸಂಬಂಧಿಸಿ ಓಂ ಶಾಂತಿ ಇವರ ಮನೆಯ ಮುಂದಿನ ಪುರಸಭೆ ಗಾರ್ಡನ್ ಜಾಗೆಯಲ್ಲಿ ಅಕ್ರಮವಾಗಿ ಮರಳು, ಕಟ್ಟಿಗೆ, ಟ್ರ್ಯಾಕ್ಟರ್ ಸಾಮಾನುಗಳನ್ನು ಒಳಗೊಂಡು ಇನ್ನಿತರ ನಿರುಪಯುಕ್ತ ವಸ್ತುಗಳನ್ನು ಇಟ್ಟು ಸಂಪೂರ್ಣ ಗಲೀಜುಗೊಳಿಸಿದ್ದರಿಂದ ಆ ಸ್ಥಳದಲ್ಲಿ ವಿಷ ಜಂತುಗಳು ಕಾಣಿಸಿಕೊಳ್ಳುತ್ತಿದ್ದು ಕೂಡಲೇ ಗಾರ್ಡನ್ ಜಾಗೆಯನ್ನು ಸ್ವಚ್ಛಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿಕೊಡಬೇಕೆಂದು ವಾರ್ಡಿನ ನಾಗರಿಕರು ಪುರಸಭೆ ಮುಖ್ಯಾಧಿಕಾರಿಗೆ ಶನಿವಾರರಂದು ಮನವಿ ಸಲ್ಲಿಸಿ ಒತ್ತಾಯಿಸಿದ್ದಾರೆ.

ಪಟ್ಟಣದ ಸೌಂದರ್ಯಕರಣದ ದೃಷ್ಟಿಯಿಂದ ಹಾಗೂ ವಾಯುವಿಹಾರಿಗಳ ಅನುಕೂಲಕ್ಕಾಗಿ ಪುರಸಭೆ ವತಿಯಿಂದ ಗಾರ್ಡನ್ ಜಾಗೆಗಳನ್ನು ಮಿಸಲಿಡಲಾಗಿದೆ ಆದರೆ ಸದರಿ ಗಾರ್ಡನ್ ಜಾಗೆಗಳು ಸಾರ್ವಜನಿಕರಿಗೆ ಸದುಪಯೋಗವಾಗುತ್ತಿಲ್ಲಾವೆಂದು ಮನವಿ ಪತ್ರದಲ್ಲಿ ತಿಳಿಸಿದ್ದಾರಲ್ಲದೇ ಪುರಸಭೆಯ ವಾರ್ಡ ನಂ. 6 ಕ್ಕೆ ಸಂಬಂದಿಸಿ ಇವರುವ ಗಾರ್ಡನ್ ಜಾಗೆಯಲ್ಲಿ ಇಲ್ಲ ಸಲ್ಲದ




ನಿರೂಪಯುಕ್ತ ವಸ್ತುಗಳನ್ನು ಕೆಲವರು ಎಸೆದಿದ್ದಾರಲ್ಲದೇ ಇನ್ನೂ ಕೆಲವರು ತಮ್ಮ ಸ್ವಂತ ಮಾಲಿಕಿ ಜಾಗೆಯಂತೆ ಮರಳು-ಕಟ್ಟಿಗೆ ಅಲ್ಲದೇ ಟ್ರ್ಯಾಕ್ಟರ್ ಸಾಮಾನುಗಳನ್ನು ಇಡುವದರೊಂದಿಗೆ ಗಾರ್ಡನ್ ಜಾಗೆಯ ಅವ್ಯವಸ್ಥೆಗೆ ಕಾರಣವಾಗಿದ್ದು ಇದರಿಂದ ಹಗಲು ಹೊತ್ತು ಸದರಿ ಜಾಗೆಯಲ್ಲಿ ಮಕ್ಕಳು ಆಟವಾಡುವಾಗ ವಿಷ ಜಂತುಗಳು ಕಾಣಿಸಿಕೊಳ್ಳುತ್ತಾ ಸಾಗಿದ್ದರಿಂದ ಸುತ್ತಮುತ್ತಲಿನ ಪಾಲಕರಲ್ಲಿ ಭಯ ಹುಟ್ಟಿಸುವಂತೆ ಮಾಡಿದೆ ಈ ಬಡಾವಣೆಯಲ್ಲಿ ಸಾಕಷ್ಟು ಮನೆಗಳು ನಿರ್ಮಾಣವಾಗಿದ್ದು ರಾತ್ರಿ ಹೊತ್ತು ತಿರುಗಾಡಲು ವಿಷ ಜಂತುಗಳಿಂದ ಆತಂಕಗೊಂಡಿದ್ದಾರೆ ಕೂಡಲೇ ಸದರಿ ಗಾರ್ಡನ್ ಜಾಗೆಯನ್ನು ಸ್ವಚ್ಚಗೊಳಿಸುವದರೊಂದಿಗೆ ಸದರಿ ಸ್ಥಳದಲ್ಲಿ ಪುರಸಭೆ ಅಧಿಕಾರಿಗಳು ಪರಿಸರ ಸ್ನೇಹಿಯಾದ ಗಿಡಮರಗಳನ್ನು ನೆಡುವದರೊಂದಿಗೆ ಈ ಬಡಾವಣೆಯ ಜನರ ವಾಯು ವಿಹಾರಿಗಳ ಅನುಕೂಲಕ್ಕಾಗಿ ಖುರ್ಚಿ ಇನ್ನಿತರಗಳನ್ನು ಹಾಕಿ ಬಡಾವಣೆಯ ಸ್ವಚ್ಚತೆಗೆ ಮುಂದಾಗಬೇಕೆಂದು ಸಲ್ಲಿಸಿದ ಮನವಿ ಪತ್ರದಲ್ಲಿ ಒತ್ತಾಯಿಸಿದ್ದಾರೆ. ಮನವಿ ಪತ್ರವನ್ನು ಪುರಸಭೆಯ ಕಂದಾಯ ನಿರೀಕ್ಷಕ ಸುರೇಶ ಅಂಬ್ರಣ್ಣವರ, ಆರೋಗ್ಯ ನಿರಿಕ್ಷಕ ಶಿವಾನಂದ ಜುಮನಾಳ ಅವರಿಗೆ ಬಡಾವಣೆಯ ನಾಗರಿಕರು ಸಲ್ಲಿಸಿದರು.

ಈ ಸಮಯದಲ್ಲಿ ಪುರಸಭೆ ಮಾಜಿ ಸದಸ್ಯ ಇಬ್ರಾಹಿಂ ಮನ್ಸೂರ, ಬಡಾವಣೆಯ ಮುಖಂಡರುಗಳಾದ ಮುರ್ತುಜಾ ಜಮಾದಾರ, ಮುರ್ತುಜಾಸಾಬ ನಮಾಜಕಟ್ಟಿ, ಶಿವಾನಂದ ಪಾಟೀಲ, ಅಮೀನಸಾಬ ಚೌದ್ರಿ, ರೀಯಾಜ ಮುಲ್ಲಾ, ಸಕೀನಾಬಿ ಲಾಹೋರಿ, ಇಕ್ಬಾಲ್ ಆಗ್ರಾ, ಅಬ್ದುಲ್‌ರಹಿಮಾನ ನಂದವಾಡಗಿ, ಇಮ್ರಾನ್ ನಮಾಜಕಟ್ಟಿ, ಆಶ್ರಫ ಜಮಾದಾರ, ಅಕ್ಬರ ಮುಲ್ಲಾ, ಆಲಸಮದ ಬಶಟ್ಯಾಳ, ಶಾಹನವಾಜ ದಖನಿ ಮೊದಲಾದವರು ಇದ್ದರು.

ಪೂರ್ವಭಾವಿ ಸಭೆ: ಮೆರವಣಿಗೆಯಲ್ಲಿ ವಿವಿಧ ಸ್ಥಬ್ದ ಚಿತ್ರಗಳ ಪ್ರದರ್ಶನ

# ಕನ್ನಡ ರಾಜ್ಯೋತ್ಸವ ಅರ್ಥಪೂರ್ಣ ಆಚರಣೆಗೆ ನಿರ್ಧಾರ

**ಬಾಗಲಕೋಟೆ:** ಜಿಲ್ಲೆಯಾದ್ಯಂತ ನವೆಂಬರ 1 ರಂದು ಆಚರಿಸಲ್ಪಡುವ ಕನ್ನಡ ರಾಜ್ಯೋತ್ಸವವನ್ನು ಸಂಭ್ರಮ, ಸಡಗರದಿಂದ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಜಿಲ್ಲಾಡಳಿತ ನಿರ್ಧರಿಸಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಶನಿವಾರ ಕನ್ನಡ ರಾಜ್ಯೋತ್ಸವ ಆಚರಣೆ ಕುರಿತು ಜರುಗಿದ ಪೂರ್ವ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಅಂದು ಬೆಳಿಗ್ಗೆ 7.30ಕ್ಕೆ ಜಿಲ್ಲಾಡಳಿತ ಭವನದ ಮುಂದೆ ಇರುವ ಅಶೋಕ ಸ್ಥಂಬದ ವೃತ್ತದಿಂದ ಭುವನೇಶ್ವರಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಜಿಲ್ಲಾ ಉಸ್ತುವಾರಿ ಸಚಿವರು ಮೆರವಣಿಗೆಗೆ ಚಾಲನೆ ನೀಡಲಿದ್ದಾರೆ. ನಂತರ ಜಿಲ್ಲಾ ಕ್ರೀಡಾಂಗಣದಲ್ಲಿ 9 ಗಂಟೆಗೆ ಧ್ವಜಾರೋಹಣ ಕಾರ್ಯಕ್ರಮ ನೆರವೇರಲಿದೆ ಎಂದು ತಿಳಿಸಿದರು.

ಮೆರವಣಿಗೆಯಲ್ಲಿ ನಾಡಿನ ಸಾಹಿತ್ಯ, ಇತಿಹಾಸ, ಸಂಸ್ಕೃತಿ, ಚಾಲುಕ್ಯರ ಪರಂಪರೆ ಹಾಗೂ ಕರ್ನಾಟಕ ವೈಭವ ಬಿಂಬಿಸುವಂತ ಸ್ಥಬ್ದ ಚಿತ್ರ ಹಾಗೂ ವಿವಿಧ ಸಾಂಸ್ಕೃತಿಕ ಕಲಾ ತಂಡಗಳನ್ನು ಆಹ್ವಾನಿಸುವಂತೆ ಸಂಬಂಧಿಸಿದ ಇಲಾಖೆಗಳಿಗೆ ತಿಳಿಸಲಾಯಿತು. ಕಾರ್ಯಕ್ರಮ ಸಿದ್ದತೆಗೆ ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು, ಸಮಿತಿಯ



ಸದಸ್ಯರ ಕರ್ತವ್ಯಗಳ ಬಗ್ಗೆ ಸಭೆ ಕರೆದು ಕಾರ್ಯಕ್ರಮದ ರೂಪು ರೇಷೆಗಳನ್ನು ತಯಾರಿಸಿ, ಜಿಲ್ಲಾಧಿಕಾರಿಗಳ ಕಚೇರಿಗೆ ಸಲ್ಲಿಸಲು ತಿಳಿಸಿದರು. ಕಾರ್ಯಕ್ರಮದಲ್ಲಿ ರಾಷ್ಟ್ರ ಗೀತೆ, ನಾಡಗೀತೆ ಹಾಗೂ ಕುವೆಂಪು ವಿರಚಿತ ನೇಗಿಲಯೋಗಿ ಗೀತೆಯನ್ನು ಹಾಡಿಸುವ ವ್ಯವಸ್ಥೆಯನ್ನು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಲಾಯಿತು. ಜಿಲ್ಲಾ ಕ್ರೀಡಾಂಗಣ ಹಾಗೂ ಮೆರವಣಿಗೆ ಸ್ಥಳಗಳನ್ನು ಸ್ವಚ್ಛವಾಗಿಡಬೇಕು. ಶುದ್ದ ಕುಡಿಯುವ ನೀರು, ವೇದಿಕೆ, ವಿದ್ಯುತ್, ಧ್ವನಿವರ್ಧಗಳ ಹಾಗೂ ಜನರೇಟರ, ಆಸನಗಳ ವ್ಯವಸ್ಥೆಗಳ ಜೊತೆಗೆ ಪೋಲಿಸ್ ಬಂದೋಬಸ್ತಿ ವ್ಯವಸ್ಥೆ ಮಾಡಲು ತಿಳಿಸಿದರು. ಶಾಲಾ ಮಕ್ಕಳಿಗೆ ಸಿಹಿ ತಿಂಡಿ ವಿತರಣೆ, ಗಣ್ಯರಿಗೆ ಅಲ್ಪೋಪಹಾರದ ವ್ಯವಸ್ಥೆ ಮಾಡುವದರ ಜೊತೆಗೆ ಕಾರ್ಯಕ್ರಮಕ್ಕೆ ಶಾಲಾ ಮಕ್ಕಳಿಗೆ ಹಳೆ ಬಾಗಲಕೋಟೆಯಿಂದ ನವನಗರಕ್ಕೆ ಬಂದು ಹೋಗಲು ಬಸ್ಸಿನ ವ್ಯವಸ್ಥೆಯನ್ನು ಮಾಡುವಂತೆ ತಿಳಿಸಲಾಯಿತು.

ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ ಮೆರವಣಿಗೆ ಹಾಗೂ ವೇದಿಕೆ ಕಾರ್ಯಕ್ರಮದಲ್ಲಿ ಎಲ್ಲ ಸರ್ಕಾರಿ ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸುವಂತಾಗಬೇಕು. ಸಂಘ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಸಿಇಓ ಮನವಿ ಮಾಡಿಕೊಂಡರು. ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡಿದವರನ್ನು ಗುರುತಿಸಿ ಸನ್ಮಾನಿಸಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲೆಯಾದ್ಯಂತ ಕನ್ನಡಕ್ಕೆ ಮೊದಲ ಆದ್ಯತೆ ನೀಡುವ ಜೊತೆಗೆ ಜಿಲ್ಲೆಯಲ್ಲಿ ಶೇ.60 ರಷ್ಟು ಸಮರ್ಪಕ ಕನ್ನಡ ಅನುಷ್ಠಾನ ಹಾಗೂ ಕನ್ನಡದಲ್ಲಿಯೇ ನಾಮಫಲಕ ಕಡ್ಡಾಯವಾಗಿ ಅಳವಡಿಕೆಗೆ ಕ್ರಮವಹಿಸುವಂತೆ ವಿವಿಧ ಕನ್ನಡಪರ ಸಂಘಟಯ ಪದಾಧಿಕಾರಿಗಳು ಜಿಲ್ಲಾಧಿಕಾರಿಗಳಲ್ಲಿ ಮನವಿ ಮಾಡಿಕೊಂಡರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪ್ರಭಾಕರ ಕೆ, ಕೃಷಿ ಜಂಟಿ ನಿರ್ದೇಶಕ ಲಕ್ಷ್ಮಣ ಕಳ್ಳೆಣ್ಣವರ, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಅಜೀತ್ ಮನ್ನಿಕೇರಿ, ಕೈಮಗ್ಗ ಮತ್ತು ಜವಳ ಇಲಾಖೆಯ ಉಪನಿರ್ದೇಶಕ ಫೀರಜಾದೆ, ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕ ಶಂಕರಲಿಂಗ ಗೋಗಿ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು, ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.


ಕರ್ನಾಟಕ ಸರ್ಕಾರ
ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಕಛೇರಿ,ರಾಮದುರ್ಗ
ಉಪವಿಭಾಗ, ರಾಮದುರ್ಗ ಎಂ.ಎಲ್.ಬಿ.ಸಿ. ಕಾಲೋನಿ,
ರಾಮದುರ್ಗ-591123,
Phone (Off.) 08332-241084 Email: acfrmd1990@gmail.com

ಕ್ರ.ಸಂ.ಸಅಸಂ/ರಾದು/ಉವಿಭಾ/ಟೆಂಡರ್/2025-26/ ದಿನಾಂಕ:18-10-2025

**ಟೆಂಡರ್ ಪ್ರಕಟಣೆ**
**(ಇ-ಪ್ರೊಕ್ಯೂರ್‌ಮೆಂಟ್ ಪೋರ್ಟ್‌ಲ್ ಮೂಲಕ ಮಾತ್ರ)**

ಸಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು, ಪ್ರಾದೇಶಿಕ ಅರಣ್ಯ ಉಪ ವಿಭಾಗ, ರಾಮದುರ್ಗ ಸನ್ 2025-26 ನೇ ಸಾಲಿನಗೆ ರಾಮದುರ್ಗ ಉಪ ವಿಭಾಗ ವ್ಯಾಪ್ತಿಯ ವಿವಿಧ ವಲಯಗಳಲ್ಲಿ ಅರಣ್ಯೀಕರಣ ವಿವಿಧ ಕಾಮಗಾರಿಗಳಿಗೆ ನೊಂದಾಯಿತ ಸಂಸ್ಥೆಗಳಿಂದ ಇ-ಪ್ರೊಕ್ಯೂರಮೆಂಟ್ ಮೂಲಕ ದ್ವಿ-ಲಕೋಟೆ ಪದ್ಧತಿಯಲ್ಲಿ ಟೆಂಡರ ಆಹ್ವಾನಿಸಲಾಗಿದೆ. ಟೆಂಡರ ಫಾರ್ಮಗಳನ್ನು ಹಾಗೂ ನಿಬಂಧನೆಗಳನ್ನೊಳಗೊಂಡ ಟೆಂಡರ ಪುಸ್ತಕವನ್ನು ದಿನಾಂಕ:18-10-2025 ರಿಂದ ಇ-ಪ್ರೊಕ್ಯೂರಮೆಂಟ್ ವೆಬ್‌ಸೈಟ್ www.kppp.karnataka.gov.in ದಲ್ಲಿ ಪಡೆಯಬಹುದು. ಭರ್ತಿಮಾಡಿದ ಟೆಂಡರ ಫಾರ್ಮಗಳನ್ನು ದಿನಾಂಕ:05-11-2025 ಮಧ್ಯಾಹ್ನ 16.00 ಗಂಟೆಯವರೆಗೆ ಇಪೋರ್ಟದಲ್ಲಿ ಅಪ್‌ಲೋಡ್ ಮಾಡಬಹುದು. ಸ್ವೀಕರಿಸಿದ ಟೆಂಡರನ ತಾಂತ್ರಿಕಬಿಡ್‌ನ್ನು ದಿನಾಂಕ:06-11-2025 ಅಪರಾಹ್ನ 16.15 ಗಂಟೆಗೆ ಮತ್ತು ಹಣಕಾಸು (Financial) ಬಿಡ್‌ನ್ನು ದಿನಾಂಕ:07-11-2025 ಅಪರಾಹ್ನ 16.30 ಗಂಟೆಗೆ ಅಥವಾ ಸದರಿ ದಿನದಂದು ಸರಕಾರಿ ರಜೆ ಘೋಷಣೆಯಾದಲ್ಲಿ ಮುಂದಿನ ಸರಕಾರಿ ಕೆಲಸದ ದಿನದಂದು ತೆರೆಯಲಾಗುವುದು. ಹೆಚ್ಚಿನ ವಿವರಗಳನ್ನು ಕಚೇರಿ ವೇಳೆಯಲ್ಲಿ ಕೆಲಸದ ದಿನಗಳಂದು ಪಡೆಯಬಹುದು.

ಸಹಿ/-ಟೆಂಡರ್ ಆಹ್ವಾನಿಸುವ ಪ್ರಾಧಿಕಾರ,
ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ,
ರಾಮದುರ್ಗ ಉಪ ವಿಭಾಗ, ರಾಮದುರ್ಗ

DIPR/BGM/RO-NO-1198/KSMCA/2025-26


BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016 DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue : 217, Postal Reg No. PMG/KA/NK/BM/135/25-27 / POST AT Vantamury Colony Post Office